ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallmmanudi@gmail.com E-paper: www.mallmmanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy

VOLUME-ಸಂಪುಟ:12 | ISSUE- ಸಂಚಿಕೆ: 347 | PAGE- ಪುಟ 8 | ಶನಿವಾರ 18.01.2025 ಬೀದರ | RNI NO:KARKAN/2011/48371 | RS.ಬೆಲೆ 2/–

# ಬಾಯಿ ಮುಚ್ಚಿಕೊಂಡಿರಬೇಕು: ಖರ್ಗೆ ಖಡಕ್ ಎಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ:ಜ.17:ಎಲ್ಲರೂ ಬಾಯಿ ಮುಚ್ಚಿಕೊಂಡು ಇರಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಖಡಕ್ ಎಚ್ಚರಿಕೆ ನೀಡಿದ್ದಾರೆ.

ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಬಹಿರಂಗ ಒತ್ತಾಯ ಕೇಳಿ ಬರುತ್ತಿರುವ ಬಗ್ಗೆ ಶುಕ್ರವಾರ ಬೆಳಗಾವಿಯಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಖರ್ಗೆ, ನಿಮಗೆ ಕೊಟ್ಟ ಕೆಲಸ ಮೊದಲು ನೀವು ಮಾಡಿ, ಯಾವಾಗ ಏನು ಮಾಡಬೇಕು ಎಂಬುದು ಹೈಕಮಾಂಡ್ ಗೆ ಗೊತ್ತಿದೆ ಎಂದು ಖಡಕ್ಕಾಗಿ ಹೇಳಿದರು.

ಕೆಲವರು ಹೇಳಿದಂತೆ ಹೈಕಮಾಂಡ್ ನಡೆಯೋದಿಲ್ಲ ಅಲ್ವಾ, ಎಲ್ಲರೂ ಬಾಯಿ ಮುಚ್ಚಿಕೊಂಡು ಕೆಲಸ ಮಾಡಿ, ಯಾವಾಗ ಏನು ನಿರ್ಣಯ ತೆಗೆದುಕೊಳ್ಳಬೇಕು ಅದು ನಮಗೆ ಬಿಟ್ಟಿದ್ದು. ಇದೆಲ್ಲ ಮಾತಾಡುವುದರಿಂದ ಪ್ರಯೋಜನಕ್ಕೆ ಬರುವುದಿಲ್ಲ. ಇದನ್ನೆಲ್ಲಾ ನೋಡಿಕೊಳ್ಳಲು ಹೈಕಮಾಂಡ್ ಇದೆ, ನಾವೆಲ್ಲ ಇದ್ದೇವೆ, ನಾವು ನಿರ್ಣಯ ತೆಗೆದುಕೊಳ್ಳುತ್ತೇವೆ ಎಂದರು.

ನೀವು ಹೇಳಿದಾಗ ಬದಲಾವಣೆ ಮಾಡಲು ಆಗಲ್ಲ, ಹೈಕಮಾಂಡ್ ಯಾವಾಗ ನಿರ್ಣಯ ತೆಗೆದುಕೊಳ್ಳಬೇಕು ಆಗ ತೆಗೆದುಕೊಳ್ಳುತ್ತದೆ. ಈ ರೀತಿ ಹೇಳಿಕೆ ನೀಡಬೇಡಿ. ಇದರಿಂದ ಪಕ್ಷಕ್ಕೆ ದೊಡ್ಡ ಹಾನಿಯಾಗುತ್ತದೆ, ರಾಜ್ಯದಲ್ಲಿ ದಯವಿಟ್ಟು ಕಾಂಟ್ರವರ್ಸಿ ಮಾಡಬೇಡಿ ಎಂದು ಎಚ್ಚರಿಕೆ ನೀಡಿದರು.

ಆಗ ಸಿಎಂ ಚೇಂಜ್ ಆಗ್ತಾ–ರೆ, ಈಗ ಡಿಸಿಎಂ ಚೇಂಜ್ ಆಗ್ತಾರೆ ಅಂತೆಲ್ಲ ಹೇಳಬೇಡಿ. ನಾನಿದ್ದೇನೆ, ರಾಹುಲ್ ಗಾಂಧಿ ಇದ್ದಾರೆ. ಯಾವಾಗ ಏನು ಮಾಡಬೇಕು ಅಂತ ನಮಗೆ ಟಾರ್ಗೆಟ್ ಇರುತ್ತದೆ. ಅದನ್ನು ನೋಡಿಕೊಂಡು ನಾವೇ ನಿರ್ಣಯ ಮಾಡುತ್ತೇವೆ ಎಂದು ಹೇಳಿದರು.

## ಆರ್ಥಿಕ ಬೆಳವಣಿಗೆಗೆ ಕೃಷಿಯೊಂದಿಗೆ ಹೈನುಗಾರಿಕೆ ಕೋಳಿ, ಮೀನು ಸಾಕಾಣಿಕೆಗೆ ಆದ್ಯತೆ ನೀಡಿ:ಸಚಿವ ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ

ಬೀದರ:ಜ.17:ಪ್ರಕೃತಿ ವಿಕೋಪ ಬದಲಾಗುತ್ತಿರುವ ಹವಾಮಾನ ವೈಪರಿತ್ಯ ಎದುರಿಸುವ ನಿಟ್ಟಿನಲ್ಲಿ ರೈತರು ಆರ್ಥಿಕವಾಗಿ ಸಬಲರಾಗಲು ಕೃಷಿಯ ಜೊತೆಯಲ್ಲಿ ಹೈನುಗಾರಿಕೆ, ಕೋಳಿ ಹಾಗೂ ಮೀನು ಸಾಕಾಣಿಕೆಗೂ ಕೂಡ ಮಹತ್ವ ನೀಡುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ತಿಳಿಸಿದರು.

ಅವರು ಇಂದು ಬೀದರನ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ 20ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಜಾನುವಾರು ಕುಕ್ಕುಟ ಹಾಗೂ ಮತ್ಸ್ಯಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬೀದರ ಜಿಲ್ಲೆಯಲ್ಲಿ ಶೇ.70 ರಷ್ಟು ಜನ ಕೃಷಿ ಮೇಲೆ ಅವಲಂಬಿತರಾಗಿದ್ದಾರೆ. ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಬರಬೇಕು. ಪ್ರಕೃತಿ ವಿಕೋಪದಂತಹ ಪರಿಸ್ಥಿತಿಯಲ್ಲಿ ರೈತರಿಗೆ ಸಾಕಷ್ಟು ನಷ್ಟವಾಗುತ್ತದೆ. ಈ ಹಿನ್ನೆಲೆಯಲ್ಲಿ ರೈತರು ಕೃಷಿ ಜೊತೆ ಸಹ ಉತ್ಪಾದನೆಗಳಾದ ಪಶು ಸಂಗೋಪನೆಗೆ ಆದ್ಯತೆ ನೀಡಬೇಕೆಂದರು.

ಜಿಲ್ಲೆಯಲ್ಲಿ ಕೃಷಿಪೂರಕ ಸಾಕಷ್ಟು ಉತ್ತಮ ವಾತಾವರಣವಿದ್ದು ನೈಸರ್ಗಿಕ ಸಂಪತ್ತಭರಿತವಾಗಿದೆ. ಈ ಭಾಗದಲ್ಲಿ ಹೈನುಗಾರಿಕೆ, ಕೋಳಿ, ಕುರಿ ಮತ್ತು ಮೀನು ಸಾಕಾಣಿಕೆಗೆ ಹೆಚ್ಚಿನ ಒತ್ತು ನೀಡಬೇಕಾಗಿದೆ. ಈ ಹಿನ್ನೆಲೆಯಲ್ಲಿ 20 ವರ್ಷಗಳ ಹಿಂದೆ ಬೀದರ ಜಿಲ್ಲೆಯಲ್ಲಿ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಆರಂಭಿಸಲಾಗಿದೆ. ಈಗಿನ ಯುವಕರಿಗೆ ಹಾಗೂ ಯುವಜನಾಂಗಕ್ಕೆ ಈ ತರಬೇತಿಗಳನ್ನು ಆರ್ಥಿಕ

(2ನೇ ಪುಟ ನೋಡಿ)

## ದರೋಡೆ ಪ್ರಕರಣ; ಆರೋಪಿಗಳ ಬಂಧನಕ್ಕೆ ಪೊಲೀಸರ ತಂಡ ಹೈದರಾಬಾದ್‌ಗೆ ರವಾನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 17 : ದರೋಡೆ ಪ್ರಕರಣದ ಆರೋಪಿಗಳ ಗುರುತು ಪತ್ತೆಯಾಗಿದ್ದು, ಇಬ್ಬರನ್ನು ಬಂಧಿಸಲು ಬೀದರ್ ಜಿಲ್ಲಾ ಪೊಲೀಸರ ತಂಡವನ್ನು ಹೈದರಾಬಾದ್‌ಗೆ ಕಳಿಸಲಾಗಿದೆ ಎಂದು ರಾಜ್ಯ ಅಪರಾಧ ವಿಭಾಗದ ಎಡಿಜಿಪಿ ಪಿ. ಹರಿಶೇಖರನ್ ತಿಳಿಸಿದರು.

ನಗರದ ಛತ್ರಪತಿ ಶಿವಾಜಿ ವೃತ್ತದಲ್ಲಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಮುಖ್ಯ ಕಚೇರಿ ಎದುರು ಗುರುವಾರ (ಜ.16) ನಡೆದ ದರೋಡೆಯ ಘಟನಾ ಸ್ಥಳವನ್ನು ಶುಕ್ರವಾರ ಪರಿಶೀಲಿಸಿದ ನಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ವಿವರಿಸಿದರು.

ನಮ್ಮ ಅಪರಾಧ ವಿಭಾಗದ ಪೊಲೀಸರು, ಸೆಲ್ ಫೋನ್ ಅನಾಲಿಸಿಸ್ ತಂಡಗಳು ಒಗ್ಗೂಡಿ ಕೆಲಸ ಮಾಡಿವೆ. ಈ ದರೋಡೆ ಪ್ರಕರಣದಲ್ಲಿ ಭಾಗಿಯಾದವರು ಈ ಹಿಂದೆ ಕೂಡ ಹಲವು ದರೋಡೆ ಪ್ರಕರಣಗಳಲ್ಲಿ ಶಾಮಿಲಾಗಿರುವ ಮಾಹಿತಿ ಲಭ್ಯವಾಗಿದೆ ಎಂದು ಹೇಳಿದರು.

ಘಟನೆಗೆ ಸಂಬಂಧಿಸಿದಂತೆ ನಮಗೆ ಮಹಾರಾಷ್ಟ್ರ ಹಾಗೂ ತೆಲಂಗಾಣದ ಪೊಲೀಸರು ಉತ್ತಮ ಸಹಕಾರ ಕೊಟ್ಟಿದ್ದಾರೆ. ನಾವು ಒಟ್ಟು ಎಂಟು

(2ನೇ ಪುಟ ನೋಡಿ)

## ಸಿಸಿ ರಸ್ತೆ ಕಳಪೆ; ತನಿಖೆಗೆ ಒತ್ತಾಯ



(ಮಲ್ಲಮ್ಮ ನುಡಿ ವಾರ್ತೆ)

ಚಿಟಗುಪ್ಪ:–ತಾಲೂಕಿನ ಮಂಗಲಗಿ ಗ್ರಾಮದಿಂದ ನಾಗನಕೇರಾ ಗ್ರಾಮಕ್ಕೆ ಮತ್ತು ಸರ್ಕಾರಿ ಪ್ರೌಢ ಶಾಲೆ ಹೋಗುವ ಸಿಸಿ ರಸ್ತೆಯನ್ನು ಕಳಪೆ ಮಟ್ಟದ ಕಾಮಗಾರಿಯಾಗುತ್ತಿದೆ ಎಂದು ಗ್ರಾಮ ಪಂಚಾಯತ್ ಸದಸ್ಯ ಇಸ್ಮಾಯಿಲ್ ಪಟೇಲ್ ಆರೋಪಿಸಿದ್ದಾರೆ. ರಸ್ತೆ ಮತ್ತು ಚರಂಡಿ ಮಾಡಲು ಗ್ರಾಮ

(2ನೇ ಪುಟ ನೋಡಿ)

## ಮಹಾಪುರುಷರಿಗೆ ಅವಮಾನ ಸಲ್ಲದು: ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಜ.17:ಇತ್ತೀಚಿಗೆ ಬೀದರ್ ಜಿಲ್ಲೆಯ ಬೀದರ್ ತಾಲೂಕಿನ ವಿಳಾಸಪುರ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ಪುತ್ಥಳಿಗೆ ಹಾಗೂ ಭಾಲ್ಕಿ ತಾಲೂಕಿನ ದಾಡಗಿ ಕ್ರಾಸ್ ಬಳಿಯ ವಿಶ್ವಗುರು

(2ನೇ ಪುಟ ನೋಡಿ)

## ಶರಣರ ಸಂದೇಶ ಜೀವನದಲ್ಲಿ ಅಳವಡಿಸಿಕೊಳ್ಳಿ:ಪ್ರದೀಪ ಗುರೂಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.17:ಮಹಾತ್ಮರು, ಯೋಗಿಗಳು,ದಾರ್ಶನಿಕರು,ಶರಣರ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಬದುಕು ಸಾರ್ಥಕವಾಗುತ್ತದೆ ಎಂದು ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ ಹೇಳಿದ್ದಾರೆ. ತಾಲೂಕಿನ ಬೆನಕಟ್ಟಿ ಗ್ರಾಮದ ಹೇಮರಡ್ಡಿ ಮಲ್ಲಮ್ಮ ಪ್ರೌಢಶಾಲೆಯಲ್ಲಿ ಮಹಾಯೋಗಿ ವೇಮನರ ಜಯಂತ್ಯೋತ್ಸವದ ಅಂಗವಾಗಿ ಗುರುವಾರ ಹೇಮ ವೇಮನ ಸದ್ಬೋಧನ ಪೀಠ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ವೇಮನರ ವಚನ ಕಂಠಪಾಠ ಹಾಗೂ ವಚನ ಗಾಯನ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸುವ ಹಾಗೂ ವಿಶೇಷ ಉಪನ್ಯಾಸ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿ, ಮಹಾಯೋಗಿ ವೇಮನರ ವಚನಗಳನ್ನು ಅರ್ಥೈಸಿಕೊಂಡು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಶಿಕ್ಷಕ ಶಂಕರ ಯಡಹಳ್ಳಿ ಮಾತನಾಡಿ, ಮಕ್ಕಳಲ್ಲಿ ಕಲಿಕೆಯ ಬಗ್ಗೆ ಆಸಕ್ತಿ ಇರಬೇಕು. ಶ್ರದ್ಧೆಯಿಂದ ಕಲಿತು ಸಾಧನೆ ಮಾಡುವ ಮೂಲಕ ಹೆತ್ತವರು, ಕಲಿತ ಶಾಲೆಗೆ ಕೀರ್ತಿ ತರಬೇಕು ಎಂದರು.

ದಿವ್ಯ ಸಾನಿಧ್ಯ ವಹಿಸಿದ್ದ ಹುಲ್ಯಾಳ ಸಿದ್ಧ ಓಂಕಾರ ಆಶ್ರಮದ ಶರಣೆ ಜಯಶ್ರೀದೇವಿ, ವೇಮನರ ವಚನಗಳಲ್ಲಿ ಜೀವನದ ಸಾರವೇ ಅಡಗಿದೆ ಎಂದರಲ್ಲದೇ, ದೇಶ ರಕ್ಷಿಸುವ ಸೈನಿಕರನ್ನು, ಜ್ಞಾನ ನೀಡುವ ಗುರುಗಳನ್ನು ಸದಾ ಸ್ಮರಣೆ ಮಾಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವೇಮನರ ವಚನ ಕಂಠಪಾಠ ಹಾಗೂ ವಚನ ಗಾಯನ ಸ್ಪರ್ಧೆಗಳಲ್ಲಿ

(2ನೇ ಪುಟ ನೋಡಿ)

## ಗ್ರಾಮೀಣ ಪ್ರದೇಶದ ಮಕ್ಕಳಿಗೆ ಶಿಕ್ಷಣ ನೀಡುವ ಕಾರ್ಯ ಪ್ರಶಂಸನೀಯ : ಗೆಹ್ಲೋಟ




ಮಲ್ಲಮ್ಮ ನುಡಿ


ಬಳ್ಳಾರಿ:ಜ.17: ಭಾರತದ ಭವಿಷ್ಯತ್ತಿಗೆ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಶಿಕ್ಷಣ ನೀಡುವ ಕಾರ್ಯ ಪ್ರಶಂಸನೀಯ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ ಹೇಳಿದ್ದಾರೆ.

ಅವರು ಬಳ್ಳಾರಿ ಜಿಲ್ಲೆ ಕುರುಗೋಡು ತಾಲೂಕಿನ ದಮ್ಮೂರಿನ ಎಸ್.ಬಿ.ಗ್ರೂಪ್ ಆಫ್ ಇನ್‌ಸ್ಟಿಟ್ಯೂಟ್ಸ್‌ನ ಬೃಂದಾ ನ್ಯಾಷನಲ್ ಪಬ್ಲಿಕ್ ಶಾಲೆ, ಬೃಂದಾ ಪಿಯು ಕಾಲೇಜ್, ಬೃಂದಾ ಡಿಗ್ರಿ ಕಾಲೇಜ್ ಮತ್ತು ಸ್ಕಂದ ಇನ್ಸಿ ಟ್ಯೂಟ್ ಆಫ್ ನರ್ಸಿಂಗ್ ಕಾಲೇಜ್‌ಗಳ ವಾರ್ಷಿಕೋತ್ಸವ ಮತ್ತು ಕಟ್ಟಡಗಳ ಉದ್ಘಾಟನೆ ನೆರವೇರಿಸಿ ಮಾತನಾಡಿ,ಶಿಕ್ಷಣ ವಿಷಯದಲ್ಲಿ ಭಾರತ ಪುರಾತನ ಕಾಲದಿಂದಲೂ ಮಹತ್ವ ಪಡೆದಿದೆ.ಖಗೋಳ ಶಾಸ್ತ್ರದಲ್ಲಿ ಭಾರತೀಯರ ಕೊಡುಗೆ ಮಹತ್ವದ್ದು, ತಕ್ಷಶಿಲ, ನಳಂದ ವಿವಿಗಳಿಂದ ನೀತಿ, ಅರ್ಥ, ರಾಜಕೀಯ ಮೊದಲಾದ ಶಾಸ್ತ್ರಗಳನ್ನು ಕಲಿಸಲಾಗುತ್ತಿತ್ತು. ಅಂತಹ ವಿವಿಗಳು ಪರಕೀಯರಿಂದ ನಾಶವಾಗಿದ್ದವು.ಪ್ರಧಾನಿಯವರು ನಳಂದ ವಿವಿಯನ್ನು ಪುನರ್ ನಿರ್ಮಿಸಿದ್ದಾರೆಂದರು.

ದೇಶದ ಆರ್ಥಿಕ ಸ್ಥಿತಿ ವಿಶ್ವದಲ್ಲಿ ಐದನೇ ಸ್ಥಾನದಲ್ಲಿದ್ದು ಉತ್ತಮವಾಗಿದೆ ಮತ್ತಷ್ಟು ಸುಧಾರಣೆಯಾಗಬೇಕಿದೆ. ಶಿಕ್ಷಣದಿಂದ ಮಾತ್ರ ವ್ಯಕ್ತಿ ವಿಕಾಸ ಸಾಧ್ಯ, ಶಿಕ್ಷಣ ಜೀವನದಲ್ಲಿ ಮಾನಸಿಕ ಮತ್ತು ಬೌದ್ಧಿಕ

(2ನೇ ಪುಟ ನೋಡಿ)

## ಶ್ರೀ ಗವಿಸಿದ್ದೇಶ್ವರ ಜಾತ್ರೆಯಲ್ಲಿ ಗಮನ ಸೆಳೆದ ಬೃಹತ್ ಗಾತ್ರದ ಗಾಳಿಪಟಗಳ ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.17: ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ಗವಿಮಠದ ಬಾನಂಗಳದಲ್ಲಿ ಬಣ್ಣ–ಬಣ್ಣದ ಪತಂಗಗಳು ಹಾರಾಡಿ ಸಾರ್ವಜನಿಕರ ಗಮನ ಸೆಳೆದವು.

2025ರ ಗವಿಶ್ರೀ ಕ್ರೀಡಾ ಉತ್ಸವದ ಭಾಗವಾಗಿ ಶುಕ್ರವಾರ ಶ್ರೀ ಗವಿಮಠ ಆವರಣದಲ್ಲಿ ಜರುಗಿದ ಬೃಹತ್ ಗಾತ್ರದ ಗಾಳಿಪಟಗಳ ಪ್ರದರ್ಶನದಲ್ಲಿ ಓಡಿಸ್ಸಾ, ಗುಜರಾಜ, ಕೇರಳ

(2ನೇ ಪುಟ ನೋಡಿ)

# ಒಂದನೇ ಪುಟದಿಂದ

## ಕಾರ್ಯ ಪ್ರಶಂಸನೀಯ : ಗೆಹ್ಲೋಟ

ವಿಕಾಸ ನೀಡಲಿದೆ ಎಂದರು.

ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ದೇಶದ ಹಲವು ರಾಜ್ಯಗಳಲ್ಲಿ ಜಾರಿಯಲ್ಲಿದೆ. ಕರ್ನಾಟಕದಲ್ಲೂ ಜಾರಿ ಇದೆ. ಮಾತೃಭಾಷೆಯಲ್ಲಿ ಶಿಕ್ಷಣ ನೀಡಬೇಕೆಂಬುದು ಸರಿಯಾದ ವಿಚಾರ. ಆಯಾ ರಾಜ್ಯಗಳಲ್ಲಿ ಎಲ್ಲಾ ರೀತಿಯ ಶಿಕ್ಷಣ ನೀಡಬೇಕಿದೆ. ಇದಕ್ಕೆ ರಾಷ್ಟ್ರೀಯ ಶಿಕ್ಷಣ ನೀತಿ ಅಡ್ಡಿಯಾಗದು ಎಂದರು.

ಅಧುನಿಕ ಭಾರತದಲ್ಲಿ ವಿದ್ಯಾರ್ಥಿಗಳು ಕೇವಲ ಓದಿದರೆ ಅಷ್ಟೇ ಸಾಲದು ಕ್ರೀಡೆ ಮತ್ತಿತರ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬೇಕು. ಹೊಸ ಸಂಕಲ್ಪಗಳನ್ನು ಕೈಗೊಂಡು ಮುನ್ನಡೆಯಿರಿ ಈ ಶಿಕ್ಷಣ ಸಂಸ್ಥೆ ಭವಿಷ್ಯದಲ್ಲಿ ವಿವಿಯಾಗಲು ಎಲ್ಲಾ ರೀತಿಯ ಸಹಕಾರ ನೀಡಲಿದೆ ಎಂದರು.

ಸಮಾರಂಭದಲ್ಲಿ ಶಾಸಕ ಗಾಲಿ ಜನಾರ್ಧನರೆಡ್ಡಿ ಮಾತನಾಡಿ, ಬೆಂಗಳೂರು ನಂತರ ಬಳ್ಳಾರಿ ಅಭಿವೃದ್ಧಿ ಜಿಲ್ಲೆಯನ್ನಾಗಿ ಮಾಡುವ ಕನಸಿತ್ತು. ಈ ದಿಶೆಯಲ್ಲಿ ಭವ್ಯ ಮತ್ತು ಶೇಖರ್ ಅವರು ಇಂತಹ ಗ್ರಾಮೀಣ ಪ್ರದೇಶದಲ್ಲಿ ಈ ಸಂಸ್ಥೆ ಆರಂಭಿಸಿ ಉತ್ತಮ ಶಿಕ್ಷಣ ನೀಡುತ್ತಿದ್ದಾರೆ. ಮುಂಬರುವ ದಿನಗಳಲ್ಲಿ ಸಂಸ್ಥೆ ಇನ್ನು ಹೆಚ್ಚಿನ ಸಾಧನೆ ಮಾಡಲಿ ಎಂದು ಹಾರೈಸಿದರು

ರಾಜ್ಯ ಕೆಎಂಎಫ್ ಮಾಜಿ ಅಧ್ಯಕ್ಷ ಜಿ.ಸೋಮಶೇಖರ್ ರೆಡ್ಡಿ, ಬೃಂದಾ ಪದವಿ ಕಾಲೇಜ್ ಮತ್ತು ಸ್ಕಂದ ಇನ್ಸಿಟಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜ್ ನ ಮುಖ್ಯಸ್ಥರಾದ ದಮ್ಮೂರು ಶೇಖರ್, ಅವರ ಧರ್ಮಪತ್ನಿ ಹಾಗೂ ಎಸ್.ಬಿ.ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ ನ ಸಂಸ್ಥಾಪಕರು ಹಾಗೂ ಸಿಇಓ ಡಾ.ಭವ್ಯ ಶೇಖರ್, ಬಿಜೆಪಿಯ ಧುರೀಣೆ ಗಾಲಿ ಲಕ್ಷ್ಮೀ ಅರುಣಾ, ನಿರ್ದೇಶಕ ಭವನ್ ಎಂ.ಎಸ್., ಸೇರಿದಂತೆ ಪ್ರಾಚಾರ್ಯರು, ಪ್ರಾಧ್ಯಾಪಕರು, ಉಪನ್ಯಾಸಕರು, ವಿದ್ಯಾರ್ಥಿ ವೃಂದ ಈ ಸಂದರ್ಭದಲ್ಲಿ ಇದ್ದರು.

## ಬೃಹತ್ ಗಾತ್ರದ ಗಾಳಿಪಟಗಳ ಪ್ರದರ್ಶನ

ಸೇರಿದಂತೆ ದೇಶದ ವಿವಿಧ ರಾಜ್ಯಗಳ ಮತ್ತು ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಯ ತಂಡಗಳು ಭಾಗವಹಿಸಿ, ಹುಲಿ, ಚಿರತೆ, ಕುದರೆ, ಮೀನು ಹಾಗೂ ಇತರೆ ಮಾದರಿಯ ವಿಭಿನ್ನ ಗಾಳಿಪಟಗಳನ್ನು ಹಾರಿಸಿ ಜನರ ಆಕರ್ಷಣೆಯನ್ನು ಸೆಳೆದವು. ಮಕ್ಕಳು ಹಾಗೂ ಸಾರ್ವಜನಿಕರು ರಂಗು ರಂಗಿನ ಗಾಳಿಪಟಗಳ ಹಾರಾಟವನ್ನು ನೋಡಿ ಚಪ್ಪಾಳೆ ತಟ್ಟಿ ಖುಷಿಪಟ್ಟರು.

ಗಾಳಿಪಟಗಳ ಪ್ರದರ್ಶನ ಸ್ಥಳಕ್ಕೆ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ಗುಪ್ತಾ ಅವರು ಭೇಟಿ ನೀಡಿ, ಬಳಿಕ ಮಾತನಾಡಿ, ಗಾಳಿಪಟ ಉತ್ಸವವನ್ನು ಕೊಪ್ಪಳಕ್ಕೆ ಪರಿಚಯಿಸುವ ಉದ್ದೇಶದಿಂದ ಬೃಹತ್ ಗಾತ್ರದ ಗಾಳಿಪಟಗಳ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ. ಗಾಳಿಪಟ ಪ್ರದರ್ಶನಗಳು ಹೆಚ್ಚಾಗಿ ಸಮುದ್ರ ತೀರದ ಪ್ರದೇಶಗಳಲ್ಲಿ ನಡೆಯುತ್ತದೆ. ಅಂತಹ ಉತ್ಸವಗಳಿಗೆ ಹೋಗಲಾಗದ ನಮ್ಮ ಗ್ರಾಮೀಣ ಭಾಗದ ಜನರಿಗೆ ಶ್ರೀ ಗವಿಸಿದ್ದೇಶ್ವರ ಜಾತ್ರೆಯಲ್ಲಿ ಗಾಳಿಪಟಗಳ ಪ್ರದರ್ಶನವನ್ನು ವೀಕ್ಷಿಸುವ ಅವಕಾಶ ಕಲ್ಪಿಸಲಾಗಿದೆ. ಈ ಪ್ರದರ್ಶನದಲ್ಲಿ ಗುಜರಾತ, ಓಡಿಸ್ಸಾ, ಕೇರಳ ಮತ್ತು ನಮ್ಮ ಕರ್ನಾಕಟ ರಾಜ್ಯದ ತಂಡಗಳು ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಶಸ್ತಿ ಪಡೆದವರು ಸಹ ಪಾಲ್ಗೊಂಡಿದ್ದಾರೆ. ರಾತ್ರಿಯೂ ಸಹ ಎಲ್.ಇ.ಡಿ ಗಾಳಿಪಟಗಳ ಪ್ರದರ್ಶನವು ನಡೆಯಲಿದ್ದು, ಸಾರ್ವಜನಿಕರು ಇದನ್ನು ವೀಕ್ಷಿಸಿ ಆನಂದಿಸಬಹುದಾಗಿದೆ ಎಂದು ಹೇಳಿದರು.

ಭಾರತದ ಕೈಟ್ ಮ್ಯಾನ್ ಎಂದೇ ಪ್ರಸಿದ್ದರಾದ ವಿ.ಕೃಷ್ಣಜಿ ರಾವ್ ಅವರು ಮಾತನಾಡಿ, ಗಾಳಿಪಟಗಳನ್ನು ಮೊದಲು ಬಿದಿರಿನ ಮೂಲಕ ತಯಾರಿಸಿ ಹಾರಿಸುತ್ತಿದ್ದೇವು. ಈಗ ವಿಭಿನ್ನ ರೂಪದ ಬಟ್ಟೆಗಳಲ್ಲಿ ಸಿದ್ದಪಡಿಸಿ ಹಾರಿಸಲಾಗುತ್ತಿದೆ. ಫೈಲೆಟ್ ಕೈಟ್, ಹುಲಿ, ಕುದರೆ, ಮೀನು, ಹಸು, ಆಮೆ ಹೀಗೆ ಹಲವಾರು ಬಗೆಯ ಗಾಳಿಪಟಗಳನ್ನು ಮಾಡಿ ಹಾರಿಸಲಾಗುತ್ತಿದೆ. ಜಾತ್ರೆಯಲ್ಲಿ ಗಾಳಿಪಟ ಉತ್ಸವ ಹಮ್ಮಿಕೊಳ್ಳುವುದರಿಂದ ಹೆಚ್ಚಿನ ಜನರಿಗೆ ಮನರಂಜನೆ ಸಿಗುತ್ತದೆ. ಗವಿಸಿದ್ದೇಶ್ವರ ಜಾತ್ರೆಯಲ್ಲಿ ಗಾಳಿಪಟಗಳ ಪ್ರದರ್ಶನ ಹಮ್ಮಿಕೊಂಡಿರುವುದರಿಂದ ಜನರು ತುಂಬಾ ಉತ್ಸಾಹದಿಂದ ಇವುಗಳ ವೀಕ್ಷಣೆ ಮಾಡುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎ.ಬಸವರಾಜ ಸೇರಿದಂತೆ ವಿವಿಧ ರಾಜ್ಯ ಮತ್ತು ಜಿಲ್ಲೆಗಳಿಂದ ಆಗಮಿಸಿದ ಗಾಳಿಪಟಗಳನ್ನು ಹಾರಿಸುವ ತಂಡಗಳ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು, ದೈಹಿಕ ಶಿಕ್ಷಕರು, ವಿವಿಧ ಶಾಲಾ ಕಾಲೇಜುನ ಮಕ್ಕಳು ಸೇರಿದಂತೆ ಹಲವಾರು ಜನರು ಉಪಸ್ಥಿತರಿದ್ದರು.

## ಕೋಳಿ, ಮೀನು ಸಾಕಾಣಿಕೆಗೆ ಆದ್ಯತೆ ನೀಡಿ:ಸಚಿವ ಖಂಡ್ರೆ

ಸಬಲೀಕರಣವಾಗುವ ಯೋಜನೆಗಳ ಕುರಿತು ಅಗತ್ಯ ಮಾಹಿತಿ ಹಾಗೂ ತರಬೇತಿಯನ್ನು ನೀಡಬೇಕಿದೆ. ವಿಜ್ಞಾನ ತಂತ್ರಜ್ಞಾನ ಬದಲಾದಂತೆ ವಿಜ್ಞಾನಿಗಳು ಹೊಸ-ಹೊಸ ತಳಿಗಳನ್ನು ಬೆಳಕಿಗೆ ತರುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರೈತರು ಯಾವ ತಳಿ ಬೆಳೆದರೆ ಹೆಚ್ಚಿನ ಲಾಭವಾಗುತ್ತದೆ ಎಂಬ ಬಗ್ಗೆ ಅಗತ್ಯ ತರಬೇತಿ ಅಗತ್ಯವಿರುತ್ತದೆ. ಜಿಲ್ಲೆಯಲ್ಲಿ ಈಗಾಗಲೇ ಒಂದೂವರೆ ಲಕ್ಷ ಹಾಲು ಉತ್ಪಾದಿಸಲಾಗುತ್ತದೆ. ಇನ್ನು ಹೆಚ್ಚಿನ ಹಾಲು ಉತ್ಪಾದನೆಗೆ ಮಹಿಳೆಯರು ಒತ್ತು ನೀಡಬೇಕಿದೆ. ಹಾಲಿನ ಉಪ ಉತ್ಪಾದನಗಳಿಗೂ ಸಹ ಮಾರುಕಟ್ಟೆ ಲಭ್ಯವಾಗಬೇಕಾಗಿದೆ. ಸರ್ಕಾರವು ಹೈನುಗಾರಿಕೆ ಸೇರಿದಂತೆ ಕೃಷಿ ಪೂರಕವಾದಂತಹ ಚಟುವಟಿಕೆಗಳಿಗೆ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ. ಬಡ್ಡಿ ರಹಿತ ಸಾಲ, ರೋಗಗಳನ್ನು ತಡೆಗಟಲು ಜಾನುವಾರುಗಳಿಗೆ ಲಸಿಕೆ ನೀಡಲಾಗುತ್ತಿದೆ. ಉತ್ತಮ ಮೇವಿನ ಕಿಟ್ಟುಗಳನ್ನು ನೀಡಲಾಗುತ್ತಿದೆ. ರೈತರು ಹಾಗೂ ವಿಜ್ಞಾನಿಗಳ ಜೊತೆ ಸಂವಾದ ನಡೆಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಅಗತ್ಯವಾದಂತಹ ಆಡಳಿತ ಕಟ್ಟಡ ನಿರ್ಮಾಣಕ್ಕೆ ಅಗತ್ಯ ಅನುದಾನ ಮಂಜೂರಾತಿಗಾಗಿ ಮುಖ್ಯಮಂತ್ರಿ ಜೊತೆ ಚರ್ಚಿಸುವುದಾಗಿ ತಿಳಿಸಿದರು. ತಾತ್ಕಾಲಿಕ ಬೋಧಕ-ಬೋಧಕೇತರ ಹುದ್ದೆಗಳ ಭರ್ತಿಗೂ ಸಹ ಕ್ರಮ ಕೈಗೊಳ್ಳಲಾಗುವುದು. ಅಲ್ಲದೇ ಕೆಕೆಆರ್‌ಡಿಬಿ ಅಡಿಯಲ್ಲಿ ಹೆಚ್ಚಿನ ಅನುದಾನ ನೀಡಲು ಸಹ ಯೋಜಿಸಲಾಗುವುದೆಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸ್ವರ್ಣ ಸಂಚಿಕೆ ಮತ್ತು ಇತರೆ ಪ್ರಕಟಣೆಗಳ ಬಿಡುಗಡೆ ಹಾಗೂ ತಂತ್ರಜ್ಞಾನ ಆಧಾರಿತ ತಳಿ ಗುರುತಿಸುವ ಮೊಬೈಲ್ ಆ್ಯಪ್ ಲೋಕಾರ್ಪಣೆಗೊಳಿಸಿ ಹಾಗೂ ರಾಜ್ಯದ 31 ಜಿಲ್ಲೆಗಳ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ರೈತರಿಗೆ ಪ್ರಶಸ್ತಿ ಪ್ರಧಾನ ಮಾಡಲಾಯಿತು. ಈ ಸಂದರ್ಭದಲ್ಲಿ ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹಾರಕೂಡ ಮಠದ ಡಾ.ಚನ್ನವೀರ ಶಿವಾಚಾರ್ಯರರು, ಭಾಲ್ಕಿ ಮಠದ ಗುರುಬಸವ ಪಟ್ಟದ್ದೇವರು, ಪಶು ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಆಯುಕ್ತರಾದ ರೂಪಾ, ಬೀದರನ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಕೆ.ಸಿ.ವೀರಣ್ಣ, ವ್ಯವಸ್ಥಾಪಕ ಮಂಡಳಿ ಸದಸ್ಯರುಗಳಾದ ಲತಾ ಡಿ.ಎಚ್. ಡಾ.ವೆಂಕಟಾಚಲ ವಿ.ಎಚ್., ಡಾ.ಎಚ್.ಎಂ.ಜಯಪ್ರಕಾಶ, ಸಂಗಪ್ಪ ದೊಡ್ಡಬಸಪ್ಪಾ ವಾಲೀಕರ, ಬಸವರಾಜ ಪಿ.ಭತಮುರ್ಗೆ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ನಿರ್ದೇಶಕರಾದ ಡಾ.ಮಂಜುನಾಥ ಪಾಳೇಗಾರ, ಮೀನುಗಾರಿಕೆ ಇಲಾಖೆಯ ನಿರ್ದೇಶಕರಾದ ದಿನೇಶ ಕುಮಾರ ಕಲ್ಲೇರ, ಬೀದರ ಕಪಪಮೀವಿವಿ ಕುಲಸಚಿವರಾದ ಡಾ.ಪಿ.ಟಿ.ರಮೇಶ, ಯಾದಲಾಪೂರ ಗ್ರಾಮ ಪಂಚಾಯತ ಅಧ್ಯಕ್ಷರಾದ ಸಪ್ನಾ ಸಜೀವಕುಮಾರ, ಬೀದರ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಡೀನ್ ಡಾ.ಎಂ.ಕೆ.ತಾಂದಳೆ, ವಿಸ್ತರಣಾ ಅಧಿಕಾರಿಗಳಾದ ಬಸವರಾಜ ಅವಟಿ, ವಿವಿಧ ಇಲಾಖೆಗಳ ಉಪನಿರ್ದೇಶಕರುಗಳು ಸೇರಿದಂತೆ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅವಮಾನ ಸಲ್ಲದು: ಪಾಟೀಲ

ಬಸವಣ್ಣನವರ ಪುತ್ಥಳಿಗೆ ಕೆಲವು ಕಿಡಿಗೇಡಿಗಳು ಅವಮಾನ ಮಾಡಿರುವ ಘಟನೆ ನಡೆಯುತ್ತಿವೆ. ಇಂಥಹ ಈ ಘಟನೆಯನ್ನ ತೀವ್ರವಾಗಿ ಖಂಡಿಸುವುದಾಗಿ ಮಾಜಿ ಸಚಿವ ರಾಜಶೇಖರ ಪಾಟೀಲ ತಿಳಿಸಿದ್ದಾರೆ.ಕಿಡಿಗೇಡಿಗಳು ಪದೇ ಪದೇ ಮಹಾತ್ಮರ ಪುತ್ಥಳಿಗಳಿಗೆ ಅವಮಾನಿಸಿ, ಸಮಾಜದಲ್ಲಿ ಅಶಾಂತಿ ಸಷ್ಟಿಸಲು ಪ್ರಯತ್ನಿಸುತ್ತಿದ್ದಾರೆ. ಇಂತಹ ದುಷ್ಟ ಶಕ್ತಿಗಳಿಗೆ ಕಡಿವಾಣ ಹಾಕಿ ಕಠಿಣ ಶಿಕ್ಷೆಗೆ ಒಳಪಡಿಸಬೇಕು. ಮಹಾತ್ಮರ ಪ್ರತಿಮೆಗಳಿಗೆ ಸೂಕ್ತ ರಕ್ಷಣೆ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

## ಪೊಲೀಸರ ತಂಡ ಹೈದರಾಬಾದ್‌ಗೆ ರವಾನೆ

ತಂಡಗಳನ್ನು ರಚಿಸಿದ್ದೆವು. ಬೀದರ್, ಕಲಬುರಗಿ ಹಾಗೂ ಹೈದರಾಬಾದ್‌ಗೆ ಕಳಿಸಿದ್ದೆವು. ಇಬ್ಬರು ಆರೋಪಿಗಳು ಹೈದರಾಬಾದ್‌ನಲ್ಲಿ ಟ್ರಾವೆಲ್ಸ್ ಏಜೆನ್ಸಿ ಟಿಕೆಟ್ ಬುಕ್ ಮಾಡಿ ಬೇರೆ ಕಡೆ ಹೋಗಲು ಯೋಜನೆ ರೂಪಿಸಿದ್ದರು. ನಮ್ಮ ಪೊಲೀಸರು ರೋಶನ್ ಟ್ರಾವೆಲ್ಸ್‌ನಲ್ಲಿ ಕುಳಿತಿದ್ದರು. ವಿಷಯ ತಿಳಿದ ನಂತರ ಟ್ರಾವೆಲ್ಸ್ ವ್ಯವಸ್ಥಾಪಕನ ಮೇಲೆ ಗುಂಡಿನ ದಾಳಿ ನಡೆಸಿ ಪರಾರಿಯಾಗಿದ್ದಾರೆ ಎಂದು ವಿವರಿಸಿದರು.

ಹೈದರಾಬಾದ್ ಪೊಲೀಸರೊಂದಿಗೆ ಸೇರಿಕೊಂಡು ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದೆ. ಎಲ್ಲ ಕೋನಗಳಿಂದ ತನಿಖೆ ನಡೆಯುತ್ತಿದೆ. ಈ ಪ್ರಕರಣದ ಆರೋಪಿಗಳನ್ನು ಬಂಧಿಸುವುದು ನಮ್ಮ ಮೊದಲ ಆದ್ಯತೆ. ಬಳಿಕ ಇತರೆ ವಿಷಯಗಳ ಬಗ್ಗೆ ತನಿಖೆ ನಡೆಸುತ್ತೇವೆ ಎಂದು ಹೇಳಿದರು.

ಕಲಬುರಗಿ ವಲಯ ಡಿಐಜಿ ಅಜಯ್ ಹಿಲೋರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಹಾಜರಿದ್ದರು.

### ಸಚಿವದ್ವಯರ ಭೇಟಿ

ಘಟನಾ ಸ್ಥಳಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ, ಪೌರಾಡಳಿತ ಸಚಿವ ರಹೀಂ ಖಾನ್ ಅವರು ಭೇಟಿ ನೀಡಿ ಪರಿಶೀಲಿಸಿ ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದರು. ತನಿಖೆ ಪ್ರಗತಿಯಲ್ಲಿದೆ. ಆರೋಪಿಗಳನ್ನು ಬಂಧಿಸಲು ಪೊಲೀಸರಿಗೆ ಕಟ್ಟುನಿಟ್ಟಿನ ಸೂಚನೆ ಕೊಡಲಾಗಿದೆ ಎಂದು ಖಂಡ್ರೆ ತಿಳಿಸಿದರು.

## ಶರಣರ ಸಂದೇಶ ಜೀವನದಲ್ಲಿ ಅಳವಡಿಸಿಕೊಳ್ಳಿ:ಪ್ರದೀಪ ಗುರೂಜಿ

ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪಾರಿತೋಷಕ ವಿತರಿಸಲಾಯಿತು. ಕೆ.ಪಿ.ಅರಿಷಿಣಗೋಡಿ, ಕೆ.ಆರ್. ಯಡಹಳ್ಳಿ, ಲಚ್ಚಪ್ಪ ಬಾಳಕ್ಕನವರ, ಟಿ.ಎಚ್.ಸನ್ನಪ್ಪನವರ, ರಂಗಪ್ಪ ಕಟಗೇರಿ, ಸಿ.ಎನ್.ಬಾಳಕ್ಕನವರ, ಮಾಲತೇಶ ಅಮಾತೆಪ್ಪನವರ, ನೀಲಪ್ಪ ಬಾಳಕ್ಕನವರ, ಮುಖ್ಯೋಪಾಧ್ಯಾಯ ಎಂ.ಎ.ಮುನವಳ್ಳಿ, ಸಾವಿತ್ರಿ ಅರಕೇರಿ, ಸ್ವಾತಿ ಸನ್ನಪ್ಪನವರ ಅತಿಥಿಗಳಾಗಿ ಉಪಸ್ಥಿತರಿದ್ದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಶಿಕ್ಷಕ ಜಿ.ಜಿ.ಚಿತ್ತರಗಿ ಸ್ವಾಗತಿಸಿದರು. ಕಸಾಪ ತಾಲ್ಲೂಕು ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಆರ್.ಎಚ್. ಕುಲಕರ್ಣಿ ನಿರೂಪಿಸಿದರು.

ಸ್ಪರ್ಧೆಯ ವಿಜೇತರು:

ವಚನ ಕಂಠಪಾಠ ಸ್ಪರ್ಧೆಯಲ್ಲಿ 10 ನೇ ತರಗತಿಯಲ್ಲಿ 108 ವಚನಗಳನ್ನು ಹೇಳಿದ ಹೇಮಾ ಅಮಾತೆಪ್ಪನವರ ಪ್ರಥಮ, ಸುಕನ್ಯಾ ಕೃಷ್ಣನ್ನವರ ದ್ವಿತೀಯ, ಆರತಿ ಮಾದರ ತೃತೀಯ, 9 ನೇ ತರಗತಿಯಲ್ಲಿ ಮಲ್ಲಮ್ಮ ಗೆಣ್ಣೂರ ಪ್ರಥಮ, ದುರ್ಗಾ ಮಾದರ ದ್ವಿತೀಯ, ಮಲ್ಲಮ್ಮ ನಿಂಬಲಗುಂದಿ ತೃತೀಯ, 8 ನೇ ತರಗತಿಯಲ್ಲಿ ಸಾಕ್ಷಿ ಗಬಗೋಡಿ ಪ್ರಥಮ, ಶ್ರೇಯಾ ಹುಡೇದಮನಿ ದ್ವಿತೀಯ ಮತ್ತು ಸ್ಪಂದನಾ ಹಳದೂರ ತೃತೀಯ ಸ್ಥಾನ ಪಡೆದರು.

ಗಾಯನ ಸ್ಪರ್ಧೆಯಲ್ಲಿ 10 ನೇ ತರಗತಿಯಲ್ಲಿ ಚೈತ್ರಾ ಹಿರೇಕುಂಬಿ ಪ್ರಥಮ, ಯಲ್ಲಕ್ಕ ಮಾದರ ದ್ವಿತೀಯ, ಕಾವೇರಿ ಶಿರೂರ ತೃತೀಯ, 9 ನೇ ತರಗತಿಯಲ್ಲಿ ಮಲ್ಲಮ್ಮ ನಿಂಬಲಗುಂದಿ ಪ್ರಥಮ, ತಾಯವ್ವ ಮೇತ್ರಿ ದ್ವಿತೀಯ, ಕೀರ್ತಿ ಮಾದರ ತೃತೀಯ, 8 ನೇ ತರಗತಿಯಲ್ಲಿ ಶ್ರೇಯಾ ಹುಡೇದಮನಿ ಪ್ರಥಮ, ವಿಜಯಲಕ್ಷ್ಮೀ ಚಲವಾದಿ ದ್ವಿತೀಯ ಮತ್ತು ಶ್ರೇಯಾ ಹಡಪದ ತೃತೀಯ ಸ್ಥಾನ ಗಳಿಸಿದರು.

## ಸಿಸಿ ರಸ್ತೆ ಕಳಪೆ; ತನಿಖೆಗೆ ಒತ್ತಾಯ

ಪಂಚಾಯತ್ ವತಿಯಿಂದ ಗಿಡಗಂಟಿಗಳನ್ನು ಬೆಳೆದಿರುವುದನ್ನು ಸ್ವಚ್ಛಗೊಳಿಸಿದ್ದೇವೆ ಚರಂಡಿ ಮಾಡದೆ, ಕೇವಲ ರಸ್ತೆಯನ್ನು ಮಾತ್ರ ಮಾಡುತ್ತಿದ್ದಾರೆ. ನಿಯಮಗಳನ್ನು ಉಲ್ಲಂಘನೆ ಮಾಡಿ ಲ್ಯಾಂಡ್ ಆರ್ಮಿ ಇಲಾಖೆಯವರು ರಸ್ತೆ ನಿರ್ಮಾಣ ಮಾಡಲಾಗುತ್ತಿದ್ದಾರೆ ಕೂಡಲೇ ಮೇಲಧಿಕಾರಿಗಳು ಹಾಗೂ ಚುನಾಯಿತ ಪ್ರತಿನಿಧಿಗಳು ಈ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಗ್ರಾಮ ಪಂಚಾಯತ್ ಸದಸ್ಯ ಇಸ್ಮಾಯಿಲ್ ಪಟೇಲ್ ಒತ್ತಾಯಿಸಿದ್ದಾರೆ.

## ಸಂಹಾರದ ಸಂಸ್ಕೃತಿ

### ಕಾರ್ಯಕ್ರಮದ ಕರ ಪತ್ರ ಬಿಡುಗಡೆ




(ಮಲ್ಲಮ್ಮ ನುಡಿ ವಾರ್ತೆ)

ಚಿಟಗುಪ್ಪ:-ಸಂಹಾರದ ಸಂಸ್ಕೃತಿ ಕಾರ್ಯಕ್ರಮದ ಕರ ಪತ್ರ ಬಿಡುಗಡೆ

ಕಲ್ಬುರ್ಗಿಯಲ್ಲಿ ನಡೆಯಲಿರುವ ಸಂಹಾರದ ಸಂಸ್ಕೃತಿ ಕಾರ್ಯಕ್ರಮದ ಕರ ಪತ್ರವನ್ನು ಶುಕ್ರವಾರ ಪಟ್ಟಣದಲ್ಲಿ ಕಟ್ಟಡ ಕಾರ್ಮಿಕರ ಜಿಲ್ಲಾಧ್ಯಕ್ಷ ಬಸವರಾಜ ಮಾಳಗೆ ಅವರ ನೇತೃತ್ವದಲ್ಲಿ ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಮಿಯಾ, ಕಟ್ಟಡ ಕಾರ್ಮಿಕರ ಸಂಘದ ತಾಲೂಕಾಧ್ಯಕ್ಷ ಶ್ರೀಮಂತ ಸಿ. ಮೇತ್ರಿ, ಕಾರ್ಯದರ್ಶಿ ಸಿಮೋನ್ ಉಡಬಾಳ್, ಸಿಐಟಿಯು ಜಿಲ್ಲಾ ಕಾರ್ಯದರ್ಶಿ ಅಂಬುಬಾಯಿ ಮಾಳಗೆ, ಜನವಾದಿ ಮಹಿಳಾ ಸಂಘದ ಜಿಲ್ಲಾ ಕಾರ್ಯದರ್ಶಿ ರೇಷ್ಮಾ ಹಂಸರಾಜ್, ಕಾಮಣ್ಣ ಇಟಗಾ, ಸೂರ್ಯಕಾಂತ್ ಇಟಗಾ, ಆಂಜನೇಯ ಚಿಟಗುಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಶ್ರೀಕೃಷ್ಣದೇವರಾಯರ 554ನೇ ಜನ್ಮ ದಿನಾಚರಣೆ





ಮಲ್ಲಮ್ಮ ನುಡಿ ವಾರ್ತೆ

ಹೊಸಪೇಟೆ: ವಿಜಯನಗರ ಸಾಮ್ರಾಜ್ಯದ ಸಾರ್ವಭೌಮ ಚಕ್ರವರ್ತಿ ಶ್ರೀಕೃಷ್ಣದೇವರಾಯರ 554ನೇ ಜನ್ಮ ದಿನಾಚರಣೆಯನ್ನು ನಗರದ ವಿವಿಧ ಸಂಘಟನೆಗಳಿಂದ ಆಚರಿಸಲಾಯಿತು.

ನಶಿಸುತ್ತಿರುವ ಹಿಂದೂ ರಾಷ್ಟ್ರಕ್ಕೆ ಪುನಃಶ್ಚೇತನ ನೀಡಿದ್ದ ಶ್ರೀಕೃಷ್ಣದೇವರಾಯ ಶೈವ, ವೈಷ್ಣವ ಧರ್ಮದ ಪ್ರತಿಪಾದಕರಾಗಿದ್ದರಲ್ಲದೇ ಸರ್ವ ಧರ್ಮ ಸಮನ್ವಯದ ಹರಿಕಾರರಾಗಿದ್ದರು. ಕಲೆ, ಸಂಗೀತ, ಸಾಹಿತ್ಯ, ಆಡಳಿತ, ಆರ್ಥಿಕ ಸ್ಥಿತಿ ಅವರ ಕಾಲದಲ್ಲಿ ಅತ್ಯುನ್ನತ ದರ್ಜೆಯಲ್ಲಿದ್ದವು. ಸಾಂಸ್ಕೃತಿಕ, ಧಾರ್ಮಿಕ ಹಾಗೂ ಸಾಮಾಜಿಕವಾಗಿ ಶ್ರೀಕೃಷ್ಣದೇವರಾಯ ಅನುಪಮವಾದ ಕೊಡುಗೆ ನೀಡಿದ್ದಾರೆ. ಅವರ ಕಾಲದಲ್ಲಿ ಎಲ್ಲ ಧರ್ಮದ ಜನರಿಗೆ ಸಮಾನತೆ ಕಲ್ಪಿಸಿದ್ದ ಮಹಾ ಚಕ್ರವರ್ತಿ ಆಗಿದ್ದರು ಎಂದು ಸಂಘಟನೆಗಳ ಮುಖಂಡರು ಸ್ಮರಿಸಿದ್ದಾರೆ.

ಈ ಸಂದರ್ಭದಲ್ಲಿ ವಾಲ್ಮೀಕಿ ಸಮುದಾಯದ ಮುಖಂಡರಾದ ಮರಡಿರಾಮಣ್ಣ, ಪಿ.ವಿ.ವೆಂಕಟೇಶ್, ಗುಜ್ಜಲ್ ಗಣೇಶ್, ಬಲಿಜ ಸಮುದಾಯದ ಜೆಎನ್ ಕಾಳಿದಾಸ್, ಪಾಂಡುರಂಗ, ಭೋರಾಜ್, ಸಾಂಬಶಿವರಾವ್, ಶ್ರೀನಿವಾಸ್ ಟಿ., ಶಿವಾನಂದಪ್ಪ, ರವಿಕುಮಾರ್ ಟಿ., ಎಲ್. ಮಂಜುನಾಥ್, ಬಾರಕೇರ ಸಮುದಾಯದ ಎಸ್.ಗಾಳೆಪ್ಪ ಮತ್ತು ಯಮುನೇಶ್, ಮಾರವಾಡಿ ಸಮುದಾಯದ ಪ್ರವೀಣ್, ಪದ್ಮಸಾಲಿ ಸಮುದಾಯದ ಬೋದ ರಾಮಪ್ಪ, ಅಲೆಮಾರಿ ಸಮಾಜದ ಮಾರೆಪ್ಪ, ಸುಣ್ಣದ ವೆಂಕಟೇಶ್ ಇನ್ನಿತರರು ಇದ್ದರು.



ಕಲಬುರಗಿ: ನಗರದ ಡಾ.ಎಸ್.ಎಂ.ಪಂಡಿತ ರಂಗಮಂದಿರದಲ್ಲಿ ಕರ್ನಾಟಕ ನಾಟಕ ಅಕಾಡೆಮಿ, ಕಲಬುರಗಿ ರಂಗಾಯಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ರಂಗ ವೃಕ್ಷ ನಾಟಕ ನೃತ್ತ ಸೇವಾ ಸಂಘ ತಂಡದ ಶರಣ ಸಿಂಚನ ನಾಟಕ ಪ್ರದರ್ಶನಗೊಂಡಿತು.

## ಭೂ ಸುರಕ್ಷಾ ಯೋಜನೆಯ ಅಡಿಯಲ್ಲಿ ಹೊಸದಾಗಿ ಆರಂಭಿಸಿದ ಇ-ಖಜಾನೆ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಜ.17: ಭೂ ಸುರಕ್ಷಾ ಯೋಜನೆಯ ಅಡಿಯಲ್ಲಿ ಹೊಸದಾಗಿ ಆರಂಭಿಸಿದ ಇ-ಖಜಾನೆ (ಡಿಜಿಟಲ್ ಭೂ ದಾಖಲೆ ಸಂಗ್ರ ಕೇಂದ್ರ) ವನ್ನು ಇಂದು ಬೀದರ ತಾಲ್ಲೂಕಿನ ತಹಸೀಲ್ದಾರ ಕಛೇರಿಯಲ್ಲಿ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಉದ್ಘಾಟಿಸಿದರು.

ನಂತರ ಮಾತನಾಡಿ ಹಳೆಯ, ದುಸ್ಥಿತಿಯಲ್ಲಿರುವ ಭೂ ದಾಖಲೆಗಳನ್ನು ಶಾಶ್ವತ ಡಿಜಿ ದಾಖಲೆಗಳಾಗಿ ಪರಿವರ್ತಿಸುವುದು, ರೆಕಾರ್ಡ್ ರೂಂಗಳಿಂದ ದಾಖಲೆ ಪಡೆದುಕೊಳ್ಳಲು ಇರುವ ತೊಂದರೆಗಳ ನಿವಾರಣೆ, ಹಳೆಯ ದಾಖಲೆಗಳ ಸಂರಕ್ಷಣೆ ಹಾಗೂ ಕಳವು-ತಿದ್ದುಪಡಿ ನಿಯಂತ್ರಣ ಮಾಡುವುದು ಸೇರಿದಂತೆ ಹಲವು ಪ್ರಯೋಜನಗಳನ್ನು ಇನ್ನು ಮುಂದೆ ಸಾರ್ವಜನಿಕರು ಪಡೆಯಬಹುದು. ತಾಲ್ಲೂಕು ಕಚೇರಿ, ಸರ್ವೆ ಮತ್ತು ನೋಂದಣಿ ಇಲಾಖೆಗಳ ಎಲ್ಲ ಭೂ ದಾಖಲೆಗಳ ಡಿಜಟಲೀಕರಣ ಮಾಡುವ ಉದ್ದೇಶದಿಂದ ನಮ್ಮ ಸರ್ಕಾರ ಈ ಕಾರ್ಯಕ್ರಮ ಆರಂಭಿಸಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಪೌರಾಡಳಿತ ಮತ್ತು ಹಜ್ ಸಚಿವರಾಜ ರಹೀಂ ಖಾನ್, ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಅಪರ ಜಿಲ್ಲಾಧಿಕಾರಿಗಳಾದ ಶಿವಕುಮಾರ ಶೀಲವಂತ, ಬೀದರ ಸಹಾಯಕ ಆಯುಕ್ತ ಮಹ್ಮದ ಶಕೀಲ್, ನಗರಸಭೆ ಅಧ್ಯಕ್ಷರಾದ ಮಹ್ಮದ ಗೌಸ್, ಬೀದರ ತಹಸೀಲ್ದಾರ ಡಿ.ಮೆಹೆತ ಸೇರಿದಂತೆ ತಹಸೀಲ್ ಕಾರ್ಯಾಲಯದ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಜ. 19 ರಂದು ರೆಡ್ಡಿ ಸಮಾಜದಿಂದ ಮಹಾ ಯೋಗಿ ವೇಮನವರ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.17:ಮಹಾಯೋಗಿ ವೇಮನ ಅವರ 613ನೇ ಜಯಂತೋತ್ಸವವನ್ನು ಜನೇವರಿ 19 ರಂದು ಭಾನುವಾರ ರೆಡ್ಡಿ ಸಮಾಜ ಕಲಬುರ್ಗಿಯಿಂದ ಮಹಾ ಯೋಗಿ ವೇಮನವರ ಜಯಂತಿ ಆಚರಿಸಲಾಗುವುದು. ಎಂದು ಮಹಾಯೋಗಿ ವೇಮನ ಜಯಂತೋತ್ಸವ ಅಧ್ಯಕ್ಷ ವಿಜಯರೆಡ್ಡಿ ಪಾಟೀಲ್ ಅವರು ಹೇಳಿದರು.

ಜ.19.ರಂದು ನಗರದ ಜಗತ್ ವೃತದಿಂದ ಎಸ್.ಎಂ.ಪಂಡಿತ್ ರಂಗ ಮಂದಿರದ ವರೆಗೆ ಮಹಾಯೋಗಿ ವೇಮನವರ ಭಾವಚಿತ್ರದೊಂದಿಗೆ ಅದ್ದೂರಿ ಮೆರವಣಿಗೆ ಬೆಳಗ್ಗೆ 9.30 ರಿಂದ ಪ್ರಾರಂಭಗೊಂಡು 11 ಗಂಟೆಯವರೆಗೆ ಪಂಡಿತ ರಂಗ ಮಂದಿರಿಗೆ ತಲುಪಲಾಗುವುದು.

ಜಯಂತೋತ್ಸವ ಅಂಗವಾಗಿ ರಂಗಮಂದಿರ ಆವರಣದಲ್ಲಿ ಉಚಿತ ಆರೋಗ್ಯ ಶಿಬಿರ ಏರ್ಪಡಿಸಲಾಗಿದ್ದು ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕು ಈ ಕಾರ್ಯಕ್ರಮದಲ್ಲಿ ಸಮಾಜದ ಗೌರವ ಅಧ್ಯಕ್ಷರಾದ ಶರಣಬಸಪ್ಪಗೌಡ ದರ್ಶನಾಪುರ ಅವರು ಮೆರವಣಿಗೆಗೆ ಚಾಲನೆ ನೀಡುವರು ಆದ್ದರಿಂದ ಸಮಾಜದ ಎಲ್ಲಾ ಬಾಂಧವರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶೋಭೆ ತರಬೇಕೆಂದು ಎಲ್ಲಾ ಕುಲಬಾಂಧವರಲ್ಲಿ ಮನವಿ.

ಈ ಜಯಂತಿಯು ಸರಕಾರ ವಸತಿಯಿಂದ ಆಚರಿಸಲಾಗಿದ್ದರಿಂದ ನಮ್ಮ ಜಿಲ್ಲೆಯಲ್ಲಿ ಎಲ್ಲಾ ಶಾಲಾ ಕಾಲೇಜು ಕಚೇರಿಗಳಲ್ಲಿ ಆಚರಿಸಬೇಕು ಎಂದು ವಿಜಯರೆಡ್ಡಿ ಪಾಟೀಲ್ ಅವರು ಪ್ರಕಟಣೆಯ ಮೂಲಕ ಸಮಾಜದವರಿಗೆ ಮನವಿ ಮಾಡಿದ್ದಾರೆ.

## ಸಾರ್ವಜನಿಕ ಅಹವಾಲು, ಕುಂದುಕೊರತೆ ಸ್ವೀಕಾರ ಸಭೆಯಲ್ಲಿ ಕರ್ನಾಟಕ ಉಪಲೋಕಾಯುಕ್ತ ನ್ಯಾ.ಬಿ.ವೀರಪ್ಪ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.17–ಸರ್ಕಾರಿ ನೌಕರರು ಭ್ರಷ್ಟಾಚಾರ ಮುಕ್ತವಾಗಿ ಸಾರ್ವಜನಿಕರಿಗೆ ಆಡಳಿತ ಸೇವೆ ನೀಡಬೇಕು ಎಂದು ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿಗಳಾದ ಬಿ.ವೀರಪ್ಪ ಅವರು ಹೇಳಿದರು.



ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶುಕ್ರವಾರ ಆಯೋಜಿಸಿದ್ದ ಸಾರ್ವಜನಿಕ ಅಹವಾಲು/ಕುಂದುಕೊರತೆ ದೂರುಗಳ ಸ್ವೀಕಾರ, ದೂರುಗಳ ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ಯಾನ್ಸರ್ ಗಿಂತಲೂ ಭಯಂಕರ ಭ್ರಷ್ಟಾಚಾರ ಎನ್ನುವ ಖಾಯಿಲೆ. ಭ್ರಷ್ಟಾಚಾರದಿಂದ ಅಭಿವೃದ್ಧಿ ಕುಂಠಿತಗೊಳ್ಳುತ್ತದೆ. ಹಾಗಾಗಿ ಸರ್ಕಾರಿ ನೌಕರರು ಭ್ರಷ್ಟಾಚಾರ ತೊರೆದು ಪ್ರಾಮಾಣಿಕ ಹಾದಿಯಲ್ಲಿ ನಡೆದು, ತಮ್ಮ ಕರ್ತವ್ಯದಲ್ಲಿ ಸತ್ಯ, ನಿಷ್ಠೆ ಹಾಗೂ ಮಾನವೀಯತೆ ಪ್ರದರ್ಶಿಸಿ ಅಭಿವೃದ್ಧಿಗೆ ಪೂರಕವಾಗಬೇಕು ಎಂದು ತಿಳಿಸಿದರು.

ರಾಜ್ಯ ಮತ್ತು ಕೇಂದ್ರ ಸರ್ಕಾರ ನೀಡುವ ಸವಲತ್ತುಗಳನ್ನು ಪಡೆಯುವ ಹಕ್ಕು ಎಲ್ಲ ನಾಗರಿಕರಿಗೆ ಇದೆ. ಎಲ್ಲರಿಗೂ ಸಮಪಾಲು, ಸಮಬಾಳು ಎಂಬ ಸಂವಿಧಾನದ ಆಶೋತ್ತರದ ಅಡಿಯಲ್ಲಿ ಲೋಕಾಯುಕ್ತ ಸಂಸ್ಥೆ ಕಾರ್ಯನಿರ್ವಹಿಸುತ್ತಿದ್ದು, ಜನರಿಗೆ ಸರ್ಕಾರದ ಸೌಕರ್ಯಗಳು ಸಿಗದೇ ಇದ್ದಲ್ಲಿ, ಆ ಸೌಲಭ್ಯಗಳನ್ನು ಕೊಡಿಸುವ ಕೆಲಸವನ್ನು ಸಂಸ್ಥೆ ಮಾಡುತ್ತದೆ ಎಂದು ಅವರು ಹೇಳಿದರು.

ಸ್ವಾತಂತ್ರ ಲಭಿಸಿ 75 ವರ್ಷ ಕಳೆದರೂ, ಭ್ರಷ್ಟಾಚಾರದಿಂದ ಸಂವಿಧಾನದ ಹಕ್ಕುಗಳನ್ನು ಹತ್ತಿಕ್ಕುವ ಕೆಲಸವಾಗುತ್ತಿದೆ. ಪ್ರಜಾಪ್ರಭುತ್ವದಲ್ಲಿ ನಾಲ್ಕು ಅಂಗಗಳು ಬಲಿಷ್ಠವಾಗಿ ಕಾರ್ಯನಿರ್ವಹಿಸುತ್ತಿವೆ. ನಾಲ್ಕನೇ ಸ್ತಂಭವಾಗಿರುವ ಮಾಧ್ಯಮಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿದ್ದಲ್ಲಿ ಸಮಾಜದ ತಪ್ಪುಗಳನ್ನು ತಿದ್ದಲು ಸಾಧ್ಯ. ತನ್ಮೂಲಕ ಪ್ರಾಮಾಣಿಕ ಸಮಾಜವನ್ನು ನಿರ್ಮಿಸಲು ಸಾಧ್ಯ ಎಂದು ಅಭಿಪ್ರಾಯ ಪಟ್ಟರು.

ದೇಶದ ಸೈನಿಕರು ನಿಸ್ವಾರ್ಥದ ಸೇವೆ ನೀಡುತ್ತಿದ್ದಾರೆ. ಆದರೆ ಮಾನವನು ಸ್ವಾರ್ಥದಿಂದ ಪ್ರಕೃತಿ, ಪ್ರಾಣಿ–ಪಕ್ಷಿ ಸಂಕುಲ ನಾಶ ಪಡಿಸುತ್ತಿದ್ದಾನೆ. ನಿಸರ್ಗದಲ್ಲಿ ಪಂಚಭೂತಗಳಿಲ್ಲದಿದ್ದರೆ ನಾವಿಲ್ಲ; ಅವುಗಳೇ ತಮ್ಮ–ತಮ್ಮ ಕೆಲಸ ಅಚ್ಚುಕಟ್ಟಾಗಿ ನಿರ್ವಹಿಸುತ್ತಿರುವಾಗ ಅಧಿಕಾರಿಗಳು ಪ್ರಾಮಾಣಿಕ ಸೇವೆ ನೀಡಲು ಏನು ಸಮಸ್ಯೆ ಎಂದು ವಿಷಾದ ವ್ಯಕ್ತಪಡಿಸಿದರು.

ಜನರ ಕುಂದುಕೊರತೆಗಳನ್ನು ಬಗೆಹರಿಸುವುದು, ಭ್ರಷ್ಟಾಚಾರ ನಿರ್ಮೂಲನೆ ಮಾಡುವುದು ಲೋಕಾಯುಕ್ತ ಸಂಸ್ಥೆಯ ಕಾರ್ಯೋದ್ದೇಶ. ಸರ್ಕಾರದ ಸೌಲಭ್ಯಗಳನ್ನು ನೀಡುವ ಪ್ರಕ್ರಿಯೆಯಲ್ಲಿ ಅಧಿಕಾರಿಗಳು ಕರ್ತವ್ಯಲೋಪ ಎಸಗಿದರೆ, ದುರ್ನಡತೆ ಪ್ರದರ್ಶಿಸಿದರೆ ಅವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಲಾಗುತ್ತದೆ. ದೂರುದಾರರು ಸುಳ್ಳು ಆರೋಪ ನೀಡಿದಲ್ಲಿ ಅಂತಹ ಪ್ರಕರಣಗಳಲ್ಲಿ ಅವರ ವಿರುದ್ಧ ಕಠಿಣ ಕ್ರಮವನ್ನೂ ಸಹ ಜರುಗಿಸಲಾಗುವುದು ಎಂದು ಅವರು ಎಚ್ಚರಿಸಿದರು.

ಸಾರ್ವಜನಿಕರು ಕಾನೂನು ವಿಷಯಗಳ ಕುರಿತು ತಿಳುವಳಿಕೆ ಹೊಂದಬೇಕು. ಪ್ರತಿಯೊಬ್ಬರೂ ಸ್ವಾಭಿಮಾನದ ಬದುಕು ಬದುಕಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸಿದ್ದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಗಣ್ಯರನ್ನು ಸ್ವಾಗತಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ವಂದಿಸಿದರು.

ಈ ವೇಳೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಶೋಭರಾಣಿ ವಿ.ಜೆ., ಬಳ್ಳಾರಿ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂದೀಪ್ ಸೂರ್ಯವಂಶಿ, ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಕೆ.ಎಂ. ರಾಜಶೇಖರ್, ಸಹಾಯಕ ನಿಬಂಧಕರಾದ ಶುಭವೀರ್ ಜೈನ್.ಬಿ., ಉಪನಿಬಂಧಕರಾದ ಅರವಿಂದ.ಎನ್.ವಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಯೂ ಆದ ರಾಜೇಶ್ ಎನ್.ಹೊಸಮನೆ, ಕರ್ನಾಟಕ ಲೋಕಾಯುಕ್ತ ಬಳ್ಳಾರಿ ವಿಭಾಗದ ಪೊಲೀಸ್ ಅಧೀಕ್ಷಕ ಸಿದ್ಧರಾಜು.ಸಿ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಾರ್ವಜನಿಕರು, ಮತ್ತಿತರರು ಉಪಸ್ಥಿತರಿದ್ದರು.

ಬಳಿಕ ಸಾರ್ವಜನಿಕರಿಂದ ಅಹವಾಲು/ಕುಂದುಕೊರತೆ ದೂರುಗಳ ಸ್ವೀಕಾರ, ದೂರುಗಳ ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿ ನಡೆಯಿತು.

## ವಿ.ಲಕ್ಷ್ಮೀ ಅವರಿಗೆ ಪಿಎಚ್‌ಡಿ ಪದವಿ

ಮಲ್ಲಮ್ಮ ನುಡಿ ವಾರ್ತೆ



ಬಳ್ಳಾರಿ,ಜ.17– ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ನಿರ್ವಹಣಾ ಶಾಸ್ತ್ರ ಅಧ್ಯಯನ ವಿಭಾಗದ ವಿದ್ಯಾರ್ಥಿನಿಯಾಗಿದ್ದ ವಿ.ಲಕ್ಷ್ಮೀ ಅವರಿಗೆ ಪಿಎಚ್‌ಡಿ ಪದವಿ ಲಭಿಸಿದೆ.

ವಿವಿಯ ನಿರ್ವಹಣಾಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಡಾ.ಕೆ.ಸಿ. ಪ್ರಶಾಂತ್ ಅವರ ಮಾರ್ಗದರ್ಶನದಲ್ಲಿ ಸಿದ್ಧಪಡಿಸಿದ್ದ "ಕಾಂಪಿಟೆನ್ಸಿ ಮ್ಯಾಪಿಂಗ್ ಆಫ್ ಹೈಯರ್ ಎಜುಕೇಶನ್ ಟೀರ್ಸ್– ಎ ಸ್ಟಡಿ ಆಫ್ ಟೀರ್ಸ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಅಂಡರ್ ದಿ ಜುರಿಸಿಡಿಕ್ಷನ್ ಆಫ್ ವಿಜಯನಗರ ಶ್ರೀ ಕೃಷ್ಣದೇವರಾಯ ಯೂನಿವರ್ಸಿಟಿ ಬಳ್ಳಾರಿ" ಎಂಬ ಪ್ರೌಢ ಪ್ರಬಂಧಕ್ಕೆ ವಿಶ್ವವಿದ್ಯಾಲಯವು ಪಿಎಚ್‌ಡಿ ಪದವಿ ಪ್ರದಾನ ಮಾಡಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.


## ತಿಪುರಾಂತಿನ ಪಿ. ಕೆ. ಪಿ. ಎಸ್‌ಗೆ ಆಯ್ಕೆ.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಇಲ್ಲಿನ ತಿಪುರಾಂತ ಪಿ. ಕೆ. ಪಿ. ಎಸ್. ಅಧ್ಯಕ್ಷರಾಗಿ ಆನಂದ ಕಾಶಪ್ಪ ಉಮರ್ಗೆ ಮತ್ತು ಉಪಾಧ್ಯಕ್ಷರಾಗಿ ಶಾರದಾ ಬಾಯಿ ಜಗನ್ನಾಥ ಮುಲಗೆ ಅವರು ಅವಿರೋಧವಾಗಿ ಆಯ್ಕೆಯಾದರು. ಅವರನ್ನು ನಿರ್ದೇಶಕರ ಮತ್ತು ಗ್ರಾಮಸ್ಥರ ಪರವಾಗಿ ಸನ್ಮಾನಿಸಲಾಯಿತು. ಈ ವೇಳೆ ನಿರ್ದೇಶಕರನ್ನೂ ಗೌರವಿಸಲಾಯಿತು. ಪ್ರಮುಖರಾದ ಶಿವಬಸಪ ಚನ್ನಮಲ್ಲೆ. ಮಲ್ಲಿಕಾರ್ಜುನ ರಾಜೋಳೆ. ಶರಪೋದಿನ ಮೂಲಗೆ. ಶಾಮ ಮಾಧು. ಶ್ರೀದೇವಿ ಗುಡ್ಡಾ. ರಾಜಕುಮಾರ ಪಾಟೀಲ. ಕಾಶಪ ಉಮರ್ಗೆ ಜಗದೀಶ ಮಠಪತಿ. ಬಸವರಾಜ್ ಪಾಟೀಲ್ ಶಿವಪೂರ. ಉಮೇಶ್ ರಾಜೋಳೆ. ಬ್ರಹಮ್ಮ ರಡ್ಡಿ. ಸಂತೋಷ ಬಿರಾದಾರ. ಬಸವರಾಜ ಬಿರಾದಾರ. ಗೋವಿಂದರೆಡ್ಡಿ. ನಾಗನಾಥ ರೆಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮಂಗಲಗಿ: ಸಹಕಾರಿ ಸಂಘ ರಾಜ್ಯದಲೇ ಮಾದರಿ ಸಂಘ ಮಾಡುವುದು ನನ್ನ ಗುರಿ–ವೈಜಿನಾಥ




ಮಲ್ಲಮ್ಮ ನುಡಿ ವಾರ್ತೆ

> ಪಿಕೆಪಿಎಸ್‌ಗಳು ರೈತರಿಗೆ ಸಕಾಲಕ್ಕೆ ಆರ್ಥಿಕ ನೆರವು ಒದಗಿಸಿ ಅಭ್ಯುದಯಕ್ಕೆ ಕಾರಣವಾಗಿದೆ. ಆದ್ದರಿಂದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು ಆರ್ಥಿಕವಾಗಿ ಸಧೃಢವಾಗಿ, ಗ್ರಾಮೀಣ ಜನರ ಬದುಕಿಗೆ ಆಸರೆಯಾಗಲು ಶಕ್ತಿಮಿರಿ ಶ್ರಮಿಸುತ್ತೇವೆ
> –ವೈಜಿನಾಥ

ಚಿಟಗುಪ್ಪ:– ತಾಲೂಕಿನ ಮಂಗಲಗಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ವೈಜಿನಾಥ ಶರಣಪ್ಪ ಉಪಾಧ್ಯಕ್ಷರಾಗಿ ವಿಠಲ ಲಾಲಪ್ಪ ಅವಿರೋಧ ಆಯ್ಕೆಯಾದರು. ಪಿಕೆಪಿಎಸ್ ಕಾರ್ಯಾಲಯದಲ್ಲಿ ಶುಕ್ರವಾರ ಜರುಗಿದ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಒಬ್ಬರೆ ನಾಮಪತ್ರ ಸಲ್ಲಿಸಿದ ಹಿನ್ನೆಲೆಯಲ್ಲಿ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಗುರುನಾಥ ತಿಳಿಸಿದರು. ನಂತರ ಪಿಕೆಪಿಎಸ್ ಮುಖ್ಯ ಕಾರ್ಯನಿರ್ವಾಹಕ ಪ್ರವೀಣ ನೂತನ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸರ್ವ ನಿರ್ದೇಶಕರನ್ನು ಸನ್ಮಾನಿಸಿದರು.

ಬಳಿಕ ನೂತನ ಅಧ್ಯಕ್ಷ ವೈಜಿನಾಥ ಮಾತನಾಡಿ, ಕೃಷಿ ಪ್ರಧಾನವಾದ ನಮ್ಮ ದೇಶದಲ್ಲಿ ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ಕೆಲಸ ಮಾಡುವ ಸಹಕಾರಿ ಸಂಘಗಳು ರೈತರ ಅಭಿವೃದ್ಧಿಗೆ ಶ್ರಮಿಸಬೇಕು. ಅಂದಾಗ ಮಾತ್ರ ಹಗಲಿರುಳು ದುಡಿದು ಅನ್ನ ಹಾಕುವ ರೈತನಿಗೆ ಗೌರವ ನೀಡಿದಂತಾಗುತ್ತದೆ ಎಂದು ತಿಳಿಸಿದರು. ಮಂಗಲಗಿ ಸಹಕಾರಿ ಸಂಘ ಇಡೀ ರಾಜ್ಯದಲ್ಲೆ ಮಾದರಿ ಸಹಕಾರಿ ಸಂಘ ಮಾಡುವುದು ನನ್ನ ಗುರಿಯಾಗಿದೆ, ರೈತರ ಸೇವೆ ಮಾಡಲು ನನ್ನಗೆ ಪುನಃ ಅಧ್ಯಕ್ಷನ್ನಾಗಿ ಆಯ್ಕೆ ಮಾಡಿದಕ್ಕೆ ರೈತರಿಗೆ ಮತ್ತು ಸಂಘದ ನಿರ್ದೇಶಕರಿಗೆ ಧನ್ಯವಾದಗಳು ಸಲ್ಲಿಸುತ್ತೇನೆ. ಹಿಂದೆ ಅಧ್ಯಕ್ಷನಾಗಿದಾಗ ಸಂಘ ಬೆಳೆಸಲು ಬಹಳಷ್ಟು ಕಾರ್ಯ ಮಾಡಿದ್ದೇನೆ. ಇನ್ನೂ ಅನೇಕ ಅಭಿವೃದ್ಧಿ ಕೆಲಸಗಳು ಮಾಡುವುದು ಇದೆ, ಇಡೀ ಕರ್ನಾಟಕದಲೇ ಮಂಗಲಗಿ ಪಿಕೆಪಿಎಸ್ ಮಾದರಿ ಸಂಘಯಾಗಿದೆ ಎಂಬ ಹೆಸರು ತರಲು ಪ್ರಾಮಾಣಿಕವಾಗಿ ಪ್ರಯತ್ನ ಮಾಡುತ್ತೇನೆ, ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ರೈತರಿಗೆ ಒದಗಿಸಿಕೊಡುವುದಾಗಿ ಭರವಸೆ ನೀಡಿದರು. ಸಂಘದ ನೂತನ ನಿರ್ದೇಶಕರಾದ ವೆಂಕಟರೆಡ್ಡಿ ವೀರಾರೆಡ್ಡಿ, ಕಂಟೇಪ್ಪ ರಾಮಶೆಟ್ಟಿ, ಮಾಣಿಕರೆಡ್ಡಿ ಬಕ್ಕಾರೆಡ್ಡಿ, ಭೀಮಣ್ಣಾ ಶಿವಪ್ಪಾ, ಇಬ್ರಾಹಿಮ ಪಟೇಲ್ ಫರೀದ ಪಟೇಲ್, ಶಫಿಯಾಬೇಗಂ ಅಬ್ದುಲ ಖಾದರ್, ಬಕ್ಕಮ್ಮಾ ಕಲ್ಲಪ್ಪ, ದೇವಿಂದ್ರ ರಾಮಚಂದ್ರಪ್ಪ, ರಮೇಶ ಚಂದ್ರಪ್ಪ, ಕಮಲರೆಡ್ಡಿ ತುಕ್ಕಾರೆಡ್ಡಿ, ಸಿಬ್ಬಂದಿಗಳಾದ, ಸಂತೋಷರೆಡ್ಡಿ, ಮಹಾನಂದಾ, ಮಹೇಶ ಗುಂಡಪ್ಪ, ವಿಶ್ವನಾಥ, ಪಿಕೆಪಿಎಸ್ ನಿವೃತ್ತ ಮುಖ್ಯ ಕಾರ್ಯನಿರ್ವಾಹಕ ಬಸವರಾಜ ಅಂಬಾಡಿ, ಪ್ರಮುಖರಾದ ಪ್ರಶಾಂತ, ಮುಖಬುಲ್, ಮಲ್ಲಪ್ಪ ಗೌರಾ, ತಿಪ್ಪಣ್ಣ, ಬಸವರಾಜ ಸೇರಿದಂತೆ ಇತರರು ಉಪಸ್ಥಿತರಿದ್ದರು.




ಬಸವಕಲ್ಯಾಣ :– ಇಲ್ಲಿನ ಹರಳಯ್ಯ ಗವಿಯಲಿ ನಡೆದ ಲಿಂಗಾಯತ ಧರ್ಮೋದಯ ದಿನಾಚರಣೆಯ ಕಾರ್ಯಕ್ರಮದಲ್ಲಿ ಚಿತ್ರದುರ್ಗದಲಿ ನಡೆಯಲಿರುವ ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಆಯ್ಕೆಯಾದ ಪೂಜ್ಯಶ್ರೀ ಡಾ. ಸಿದ್ದರಾಮ ಶರಣರು ಬೆಲ್ದಾಳ ಅವರನ್ನು ತಾಲೂಕ ಶರಣ ಸಾಹಿತ್ಯ ಪರಿಷತ್ ವತಿಯಿಂದ ಉಪಾಧ್ಯಕ್ಷರಾದ ಶಂಕರ್ ಜಿ. ಕರಣೆ. ಕಾರ್ಯದರ್ಶಿಯಾದ ನಾಗಪ್ಪಾ ನಿಣ್ಣೆ. ಎಸ್. ಜಿ. ಹುಡೇದ್. ಖಜಾಂಚಿ ಯಾದ ಗುರುಪಾದಪ್ಪಾ ಪಾಟೀಲ. ಅಲ್ಲದೆ ಡಾ. ಅಕ್ಕ ಗಂಗಾಂಬಿಕ ಪಾಟೀಲ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಬೃಂದಾ ಪದವಿ ಕಾಲೇಜ್ ವಾರ್ಷಿಕೋತ್ಸವದಲ್ಲಿ ಭಾಗಿಯಾದ ರಾಜ್ಯಪಾಲರು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ:ಜಿಲ್ಲೆಯ ಕುರುಗೋಡು ತಾಲ್ಲೂಕಿನ ದಮ್ಮೂರು ಗ್ರಾಮದ ಬಳಿಯ ಎಸ್‌ಬಿ ಸಂಸ್ಥೆಯ ಬೃಂದಾ ನ್ಯಾಷನಲ್ ಪಬ್ಲಿಕ್ ಶಾಲೆ, ಬೃಂದಾ ಪಿಯು ಕಾಲೇಜ್, ಬೃಂದಾ ಡಿಗ್ರಿ ಕಾಲೇಜ್ ಮತ್ತು ಸ್ಕಂದ ಇನ್ಸಿ ಟ್ಯೂಟ್ ಆಫ್ ನರ್ಸಿಂಗ್ ಕಾಲೇಜ್‌ಗಳ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಭಾಗವಹಿಸಿ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಕರ್ನಾಟಕ ಸರ್ಕಾರದ ಮಾಜಿ ಸಚಿವರು, ಗಂಗಾವತಿ ಕ್ಷೇತ್ರದ ಹಾಲಿ ಶಾಸಕರಾದ ಜಿ.ಜನಾರ್ದನರೆಡ್ಡಿ, ರಾಜ್ಯ ಕೆಎಂಎಫ್ ಮಾಜಿ ಅಧ್ಯಕ್ಷರಾದ ಜಿ.ಸೋಮಶೇಖರ್ ರೆಡ್ಡಿ, ಬೃಂದಾ ಪದವಿ ಕಾಲೇಜ್ ಮತ್ತು ಸ್ಕಂದ ಇನ್ಸಿಟಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜ್‌ನ ಮುಖ್ಯಸ್ಥರಾದ ದಮ್ಮೂರು ಶೇಖರ್, ಅವರ ಧರ್ಮಪತ್ನಿ ಹಾಗೂ ಎಸ್.ಬಿ.ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ ನ ಸಂಸ್ಥಾಪಕರು ಹಾಗೂ ಸಿಇಓ ಡಾ.ಭವ್ಯಶೇಖರ್, ಬಿಜೆಪಿಯ ಧುರೀಣೆ ಗಾಲಿ ಲಕ್ಷ್ಮೀ ಅರುಣಾ, ನಿರ್ದೇಶಕ ಭವನ್ ಎಂ.ಎಸ್. ಸೇರಿದಂತೆ ಪ್ರಾಚಾರ್ಯರು, ಪ್ರಾಧ್ಯಾಪಕರು, ಉಪನ್ಯಾಸಕರು, ವಿದ್ಯಾರ್ಥಿ ವೃಂದ ಈ ಸಂದರ್ಭದಲ್ಲಿ ಇದ್ದರು.

## ಸುರಪುರದಲ್ಲಿ ಕರವೇ ಇಪ್ಪತ್ತರ ಸಂಭ್ರಮ ಅದ್ದೂರಿ ಆಚರಣೆ ಜನವರಿ 20 ಕ್ಕೆ

ಮಲ್ಲಮ್ಮ ನುಡಿ ವಾರ್ತೆ



ಸುರಪುರ:ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಕರವೇ ಇಪ್ಪತ್ತರ ಸಂಭ್ರಮವನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಕರವೇ ತಾಲೂಕ ಅಧ್ಯಕ್ಷ ವೆಂಕಟೇಶ್ ನಾಯಕ್ ಬೈರಿಮಡ್ಡಿ ಅವರು ಮಲ್ಲಮ್ಮ ನುಡಿ ಪತ್ರಿಕೆಗೆ ಮಾಹಿತಿ ಕೊಟ್ರು. ಸುರಪುರದ ಆರಾಧ್ಯ ದೈವ ಶ್ರೀ ವೇಣುಗೋಪಾಲ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಸಡಗರದೊಂದಿಗೆ ಕರವೇ 20ನೇ ವರ್ಷದ ಸಂಭ್ರಮ ಆಚರಿಸಲು ನಿರ್ಧರಿಸಲಾಗಿದೆ ಎಂದರು. ಈ ಕಾರ್ಯಕ್ರಮದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರು ಟಿ.ಎ ನಾರಾಯಣಗೌಡ್ರು ಸುರಪುರ ಸಂಸ್ಥಾನದ ಅರಸು ಮನೆತನದ ರಾಜ ಕೃಷ್ಣಪ್ಪ ನಾಯಕ್ ಜ್ಯೋತಿ ಬೆಳಗಿಸುವವರು..! ಯಾದಗಿರಿ ಜಿಲ್ಲೆಯ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ್ ಸುರಪುರದ ಶಾಸಕ ರಾಜ ವೇಣುಗೋಪಾಲ್ ನಾಯಕ್ ಮಾಜಿ ಸಚಿವರಾದ ರಾಜುಗೌಡ ಪ್ರತಿಷ್ಠಿತ ಕಂಪನಿಯಾದ ಡಿಎಸ್ ಮ್ಯಾಕ್ಸ್ ಕಂಪನಿಯ ಮಾಲೀಕರಾದ ಡಾ. ಎಸ್ ಪಿ ದಯಾನಂದರವರು ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು..! ಸಾಧಕರಿಗೆ ಕುವೆಂಪು ಪ್ರಶಸ್ತಿ : ವಿವಿಧ

## ಶ್ರೀಕೃಷ್ಣದೇವರಾಯರ 554ನೇ ಜನ್ಮ ದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಹೊಸಪೇಟೆ: ವಿಜಯನಗರ ಸಾಮ್ರಾಜ್ಯದ ಸಾರ್ವಭೌಮ ಚಕ್ರವರ್ತಿ ಶ್ರೀಕೃಷ್ಣದೇವರಾಯರ 554ನೇ ಜನ್ಮ ದಿನಾಚರಣೆಯನ್ನು ನಗರದ ವಿವಿಧ ಸಂಘಟನೆಗಳಿಂದ ಆಚರಿಸಲಾಯಿತು.

ನಶಿಸುತ್ತಿರುವ ಹಿಂದೂ ರಾಷ್ಟ್ರಕ್ಕೆ ಪುನಃಶ್ಚೇತನ ನೀಡಿದ್ದ ಶ್ರೀಕೃಷ್ಣದೇವರಾಯ ಶೈವ, ವೈಷ್ಣವ ಧರ್ಮದ ಪ್ರತಿಪಾದಕರಾಗಿದ್ದರಲ್ಲದೇ ಸರ್ವ ಧರ್ಮ ಸಮನ್ವಯದ ಹರಿಕಾರರಾಗಿದ್ದರು. ಕಲೆ, ಸಂಗೀತ, ಸಾಹಿತ್ಯ, ಆಡಳಿತ, ಆರ್ಥಿಕ ಸ್ಥಿತಿ ಅವರ ಕಾಲದಲ್ಲಿ ಅತ್ಯುನ್ನತ ದರ್ಜೆಯಲ್ಲಿದ್ದವು. ಸಾಂಸ್ಕೃತಿಕ, ಧಾರ್ಮಿಕ ಹಾಗೂ ಸಾಮಾಜಿಕವಾಗಿ ಶ್ರೀಕೃಷ್ಣದೇವರಾಯ ಅನುಪಮವಾದ ಕೊಡುಗೆ ನೀಡಿದ್ದಾರೆ. ಅವರ ಕಾಲದಲ್ಲಿ ಎಲ್ಲ ಧರ್ಮದ ಜನರಿಗೆ ಸಮಾನತೆ ಕಲ್ಪಿಸಿದ್ದ ಮಹಾ ಚಕ್ರವರ್ತಿ ಆಗಿದ್ದರು ಎಂದು ಸಂಘಟನೆಗಳ ಮುಖಂಡರು ಸ್ಮರಿಸಿದ್ದಾರೆ.

ಈ ಸಂದರ್ಭದಲ್ಲಿ ವಾಲ್ಮೀಕಿ ಸಮುದಾಯದ ಮುಖಂಡರಾದ ಮರಡಿ ರಾಮಣ್ಣ, ಪಿ.ವಿ.ವೆಂಕಟೇಶ್, ಗುಜ್ಜಲ್ ಗಣೇಶ್, ಬಲಿಜ ಸಮುದಾಯದ ಜೆಎನ್ ಕಾಳಿದಾಸ್, ಪಾಂಡುರಂಗ, ಭೋರಾಜ್, ಸಾಂಬಶಿವರಾವ್, ಶ್ರೀನಿವಾಸ್ ಟಿ., ಶಿವಾನಂದಪ್ಪ, ರವಿಕುಮಾರ್ ಟಿ., ಎಲ್. ಮಂಜುನಾಥ್, ಬಾರ–ಕೇರ ಸಮುದಾಯದ ಎಸ್.ಗಾಳೆಪ್ಪ ಮತ್ತು ಯಮುನೇಶ್, ಮಾರವಾಡಿ ಸಮುದಾಯದ ಪ್ರವೀಣ್, ಪದ್ಮಸಾಲಿ ಸಮುದಾಯದ ಬೋದ ರಾಮಪ್ಪ, ಅಲೆಮಾರಿ ಸಮಾಜದ ಮಾರೆಪ್ಪ, ಸುಣ್ಣದ ವೆಂಕಟೇಶ್ ಇನ್ನಿತರರು ಇದ್ದರು.

## ಒಣಮೆಣಸಿನ ಕಾಯಿ ಮಾರುಕಟ್ಟೆ ನಿರ್ಮಾಣಕ್ಕೆ ಮನವಿ

ಮಲ್ಲಮ್ಮ ನುಡಿ ವಾರ್ತೆ




ಬಳ್ಳಾರಿ: ಗಡಿ ಭಾಗದ ಪ್ರಮುಖ ಜಿಲ್ಲಾ ಕೇಂದ್ರವಾದ ಬಳ್ಳಾರಿಯಲ್ಲಿ ಒಣಮೆಣಸಿನಕಾಯಿ ಮಾರುಕಟ್ಟೆ ಸ್ಥಾಪನೆ ಮಾಡಬೇಕೆಂದು ಕೃಷಿ ಮಾರುಕಟ್ಟೆ ಸಚಿವರಿಗೆ ಜಿಲ್ಲೆಯ ರೈತರು ಮನವಿ ಮಾಡಿದ್ದಾರೆ.

ರೈತ ಮುಖಂಡರಾದ ಆರ್.ಮಾಧವರೆಡ್ಡಿ ಕರೂರು ಅವರ ನೇತೃತ್ವದಲ್ಲಿ ಅನೇಕ ರೈತರು ಸಚಿವರನ್ನು ಭೇಟಿಯಾಗಿ, ಪ್ರತಿ ಎಕರೆಗೆ 20 ಕ್ವಿಂಟಲ್ ಜೋಳವನ್ನು ಖರೀದಿಸುವಂತೆ ಆದೇಶಿಸಲು ಸಚಿವರಾದ ಶಿವಾನಂದ ಪಾಟೀಲ್ ಇವರಿಗೆ ಕರ್ನಾಟಕ ರಾಜ್ಯ ರೈತ ಸಂಘದಿಂದ ಮನವಿಯನ್ನು ನೀಡಲಾಯಿತು.

ಈ ಸಂಧರ್ಭದಲ್ಲಿ ಚಾಗನೂರು ಮಲ್ಲಿಕಾರ್ಜುನ ರೆಡ್ಡಿ, ಟಿ ಜಿ ವಿಠಲ್, ಕಾರಿ, ಲೇಪಾಕ್ಷಿ, ವಿಶ್ವನಾಥ, ಬಸವರಾಜ ಸ್ವಾಮಿ, ಪಂಪನಗೌಡ, ಈಶ್ವರ ರೆಡ್ಡಿ, ಬಸರೆಡ್ಡಿ, ಗೋಪಾಲ ರೆಡ್ಡಿ, ಉಮಾಪತಿ ಗೌಡ, ತಿಮ್ಮನಗೌಡ ಇತರರು ಇದ್ದರು.

# ಹೆಚ್.ಎಸ್.ಕೆ ಪಾಲಿಟೆಕ್ನಿಕ್‌ನಲ್ಲಿ ವಿದ್ಯಾರ್ಥಿಗಳಿಗೆ ತರಬೇತಿ ಕಾರ್ಯಗಾರ



ಮಲ್ಲಮ ನುಡಿ ವಾರ್ತೆ ಬಳ್ಳಾರಿ: ವೀ ವಿ ಸಂಘದ ಅಂಗ ಸಂಸ್ಥೆ ಹಾನಗಲ್ ಶ್ರೀ ಕುಮಾರೇಶ್ವರ ಪಾಲಿಟೆಕ್ನಿಕ್ ನಲ್ಲಿ ಸಿವಿಲ್ ಮತ್ತು ಸಸ್ಟೇನಬಿಲಿಟಿ ಇನ್ ಕನ್ಸಟ್ರಕ್ಷನ್ ಯೂಸಿಂಗ್ ಜಿಜಿಬಿಎಸ್ ಅಂಡ್ ಗ್ರೀನ್ ಮಟೀರಿಯಲ್ಸ್ ಎನ್ನುವ ವಿಷಯದ ಮೇಲೆ ತರಬೇತಿ ಕಾರ್ಯಗಾರ ಆಯೋಜಿಸಲಾಗಿತ್ತು.

ಕಾರ್ಯಕ್ರಮಕ್ಕೆ ಆಗಮಿಸಿದ ಅತಿಥಿಗಳು ಗಿಡಕ್ಕೆ ನೀರುಣಿಸುವ ಮೂಲಕ ಕಾರ್ಯಗಾರ ಉದ್ಘಾಟಿಸಲಾಯಿತು. ಮುಖ್ಯ ಅತಿಥಿಗಳಾಗಿ ಜೆಎಸ್‌ಡಬ್ಲ್ಯೂ ▯▯ ಸಿಮೆಂಟ್ ಶ್ರೀನಿವಾಸ್ ಕುಲಕರ್ಣಿ ಆಡಳಿತ ಮಂಡಳಿಯ ಅಧ್ಯಕ್ಷ ಪಲ್ಲೇದ ಪ್ರಭುಲಿಂಗ, ಆಡಳಿತ ಮಂಡಳಿಯ ಸದಸ್ಯರಾದ ಬಾಣಾಪುರ ಜಡೆಸಿದ್ದನಗೌಡ, ಚಂದ್ರಶೇಖರ್ ಪಾಶ್ಚಾಪ್ಪರ್, ಪ್ರಾಂಶುಪಾಲ ಬಿ.ಶ್ರೀಶೈಲಗೌಡ, ಕಾಲೇಜಿನ ಸಿವಿಲ್ ವಿಭಾಗಾಧಿಕಾರಿಯಾಗಿ ನಿವೃತ್ತರಾಗಿದ್ದ ಟಿ.ಗೋವಿಂದರಾಜುಲು ಮತ್ತು ಎಲ್ಲಾ ವಿಭಾಗದ ಮುಖ್ಯಸ್ಥರು, ಸಿಬ್ಬಂದಿಗಳು ಇದ್ದರು.

ಮುಖ್ಯ ಅತಿಥಿಗಳು ಮಾತನಾಡಿ, ಸಿಮೆಂಟ್ ಮತ್ತು ಕಾಂಕ್ರೀಟ್ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಸಿಮೆಂಟ್ ನಿಂದ ಆಗುವ ಉಪಯೋಗ ಮತ್ತು ಪರಿಸರ ಹಾನಿಯ ಬಗ್ಗೆ ವಿವರಿಸಿದರು. ಪರಿಸರಕ್ಕೆ ಹಾನಿ ಮಾಡದಂತಹ ವಸ್ತುಗಳನ್ನು ಕಾಮಗಾರಿಯನ್ನು ಹೇಗೆ ಕೈಗೊಳ್ಳಬೇಕೆಂದು ತಿಳಿಸಿದರು. ನಿರೂಪಣೆಯನ್ನು ಸಿವಿಲ್ ವಿಭಾಗಾಧಿಕಾರಿ ಉಮ್ಮೆ ಸಲ್ಮಾ ನಡೆಸಿಕೊಟ್ಟರು, ಮೆಕ್ಯಾನಿಕಲ್ ವಿಭಾಧಿಕಾರಿ ಎಂ.ಪಿ ಮಹೇಶ್ ಪರಿಚಯಿದರು.

ಉಪನ್ಯಾಸಕಿ ಸಿಂಧು ಆರ್ ವಂದಿಸಿದರು.

# ಅಬಕಾರಿ ಇಲಾಖೆಯಲ್ಲಿ ವರ್ಗಾವಣೆಗೆ ಹೊಸ ನಿಯಮ: ಸಚಿವ ಆರ್.ಬಿ.ತಿಮ್ಮಾಪೂರ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜ.17:ಅಬಕಾರಿ ಇಲಾಖೆಯಲ್ಲಿ ಸುಧಾರಣೆ ಹಾಗೂ ಪಾರದರ್ಶಕತೆ ತರುವ ಹಿನ್ನೆಲೆಯಲ್ಲಿ ಹಲವು ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಇಲಾಖೆಯಲ್ಲಿನ ವರ್ಗಾವಣೆಗೆ ಹೊಸ ನಿಯಮಗಳನ್ನು ರೂಪಿಸಲಾಗಿದೆ ಎಂದು ಅಬಕಾರಿ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್. ಬಿ. ತಿಮ್ಮಾಪೂರ ಅವರು ತಿಳಿಸಿದ್ದಾರೆ.

ಅಬಕಾರಿ ಇಲಾಖೆಯ ವರ್ಗಾವಣೆ ನಿಯಮಗಳನ್ನು ಮಾರ್ಪಾಡು ಮಾಡುವ ಮೂಲಕ ಪಾರದರ್ಶಕ ಮತ್ತು ನಿಯಮಾಧಾರಿತ ವರ್ಗಾವಣೆ ಪದ್ದತಿಯನ್ನು ಜಾರಿಗೊಳಿಸುವುದರಿಂದ ಇತರೆ ಪ್ರಭಾವಗಳಿಗೆ ಒಳಗಾಗುವುದನ್ನು ತಡೆಗಟ್ಟಲು ಸಾಧ್ಯವಾಗಲಿದೆ ಎಂದು ಸಚಿವ ತಿಮ್ಮಾಪೂರ ಅವರು ತಿಳಿಸಿದ್ದಾರೆ.

ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಕರ್ನಾಟಕ ನಾಗರೀಕ ಸೇವೆಗಳು (ಅಬಕಾರಿ ಇಲಾಖೆಯ ವರ್ಗಾವಣೆ) ನಿಯಮಗಳು, 2025 ಅನುಮೋದನೆ ನೀಡಲಾಗಿದ್ದು, ಅನುಬಂಧದಲ್ಲಿ ನೀಡಲಾದ ಕರಡನ್ನು ಹೊರಡಿಸಿ, ಸಂಬಂಧಪಟ್ಟವರಿಂದ ಆಕ್ಷೇಪಣೆ ಅಥವಾ ಸಲಹೆಗಳನ್ನು ಆಹ್ವಾನಿಸುವುದು. ಹಾಗೂ ಸ್ವೀಕೃತವಾಗಬಹುದಾದ ಆಕ್ಷೇಪಣೆ ಅಥವಾ ಸಲಹೆಗಳನ್ನು ಪರಿಗಣಿಸಿದ ನಂತರ ಕರ್ನಾಟಕ ನಾಗರೀಕ ಸೇವೆಗಳು (ಅಬಕಾರಿ ಇಲಾಖೆಯ ವರ್ಗಾವಣೆ) ನಿಯಮಗಳು, 2025 ನ್ನು ಅಂತಿಮಗೊಳಿಸಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಸಚಿವ ತಿಮ್ಮಾಪೂರ ಅವರು ತಿಳಿಸಿದ್ದಾರೆ.

ಅಬಕಾರಿ ಇಲಾಖೆಯಲ್ಲಿನ ಹುದ್ದೆಗಳನ್ನು ಕಾರ್ಯನಿರ್ವಾಹಕ ಮತ್ತು ಕಾರ್ಯನಿರ್ವಾಹಕೇತರ ಎಂದು ವಿಂಗಡಿಸಿ, ಅಬಕಾರಿ ನಿರೀಕ್ಷಕರು, ಅಬಕಾರಿ ಉಪ ನಿರೀಕ್ಷಕರು, ಅಬಕಾರಿ ಮುಖ್ಯ ಪೇದೆ ಮತ್ತು ಅಬಕಾರಿ ಪೇದೆಗಳ ವರ್ಗಾವಣೆಯನ್ನು ಕೌನ್ಸಿಲಿಂಗ್ ಮುಖಾಂತರ ಮಾಡಲು ನಿರ್ಧರಿಸಲಾಗಿದೆ. ಜೊತೆಗೆ ಒಬ್ಬ ಅಧಿಕಾರಿ/ಸಿಬ್ಬಂದಿಯನ್ನು ಸತತವಾಗಿ ಎರಡಕ್ಕಿಂತ ಹೆಚ್ಚು ಅವಧಿಗೆ ಕಾರ್ಯನಿರ್ವಾಹಕ ಹುದ್ದೆಗೆ ವರ್ಗಾಯಿಸುವಂತಿಲ್ಲ ಹಾಗೂ ಅಬಕಾರಿ ಅಧಿಕಾರಿಗಳ ಕಡ್ಡಾಯ ವರ್ಗಾವಣೆಗೆ ಹೊಸ ನಿಯಮದಲ್ಲಿ ಪ್ರಸ್ತಾಪಿಸಲಾಗಿದೆ ಎಂದು ಸಚಿವ ತಿಮ್ಮಾಪೂರ ತಿಳಿಸಿದ್ದಾರೆ.ಕಳೆದ 05 ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿನ ಕಾರ್ಯನಿರ್ವಾಹಕ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ ಅಬಕಾರಿ ಜಂಟಿ ಆಯುಕ್ತರು, ಉಪ ಆಯುಕ್ತರು, ಅಧೀಕ್ಷಕರು, ನಿರೀಕ್ಷಕರು ಮತ್ತು ಉಪ ನಿರೀಕ್ಷಕರುಗಳನ್ನು ಸದರಿ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳಿಗೆ ವರ್ಗಾಯಿಸಲು ಹೊಸ ನಿಯಮದಲ್ಲಿ ಉಲ್ಲೇಖಿಸಲಾಗಿದೆ ಅಬಕಾರಿ ಇಲಾಖೆಯು ಸಮವಸ್ತ್ರಾಧಾರಿತ ಮತ್ತು ನಿಯಂತ್ರಕ ಇಲಾಖೆ ಆಗಿರುವುದರಿಂದ ಹೊಸ ವರ್ಗಾವಣೆ ನಿಯಮ ಇಲಾಖೆಯಲ್ಲಿ ಜಾರಿ ಮತ್ತು ತನಿಖೆ ಕಾರ್ಯವನ್ನು ಪರಿಣಾಮಕಾರಿ ಕೈಗೊಳ್ಳಲು ಅನುಕೂಲವಾಗಲಿದೆ. ಜೊತೆಗೆ ಇಲಾಖೆಯಲ್ಲಿ ಪಾರದರ್ಶಕತೆ ವ್ಯವಸ್ಥೆ ಜಾರಿಯಾಗುವುದಿಂದ ಭ್ರಷ್ಟಾಚಾರಕ್ಕೆ ಆಸ್ಪದ ಸಿಗುವುದಿಲ್ಲ ಮತ್ತು ಸರ್ಕಾರಕ್ಕೆ ಆದಾಯ ಕೂಡ ಹೆಚ್ಚಾಗಲಿದೆ ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪೂರ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಯಿ ಮರಣ ತಡೆಗೆ ಮುಂಜಾಗ್ರತೆ ಅಗತ್ಯ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜ.17:ಗರ್ಭಾವಸ್ಥೆ ಸಮಯದಲ್ಲಿ ತಾಯಿ ಮರಣ ಪ್ರಕರಣಗಳು ಹೆಚ್ಚಾಗುತ್ತಿದ್ದು, ಅವುಗಳನ್ನು ತಡೆಯಲು ಮುಂಜಾಗ್ರತಾ ಕ್ರಮ ಕೈಗೊಳ್ಳುವುದು ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ತಾಯಿ ಮರಣ, ಜಿಲ್ಲಾ ಕಣ್ಗಾವಲು ಸಮಿತಿ, ರಾಷ್ಟ್ರೀಯ ತಂಬಾಕು ನಿಯಂತ್ರಣ ಹಾಗೂ ಕಾಯಕಲ್ಪ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಶಾ ಕಾರ್ಯಕರ್ತರು ಹಾಗೂ ಆರೋಗ್ಯ ಇಲಾಖೆಯವರು ತಮ್ಮ ಭಾಗದ ಗರ್ಭಿಣಿಯರನ್ನು ಗುರುತಿಸಿ ನೋಂದಣಿ ಮಾಡಿಕೊಳ್ಳಬೇಕು. ಇದರಿಂದ ಸೂಕ್ತ ಸಮಯಕ್ಕೆ ಚಿಕಿತ್ಸೆ ನೀಡಿ ಆಗಬಹುದಾದ ಗಂಡಾಂತರಗಳಿಂದ ಅವರನ್ನು ರಕ್ಷಿಸಲು ಸಾಧ್ಯವಾಗುತ್ತದೆ. ಇದರಿಂದ ತಾಯಿ ಮರಣ ತಡೆಯಲು ಸಾಧ್ಯವಾಗುತ್ತದೆ ಎಂದರು.

ಸಾರ್ವಜನಿಕರು ತಮ್ಮ ಕುಟುಂಬಗಳಲ್ಲಿ ಗರ್ಭಿಣಿಯರು ಇದ್ದಲ್ಲಿ ಆಶಾ ಕಾರ್ಯಕರ್ತರಿಗೆ ಮಾಹಿತಿ ನೀಡಬೇಕು. ಗರ್ಭಾವಸ್ಥೆಯಲ್ಲಿ ಮೇಲಿಂದ ಮೇಲೆ ಪರೀಕ್ಷೆಗೆ ಒಳಗಾಗುವ ಕಾರ್ಯವಾದಲ್ಲಿ ಬಾಹ್ಯರೋಗಗಳಿಂದ ತೊಂದರೆಯಾಗುವದಿಲ್ಲ. ಈ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ ಎಪ್ರೀಲ್ 2024 ರಿಂದ ಇಲ್ಲಿಯವರೆಗೆ ಒಟ್ಟು 10 ತಾಯಿ ಮರಣ ಪ್ರಕರಣಗಳು ಕಂಡುಬಂದಿದ್ದು, ಇದರಲ್ಲಿ ಖಾಸಗಿ ಆಸ್ಪತ್ರೆಯಲ್ಲಿ 7, ಸರಕಾರಿ ಆಸ್ಪತ್ರೆಯಲ್ಲಿ 2 ಮಾತ್ರ ಪ್ರಕರಣಗಳು ಕಂಡುಬಂದಿವೆ ಎಂದರು. ಸಾವು ತಪ್ಪಿಸಲು ಯಾರಿಂದಲೂ ಸಾಧ್ಯವಿಲ್ಲವಾದರೂ ನಮ್ಮ ಜವಾಬ್ದಾರಿ ಮಾತ್ರ ಮರೆಯುವಂತಿಲ್ಲವೆಂದರು.

ಸಮಗ್ರ ರೋಗಗಳ ಕಣ್ಗಾವಲು ಯೋಜನೆಯ ಸಾಂಕ್ರಾಮಿಕ ರೋಗಗಳ ಅಂಕಿ ಅಂಶಗಳೊಂದಿಗೆ ರಾಷ್ಟ್ರೀಯ ರೇಬಿಸ್ ನಿಯಂತ್ರಣ ಕಾರ್ಯಕ್ರಮ ಹಾಗೂ ಹಾವು ಕಡಿತ ನಿಯಂತ್ರಣ ಕಾರ್ಯಕ್ರಮ ಅಂಕಿ ಅಂಶಗಳನ್ನು ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆನ್ನವರ ಸಭೆಗೆ ತಿಳಿಸಿದಾಗ, ರೇಬಿಸ್ ಹಾಗೂ ಹಾವು ಕಡಿತ ಪ್ರಕರಣಗಳಿಗೆ ಯಾವುದೇ ರೀತಿಯ ಲಸಿಕೆಗಳ ಕೊರತೆ ಆಗದಂತೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಮೇಲು ದರ್ಜೆ ಆಸ್ಪತ್ರೆಗಳಲ್ಲಿ ಲಸಿಕೆ ದಾಸ್ತಾನು ಇಟ್ಟುಕೊಳ್ಳಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಕೋಟ್ಪಾ ಕಾಯ್ದೆಯಡಿ ತಾಲೂಕಾ ಮಟ್ಟದಲ್ಲಿ ಹೆಚ್ಚಾಗಿ ಕಾರ್ಯಾಚರಣೆ ನಡೆಸಿ ಕೇವಲ ದಂಡ ಹಾಕುವ ಬದಲು ಪ್ರಕರಣ ದಾಖಲಿಸಿಕೊಂಡು ದಂಡ ಮತ್ತು ಶಿಕ್ಷೆಗೆ ಒಳಪಡಿಸುವ ಕಾರ್ಯವಾಗಬೇಕು. ಶಾಲಾ ಕಾಲೇಜುಗಳಲ್ಲಿ 100 ಗಜಗಳಲ್ಲಿ ತಂಬಾಕು ಮಾರಾಟ ಮಾಡದಂತೆ ನೋಡಿಕೊಳ್ಳಬೇಕು. ಈ ಬಗ್ಗೆ ಹೆಚ್ಚಿನ ದೂರುಗಳು ಬರುತ್ತಿವೆ. ಶಾಲಾ ಕಾಲೇಜುಗಳ ಹತ್ತಿರ ತಂಬಾಕು ಮಾರಾಟ ಮಾಡುವ ಅಂಗಡಿಗಳಿದ್ದರೆ ಅವುಗಳನ್ನು ತೆರವುಗೊಳಿಸಲು ಕ್ರಮವಹಿಸಬೇಕು. ತಂಬಾಕು ಮಾರಾಟ ಮಾಡುವ ಅಂಗಡಿಗಳಿಗೆ ಕಡ್ಡಾಯವಾಗಿ ಪರವಾನಿಗೆ ಪಡೆದಿರಬೇಕು. ಇಲ್ಲದಿದ್ದರೆ ಕ್ರಮಕೈಗೊಳ್ಳಬೇಕು ಎಂದು ಜಾನಕಿ ಕೆ.ಎಂ. ಸೂಚಿಸಿದರು.

ಜಿಲ್ಲೆಯ ಒಟ್ಟು 106 ಸರಕಾರಿ ಆಸ್ಪತ್ರೆಗಳಿಗೆ ಸುವ್ಯವಸ್ಥಿತ ಕಾಯಕಲ್ಪ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗಿದೆ. ಇದರಲ್ಲಿ ಒಂದು ಜಿಲ್ಲಾ ಆಸ್ಪತ್ರೆ, ಮೂರು ತಾಲೂಕಾ ಆಸ್ಪತ್ರೆ, 2 ಸಮುದಾಯ ಆರೋಗ್ಯ ಕೇಂದ್ರ 27 ಪ್ರಾಥಮಿಕ ಆರೋಗ್ಯ ಕೇಂದ್ರ, 3 ನಗರ ಆರೋಗ್ಯ ಕೇಂದ್ರ, 71 ಉಪ ಕೇಂದ್ರಗಳು ಇವೆ ಎಂದು ಸಭೆಗೆ ತಿಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಡಿ.ಎನ್, ಜಿಲ್ಲಾ ಲಸಿಕಾ ಅಧಿಕಾರಿ ಡಾ.ರಾಜಕುಮಾರ ಯರಗಲ್ಲ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಅರವಿಂದ ಪಟ್ಟಣಶೆಟ್ಟಿ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಶಿವನಗೌಡ ಪಾಟೀಲ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಕುಸುಮಾ ಮಾಗಿ ಸೇರಿದಂತೆ ತಾಲೂಕಾ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ನಾಳೆ ಮಧ್ಯಸ್ಥಿಕೆಗಾರರಿಗೆ ತರಬೇತಿ ಕಾರ್ಯಕ್ರಮ

ಕಲಬುರಗಿ,ಜ.17:ಕಲಬುರಗಿ, ಬೀದರ, ಯಾದಗಿರ ಮತ್ತು ಉಚ್ಚನ್ಯಾಯಾಲಯ ಕಲಬುರಗಿ ಪೀಠದಲ್ಲಿನ ಮಧ್ಯಸ್ಥಿಕೆಗಾರರಿಗೆ ಇದೇ ಜನವರಿ 18 ಹಾಗೂ 19 ರಂದು ಎರಡು ದಿನಗಳ ಕಾಲ ತರಬೇತಿ ಕಾರ್ಯಕ್ರಮವನ್ನು ಕಲಬುರಗಿ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಎ.ಡಿ.ಆರ್. ಕಟ್ಟಡದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ತಿಳಿಸಿದ್ದಾರೆ.

ಜನವರಿ 18 ರಂದು ಬೆಳಿಗ್ಗೆ 9.30 ಗಂಟೆಗೆ ಕರ್ನಾಟಕ ಉಚ್ಚ ನ್ಯಾಯಾಲಯ ಗೌರವಾನ್ವಿತ ನ್ಯಾಯಮೂರ್ತಿಗಳಾದ ಶ್ರೀಮತಿ ಜೆ.ಎಂ. ಖಾಜಿ ಅವರು ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸುವರು.

# ಜ.19 ರಂದು ಸರ್ದಾರ ಜೋಗಾಸಿಂಗ್‌ಜಿ ಕಲ್ಯಾಣ ಕರ್ನಾಟಕ ಪ್ರಶಸ್ತಿ ಪ್ರದಾನ




ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 17 : ಗುರುನಾನಕ ದೇವ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ದಿ. ಸರದಾರ ಜೋಗಾಸಿಂಗ್‌ಜಿ ಅವರ 92ನೇ ಜನ್ಮ ದಿನಾಚರಣೆ ನಿಮಿತ್ಯ ದಿನಾಂಕ 19–01–2025 ರಂದು ಮುಂಜಾನೆ 11:00 ಗಂಟೆಗೆ ಗುರು ನಾನಕ ದೇವ್ ಇಂಜಿನೀಯರಿಂಗ್ ಕಾಲೇಜಿನಲ್ಲಿರುವ ಗುರು ನಾನಕ ಭವನ್‌ದಲ್ಲಿ ಸರ್ದಾರ ಜೋಗಾ ಸಿಂಗ್‌ಜಿ ಕಲ್ಯಾಣ ಕರ್ನಾಟಕ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಸಮಾರಂಭವು ಕ್ರೀಡೆ, ಸಮಾಜ ಸೇವೆ, ಶಿಕ್ಷಣ, ಮಾನವಿಕ ವಿಷಯಗಳಂತಹ ತಮ್ಮ ಆಯ್ದ ಕಾರ್ಯ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿದ ಜನರನ್ನು ಗುರುತಿಸುವ ಮತ್ತು ಗೌರವಿಸುವ ಗುರಿಯನ್ನು ಹೊಂದಿದೆ. ಪ್ರಶಸ್ತಿಯನ್ನು 2022 ರಲ್ಲಿ ಸ್ಥಾಪಿಸಲಾಗಿದ್ದು, 1969 ರಲ್ಲಿ "ಬುದ್ಧಿವಂತಿಕೆಯ ಸಾರವು ಮಾನವೀಯತೆಯ ಸೇವೆ" ಎಂಬ ಧ್ಯೇಯವಾಕ್ಯದೊಂದಿಗೆ ಶ್ರೀ ನಾನಕ ಝಿರಾ ಸಾಹೇಬ್ ಫೌಂಡೇಷನ್ ಸಂಸ್ಥೆ ಪ್ರಾರಂಭಿಸುವ ಮೂಲಕ ತನ್ನ ಪ್ರಯಾಣವನ್ನು ಪ್ರಾರಂಭಿಸಿದ ಸರ್ದಾರ್ ಜೋಗಾ ಸಿಂಗ್‌ಜಿಯವರ ಸಮಾಜಕ್ಕೆ ಸೇವೆ ಸಲ್ಲಿಸುವ ಪರಂಪರೆಯನ್ನು ಮುಂದುವರೆದಿದೆ ಹಾಗೂ ನಿರಂತರವಾಗಿ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸೇವೆ ನೀಡುತ್ತಿದೆ. ಅಗತ್ಯವಿರುವವರಿಗೆ ಆರೋಗ್ಯ ಮತ್ತು ಪರೋಪಕಾರಿ ಸೇವೆಗಳು ನಡೆಯುತ್ತಿವೆ. ಹೀಗಾಗಿ, ಸಮಗ್ರ ಮತ್ತು ವಿಶೇಷವಾದ ವಿಧಾನದೊಂದಿಗೆ ಬೀದರ್ ಜಿಲ್ಲೆಯ ಜನರ ಉನ್ನತಿಯಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತಿದೆ.

ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ 9 ಜನರಿಗೆ ಸರದಾರ ಜೋಗಾಸಿಂಗ್ ಕಲ್ಯಾಣ ಕರ್ನಾಟಕ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ ಎಂದು ಗುರುನಾನಕ ಸಮೂಹ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷೆ ಡಾ॥ ರೇಷ್ಮಾ ಕೌರ್ ತಿಳಿಸಿದರು.

ಸಮಾರಂಭದ ಮುಖ್ಯ ಅತಿಥಿಗಳಾಗಿ ಅಧ್ಯಕ್ಷರು ಅಲ್ಪಸಂಖ್ಯಾತರ ರಾಷ್ಟ್ರೀಯ ಆಯೋಗ ಭಾರತ ಸರಕಾರದ ಸರದಾರ ಇಕ್ಬಾಲ್ ಸಿಂಗ್ ಲಾಲಪೂರಾ ಮತ್ತು ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ಕರ್ನಾಕಟ ಸರಕಾರ ಶ್ರೀ ರಹೀಮ್ ಖಾನ್ ಭಾಗವಹಿಸಲಿದ್ದಾರೆ.

ಅತಿಥಿಯಾಗಿ ಅಧ್ಯಕ್ಷ ರಾಷ್ಟ್ರೀಯ ಶೈಕ್ಷಣಿಕ ತಂತ್ರಜ್ಞಾನ ವೇದಿಕೆ ಹೊಸ ದೇಹಲಿಯ ಡಾ॥ ಅನೀಲ ಡಿ. ಶಷರಬುಧೆ, ಮಾಜಿ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಮಾಜಿ ಐ.ಎ.ಎಸ್. ಶ್ರೀ ಜಯರಾಜ ಮತ್ತು ಶ್ರೀ ನಾನಕ ಝಿರಾ ಸಾಹೇಬ್‌ನ ಅಧ್ಯಕ್ಷ ಡಾ॥ ಬಲಬೀರ ಸಿಂಗ್ ಉಪಸ್ಥಿತರಿರುವರು.

ಸರದಾರ ಜೋಗಾಸಿಂಗ್‌ಜಿ ಕಲ್ಯಾಣ ಕರ್ನಾಟಕ ಪ್ರಶಸ್ತಿಗೆ ಆಯ್ಕೆಯಾದವರು ಇಂತಿದ್ದಾರೆ

1. ಆಡಿ. Anil D. Sahasrabudhe

Chairman National Educational Technology Forum, New Delhi.

2. Mr. Amarnath Juluri

Vice President and global Head of Enterprise Cloud Applications

LTI Mindtree, Hyderabad.

3. Padma Bhushan Dr. Devi Prasad Shetty

Founder and Chairman of Narayana Health, Bengaluru.

4. Justice P.S. Dinesh Kumar

Retd. Chief Justice High Court of Karnataka and present presiding Officer, Securities Appellate Tribunal (SAT), Mumbai.

5. Sardar Iqbal Singh Lalpura

Chairman, National Commission for Minorities Government of India.

6. Bhai Sahib, Prof. Mohinder Singh Ahluwalia OBE KSG

Chairman, Gru Nanak jNishkam Sewak Jatha United Kingdom.

7. Dr. Muddu Mohan I.A.S. (Retd)

Hindustani Classical Vocalist, Bengaluru.

8. Miss. Pooja Sharma

Founder, Bright the Soul Foundation (NGO), New Delhi

9. Dr. Vivek Jawali

Chairman, Cardiac Sciences & the Executive Council of Fortis Hospitals, Bengaluru.

# ಡಾ.ಅಶೋಕ ಬಡಕಲಿಗೆ ಫೆಲೋಶಿಪ್ ಗೌರವ




ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜ.17:ನಗರದ ಬಿ.ವಿ.ವಿ.ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಚಿಕ್ಕಮಕ್ಕಳ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ.ಅಶೋಕ ಬಡಕಲಿ ಅವರಿಗೆ ಇಂಡಿಯನ್ ಅಕಾಡೆಮಿ ಆಫ್ ಪಿಡಿಯಾಟ್ರಿಕ್ಸ್ ಫೆಲೊಶಿಪ್ ಗೌರವ ನೀಡಿ ಸನ್ಮಾನಿಸಲಾಗಿದೆ.

ಜನೆವರಿ 12 ರಂದು ಹೈದರಾಬಾದಿನಲ್ಲಿ ಆಯೋಜಿಸಲಾಗಿದ್ದ 62 ನೇ ಚಿಕ್ಕಮಕ್ಕಳ ತಜ್ಞರ ರಾಷ್ಟ್ರೀಯ ಸಮಾವೇಶದಲ್ಲಿ ಡಾ. ಬಡಕಲಿ ಅವರಿಗೆ ಫೆಲೊಶಿಪ್ ಗೌರವವನ್ನು ನೀಡಿ ಸನ್ಮಾನಿಸಲಾಯಿತು.

ಚಿಕ್ಕಮಕ್ಕಳ ವೈದ್ಯಕೀಯ ಕ್ಷೇತ್ರದಲ್ಲಿನ ಅವರ ಸಾಧನೆಯನ್ನು ಗುರುತಿಸಿ ಈ ಫೆಲೊಶಿಪ್ ನೀಡಲಾಗಿದೆ. ಕಳೆದ 27 ವರ್ಷಗಳಿಂದ ಚಿಕ್ಕಮಕ್ಕಳ ತಜ್ಞರಾಗಿ ಡಾ.ಅಶೋಕ ಬಡಕಲಿ ಸೇವೆ ಸಲ್ಲಿಸುತ್ತಿದ್ದಾರೆ.

ಇಂಡಿಯನ್ ಅಕಾಡೆಮಿ ಆಫ್ ಪಿಡಿಯಾಟ್ರಿಕ್ಸ್‌ನ ಫೆಲೊಶಿಪ್ ಗೌರವಕ್ಕೆ ಭಾಜನರಾದ ಡಾ.ಅಶೋಕ ಬಡಕಲಿ ಅವರನ್ನು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೊರಾ, ಚಿಕ್ಕಮಕ್ಕಳ ವಿಭಾಗದ ಮತ್ತು ಎಲ್ಲ ವಿಭಾಗಗಳ ವೈದ್ಯರು ಮತ್ತು ಸಿಬ್ಬಂದಿ ಅಭಿನಂದಿಸಿದ್ದಾರೆ.

# ನ್ಯಾಯಾಲಯ ಕಟ್ಟಡದ ಶಂಕುಸ್ಥಾಪನೆ ಇಂದು



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜ .17:ನವನಗರದ ಜಿಲ್ಲಾ ನ್ಯಾಯಾಲಯದ ಸಮುಚ್ಛಯದಲ್ಲಿ ನೂತನವಾಗಿ ನಿರ್ಮಿಸಲಾಗುವ ಹೆಚ್ಚುವರಿ ನ್ಯಾಯಾಲಯ ಕಟ್ಟಡದ ಶಂಕು ಸ್ಥಾಪನಾ ಸಮಾರಂಭ ಶನಿವಾರ ಜ.18 ರಂದು ನಡೆಯಲಿದೆ. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ರಮೇಶ ಬದ್ನೂರ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಬೆಳಿಗ್ಗೆ 10:30ಕ್ಕೆ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಎಚ್.ಪಿ.ಸಂದೇಶ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ರವಿ ಹೊಸಮನಿ ಹಾಗೂ ಹಂಚಾಟೆ ಸಂಜೀವ ಕುಮಾರ ಭಾಗವಹಿಸಲಿದ್ದು, ಕಾನೂನು ಸಚಿವ ಎಚ್.ಕೆ.ಪಾಟೀಲ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ, ಸಚಿವ ಸತೀಶ ಜಾರಕಿಹೊಳಿ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಪಿ.ಎಚ್. ಪೂಜಾರ, ಎಚ್.ಆರ್.ನಿರಾಣಿ ಸೇರಿದಂತೆ ಇತರರು ಪಾಲ್ಗೊಳ್ಳಲಿದ್ದಾರೆ ಎಂದು ಬದ್ನೂರ ತಿಳಿಸಿದರು. ಪ್ರಶಾಂತ ನಾರಾಯಣಕರ, ಜೆ.ಜೆ. ಕುಲಕರ್ಣಿ, ಪಿ.ಎಸ್.ಹಕ್ಕಾಪಕ್ಕಿ ಇದ್ದರು.

# ರಾಜ್ಯದ ಇಂಧನ ಸಚಿವರ ಪ್ರವಾಸ

ಕಲಬುರಗಿ,ಜ.17:ರಾಜ್ಯದ ಇಂಧನ ಸಚಿವರಾದ ಕೆ.ಜೆ. ಜಾರ್ಜ್ ಅವರು ಜನವರಿ 23 ರಂದು ಗುರುವಾರ ಮಧ್ಯಾಹ್ನ 2.40 ಗಂಟೆಗೆ ಬೀದರದಿಂದ ಕಲಬುರಗಿಗೆ ಆಗಮಿಸುವರು.

ನಂತರ ಅಂದು ಮಧ್ಯಾಹ್ನ 3 ಗಂಟೆಗೆ ಕಲಬುರಗಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಭೇಟಿ ನೀಡುವರು. ಸಂಜೆ 4 ಗಂಟೆಗೆ ಕಲಬುರಗಿ ಜೆಸ್ಕಾಂ ನಿಗಮದ ಕಚೇರಿಯಲ್ಲಿ ಇಂಧನ ಇಲಾಖೆಯ ವಿಷಯಗಳ ಕುರಿತು ಚರ್ಚಿಸಲು ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸುವರು. ನಂತರ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು.

## ರಕ್ತದಾನದಿಂದ ಆರೋಗ್ಯದಲ್ಲಿ ಹೊಸ ಚೇತರಿಕೆ, ಮತ್ತು ಚೈತನ್ಯ ಮೂಡುತ್ತದೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 17–ಅಜೀಂಪ್ರೇಮ್‌ಜೀಸ್ಕೂಲ್ ಶಾಲಾ ವಾರ್ಷಿಕೋತ್ಸವದ ಅಂಗವಾಗಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ಶಿಬಿರದಲ್ಲಿ ರಕ್ತದಾನದಿಂದ ಆರೋಗ್ಯದಲ್ಲಿ ಹೊಸ ಚೇತರಿಕೆ, ಮತ್ತು ಚೈತನ್ಯ ಮೂಡುತ್ತದೆ' ಎಂದು ರಕ್ತದಾನ ಶಿಬಿರದಲ್ಲಿ ಶಿಕ್ಷಕರಿಗೆ ಹಾಗೂ ಪಾಲಕರಲ್ಲಿ ಜಾಗೃತಿ ಮೂಡಿಸಲಾಯಿತು ಎಂದು ಜಿಲ್ಲಾಏಡ್ಸ್‌ನಿಯಂತ್ರಣ ಅಧಿಕಾರಿಗಳಾದ ಶ್ರೀಯುತ ಡಾ.ಸಂಜೀವಕುಮಾರ ಸಿಂಗ್ ರಾಯಚೂರ್‌ಕರ್ ಅವರು ಹೇಳಿದರು.

ಯಾದಗಿರಿ ನಗರದ ವಡಗೇರಾ ರಸ್ತೆಯಲ್ಲಿಬರುವಅಜೀಂಪ್ರೇಮ್‌ಜೀ ಸ್ಕೂಲ್ ಸಂಯುಕ್ತಾಶ್ರಯದಲ್ಲಿ ಇಂದು ಜನವರಿ 17ರ ಶುಕ್ರವಾರ ರಂದು ಮಕ್ಕಳ ಕಲಿಕಾ ಮೇಳ ಹಾಗೂ ರಕ್ತದಾನ ಶಿಬಿರವನ್ನು ಕಾರ್ಯಕ್ರಮವನ್ನುಉದ್ಘಾಟಿಸಿ ಅವರು ಮಾತನಾಡಿದರು.

ರಕ್ತದಾನ ಮಹತ್ವದ ಕುರಿತು ಹೇಳುತ್ತಾ 'ರಕ್ತದಾನದಿಂದ ಆರೋಗ್ಯದಲ್ಲಿ ಹೊಸ ಚೇತರಿಕೆ, ಮತ್ತು ಚೈತನ್ಯ ಮೂಡುತ್ತದೆ' ಎಂದು ಶಿಕ್ಷಕರು ಮತ್ತು ಪಾಲಕರಲ್ಲಿ ಜಾಗೃತಿ ಮೂಡಿಸಿದರು. ಶಾಲೆಯ ಪ್ರಾಂಶುಪಾಲರಾದ ಶ್ರೀಯುತ ಅನಿಲ್ ಎಸ್ ಅಂಗಡಿಕಿ ಅವರು ರಕ್ತದಾನದ ಮಹತ್ವದ ಕುರಿತು ಮನವರಿಕೆ ಮಾಡಿಕೊಟ್ಟರು. ಈ ಶಿಬಿರದಲ್ಲಿ 50 ಜನ ದಾನಿಗಳು ರಕ್ತದಾನ ಮಾಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ ಎಂದು ಹೇಳಿದರು.

ಜೊತೆಗೆ ಶಾಲೆಯ ಆವರಣದಲ್ಲಿ ಮಕ್ಕಳ ಕಲಿಕಾ ಮೇಳವನ್ನು ಆಯೋಜಿಸಲಾಗಿದ್ದು 1 ರಿಂದ 10ನೇ ತರಗತಿಯವರೆಗಿನ ಎಲ್ಲಾ ಮಕ್ಕಳು ವಿವಿಧ ವಿಷಯಗಳಲ್ಲಿ ತಾವು ಕಲಿತ ವಿಷಯಾಂಶಗಳನ್ನು ಹಂಚಿಕೊಂಡರು. ಪೋಷಕರು ಮತ್ತುಗಣ್ಯರು ಕಲಿಕಾ ಮೇಳದಲ್ಲಿ ಭಾಗವಹಿಸುವ ಮೂಲಕ ಮಕ್ಕಳ ಚಟುವಟಿಕೆಗಳನ್ನುಕಣ್ತುಂಬಿಕೊಂಡರು ಎಂದು ತಿಳಿಸಿದರು. ಶಾಲಾ ವಾರ್ಷಿಕೋತ್ಸವದ ಮುಂದುವರೆದ ಭಾಗವಾಗಿ ನಾಳೆ 18–01–2025ರ ಶನಿವಾರ ಸಂಜೆ 5 ಗಂಟೆಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಶಿಕ್ಷಕರು ಹಾಗೂ ಪಾಲಕರು ಮತ್ತು ಇನ್ನಿತರರು ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ : ಅರಿವು (ರಿನ್ಯೂವಲ್) ಸಾಲ ಯೋಜನೆಯ ಅರ್ಜಿ ಆಹ್ವಾನ

ಯಾದಗಿರಿ : ಜನವರಿ 17–024–25ನೇ ಸಾಲಿನ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅರಿವು(ರಿನ್ಯೂವಲ್) ಸಾಲ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ವ್ಯವಸ್ಥಾಪಕರು ಅವರು ತಿಳಿಸಿದ್ದಾರೆ.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಿಇಟಿ, ಡಿ–ಸಿಇಟಿ, ಪಿಜಿ–ಸಿಇಟಿ, ನೀಟ್ ಮೂಲಕ ಪದವಿ ಮತ್ತು ಸ್ನಾತ–ಕೋತ್ತರ ಕೋರ್ಸ್‌ಗಳಾದ, ವೈದ್ಯಕೀಯ (ಎಂ.ಬಿ.ಬಿ.ಎಸ್/ಡಿ.ಎಂ.ಎಸ್) ದಂತವೈದ್ಯಕೀಯ(ಬಿ.ಡಿ.ಎಸ್,ಎಂ.ಡಿ.ಎಸ್)ಆಯುಷ್(ಬಿ.ಆಯುಶ್/ಎಂ.ಆಯುಶ್) ಇಂಜಿನಿಯರಿಂಗ್,ಟೆಕ್ನಾಲಜಿ(ಬಿ.ಇ/ಬಿ.ಟೆಕ್/ಎಂ.ಇ/ಎಂ.ಟೆಕ್)ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್(ಬಿ.ಆರ್ಕ್/ಎಂ.ಆರ್ಕ್),ಬಿ.ಎಸ್.ಇ ಹೊರಟಿಕಲ್ಚರ್ ಇಂಜಿನಿಯರಿಂಗ್, ಫಾರ್ಮಸಿ, ಕೃಷಿ ವಿಜ್ಞಾನ ಮತ್ತು ಫಾರ್ಮಾಸ್ಯುಟಿಕಲ್, ಮುಂತಾದ ಕೋರ್ಸ್‌ಗಳಲ್ಲಿ ಆಯ್ಕೆಯಾಗಿರುವಂತಹ ಮತೀಯ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ (ಅಂದರೆ ಮುಸಲ್ಮಾನರು,ಕ್ರೈಸ್ತರು, ಜೈನರು, ಭೌದ್ಧ ಧರ್ಮಿಯರು ಸಿಖ್ಖರು ಮತ್ತು ಪಾರ್ಸಿ) ಸಮುದಾಯದವರಿಗೆ "ಅರಿವು (ರಿನ್ಯೂವಲ್)" ವಿದ್ಯಾಭ್ಯಾಸ ಸಾಲ ಯೋಜನೆಯಡಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಅರ್ಜಿಗಳನ್ನು ಸಲ್ಲಿಸುವಾಗ ನಿಗಮದಿಂದ ಈ ಹಿಂದಿನ ವರ್ಷದಲ್ಲಿ ಪಡೆದಿರುವ ಸಾಲದ ಮೊತ್ತದ ಶೇ.12 ರಷ್ಟನ್ನು ಪಾವತಿಸಬೇಕಾಗಿರುತ್ತದೆ. ಶೇ.12 ರಷ್ಟು ಮೊತ್ತವನ್ನು ಆನ್‌ಲೈನ್ ಮುಖಾಂತರ ಪಾವತಿಸಬಹುದು. ಈ ಹಿಂದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿದ್ದು, ಬೇರೆಬೇರೆ ವರ್ಷಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಅರಿವು ವಿದ್ಯಾಭ್ಯಾಸ ಸಾಲ ಪಡೆಯದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು, ರಿನ್ಯೂವಲ್ ಮೊತ್ತವನ್ನು ಪಾವತಿಸುವುದು ಅಗತ್ಯವಿರುವುದಿಲ್ಲ. ವೆಬ್‌ಸೈಟ್ ಇಟಜಭಿಠಟಿಟುಟಿಜ.ಇಚಿಡಿಟಿಚಿ–ಣಚಿಇಚಿ.ರಡಿತಿ.ಟಿನಲ್ಲಿ "ಆನ್‌ಲೈನ್" ಮೂಲಕ 2025ರ ಜನವರಿ 31ರ ಒಳಗೆ ಅರ್ಜಿ ಸಲ್ಲಿಸಬೇಕು, ನಂತರ ಮೂಲ ದಾಖಲಾತಿಗಳನ್ನು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ಸಂ.8277799990 ಸಂಪರ್ಕಿಸಬಹುದು. ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಸದ ಇ.ತುಕಾರಾಂ ನೂತನ ಕಛೇರಿ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಅಖಂಡ ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದ ಈ.ತುಕಾರಾಂ ನಗರದ ಜಿಲ್ಲಾ ನಗರಾಭಿವೃದ್ಧಿ ಕೋಶ ಕಚೇರಿಯಲ್ಲೇ ನೂತನ ಕಚೇರಿಯನ್ನು ಇಂದು ವಿದ್ಯುಕ್ತವಾಗಿ ಆರಂಭಿಸಿದರು.

ಜಿಲ್ಲಾಧಿಕಾರಿ ಕಛೇರಿ ಪಕ್ಕದಲ್ಲಿ ಹಲವು ವರ್ಷಗಳಿಂದ ನಗರ ಯೋಜನಾ ನಿರ್ದೇಶಕರ ಕಛೇರಿಯಾಗಿದ್ದ ಕಟ್ಟಡವನ್ನು ನೂತನವಾಗಿ ಸಂಸದರ ಕಛೇರಿ ಮಾರ್ಪಾಡು ಮಾಡಿ ಇಂದು ಸಂಸದ ಈ.ತುಕಾರಾಂ ಸಂಡೂರು ಶಾಸಕಿ ಅನ್ನಪೂರ್ಣಾ ಮಾಜಿ ಸಂಸದ ಕೆ.ಸಿ.ಕೊಂಡಯ್ಯರವರು ಉದ್ಘಾಟಿಸಿದ್ದಾರೆ. ಈ ಸಂಧರ್ಭದಲ್ಲಿ ಬುಡಾ ಅಧ್ಯಕ್ಷ ಜೆ.ಎಸ್.ಆಂಜನೇಯಲು,ರಾಜ್ಯ ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ನಿಗಮದ ಅಧ್ಯಕ್ಷ ಮುಂಡ್ರಿಗಿ ನಾಗರಾಜ್, ಮೇಯರ್ ಮುಲ್ಲಂಗಿ ನಂದೀಶ್, ಡಿಸಿಸಿ ಅಧ್ಯಕ್ಷ ಅಲ್ಲಂ ಪ್ರಶಾಂತ್, ಡಿಸಿಸಿ ಕಾರ್ಯಾಧ್ಯಕ್ಷ ಬೋಯಾಪಾಟಿ ವಿಷ್ಣುವರ್ಧನ್, ಮುಖಂಡರಾದ ಬಿ.ಎಂ.ಪಾಟೀಲ್,ಗೌಸೀಯಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಹಣಕಾಸಿನ ಸಂಸ್ಥೆಗೆ ಒಳ್ಳೆಯ ವ್ಯಕ್ತಿಗಳನ್ನು ಆಯ್ಕೆ ಮಾಡಿ: ಹಿರೇಮಠ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಹಣಕಾಸಿನ ಸಂಸ್ಥೆಯನ್ನು ನಡೆಸುವವರು ಸಾರ್ವಜನಿಕರ ವಿಶ್ವಾಸಕ್ಕೆ ಪಾತ್ರರಾಗಿರಬೇಕು,ಸಂಸ್ಥೆ ಕುರಿತು ಅವರಿಗೆ ಪ್ರಾಮಾಣಿಕ ಕಾಳಜಿ ಇರಬೇಕು.ಕೆಟ್ಟ ವ್ಯಕ್ತಿಗಳಿಂದಾಗಿ ಇಂದು ಎಷ್ಟೋ ಹಣಕಾಸಿನ ಸಂಸ್ಥೆಗಳು ಹಾಳಾಗಿ ಮುಚ್ಚಿ ಹೋಗಿವೆ ಆದ್ದರಿಂದ ಒಳ್ಳೆಯ ವ್ಯಕ್ತಿಗಳನ್ನು ಆಯ್ಕೆ ಮಾಡಿ ಕಳಿಸಿ ಎಂದು ಪಟ್ಟಣದ ಪ್ರತಿಷ್ಠಿತ ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ವಿ.ಸಿ.ಹಿರೇಮಠ ಹೇಳಿದರು. ಶುಕ್ರವಾರ ಪಟ್ಟಣದ ವಿ.ವಿ.ಸಂಘದ ಸಭಾಂಗಣದಲ್ಲಿ ತಾಳಿಕೋಟಿ ಸಹಕಾರಿ ಬ್ಯಾಂಕ್ ಚುನಾವಣೆ ಅಂಗವಾಗಿ ಹಮ್ಮಿಕೊಂಡ ಅಭ್ಯರ್ಥಿಗಳ ಮತಯಾಚನೆ ಸಭೆಯಲ್ಲಿ ಅವರು ಮಾತನಾಡಿದರು. ಹಳೆಯ ಪೆನಲ್ ಅಭ್ಯರ್ಥಿಗಳು ಈ ಬ್ಯಾಂಕಿನಲ್ಲಿ ಉತ್ತಮ ಆಡಳಿತ ನಡೆಸಿ ಬ್ಯಾಂಕ್ ನ್ನು ಅಭಿವೃದ್ಧಿಯಡೆಗೆ ತೆಗೆದುಕೊಂಡು ಹೋಗಿದ್ದಾರೆ ಅವರನ್ನು ಮತ್ತೇ ಗೆಲ್ಲಿಸಲು ಮತ ಆಶೀರ್ವಾದ ಮಾಡಿ ಎಂದರು. ಪುರಸಭೆ ಸದಸ್ಯ ವಾಸುದೇವ ಹೆಬಸೂರ ಮಾತನಾಡಿ ಕೇಶಲ 25 ಸಾವಿರ ಬಂಡವಾಳದೊಂದಿಗೆ ಆರಂಭಗೊಂಡ ಈ ಬ್ಯಾಂಕು ಇಂದು 225 ಕೋಟಿ ಬಂಡವಾಳವನ್ನು ಹೊಂದಿದೆ, ಇದಕ್ಕೆ ನಮ್ಮ ಹಿರಿಯರ ತ್ಯಾಗ ಬಹಳಷ್ಟು ಇದೆ,ಅವರು ಹಾಕಿಕೊಟ್ಟ ಮಾರ್ಗದಲ್ಲಿಯೇ ಈ ಪೆನಲ್ ನವರು ಕೆಲಸ ಮಾಡುತ್ತಾ ಬಂದಿದ್ದಾರೆ ಅವರಿಗೆ ನೀವು ಮತ್ತೊಮ್ಮೆ ಮತ ಆಶೀರ್ವಾದ ಮಾಡಿ ಆಯ್ಕೆಯಾಗಲು ಸಹಕರಿಸಿ ಎಂದರು. ಓಲ್ಡ್ ಈಸ್ ಗೋಲ್ಡ್ ಪೆನಲ್ ಅಭ್ಯರ್ಥಿಗಳಾದ ಮುರಿಗೆಪ್ಪ ಸರಸಟ್ಟಿ, ಕಾಶಿನಾಥ ಸಜ್ಜನ ಹಾಗೂ ದ್ಯಾಮನಗೌಡ ಪಾಟೀಲ ಮಾತನಾಡಿ ಕಳೆದ ಕೆಲವು ಅವಧಿಗಳಿಂದ ಈ ಬ್ಯಾಂಕಿನ ನಿರ್ದೇಶಕರಾಗಿ ನಾವು ಅತ್ಯಂತ ಪ್ರಾಮಾಣಿಕವಾಗಿ ನಿಸ್ವಾರ್ಥ ಭಾವದಿಂದ ಬ್ಯಾಂಕಿನ ಏಳಿಗೆಗಾಗಿ ಕೆಲಸ ಮಾಡಿ ಎಲ್ಲ ವರ್ಗದ ಜನರ ಹಿತ ಕಾಯುತ್ತಾ ಬಂದಿದ್ದೇವೆ ಬ್ಯಾಂಕನ್ನು ಇನ್ನಷ್ಟು ಅಭಿವೃದ್ಧಿಗೊಳಿಸಲು ನಮ್ಮದೇ ಆದ ಕೆಲವು ಯೋಜನೆಗಳಿವೆ ಇವುಗಳ ಅನುಷ್ಠಾನಕ್ಕಾಗಿ ಮತ್ತೇ ನಮಗೆ ಆಶೀರ್ವಾದ ಮಾಡಿ ಎಂದು ಮನವಿ ಮಾಡಿಕೊಂಡರು. ವಿವಿ ಸಂಘದ ಸಹ ಕಾರ್ಯದರ್ಶಿ ಕಾಶಿನಾಥ ಮುರಾಳ ಪ್ರಾಸ್ತಾವಿಕವಾಗಿ ಮಾತನಾಡಿ ಈ ಪೆನಲ್ ದವರು ಬ್ಯಾಂಕಿನ ಅಭಿವೃದ್ಧಿಗಾಗಿ ಸಾಕಷ್ಟು ಕೆಲಸವನ್ನು ಮಾಡಿದ್ದಾರೆ ಈಗಾಗಲೇ ನಾಲ್ಕು ಶಾಖೆಗಳಿದ್ದು ಇನ್ನೆರಡು ಶಾಖೆಗಳನ್ನು ತೆರೆಯಬೇಕೆಂಬುದು ಅವರ ಯೋಜನೆಯಾಗಿದೆ,ಅವರ ಗೆಲುವಿಗೆ ತಾವೆಲ್ಲರೂ ಆಶೀರ್ವಾದ ಮಾಡಬೇಕು ಎಂದರು. ವಿ.ವಿ.ಸಂಘದ ಉಪಾಧ್ಯಕ್ಷ ಬಿ.ಎನ್. ಹಿಪ್ಪರಗಿ ಪೆನಲ್ ಅಭ್ಯರ್ಥಿಗಳಾದ ದತ್ತಾತ್ರೆಯ ಹೆಬಸೂರ, ಈಶ್ವರಪ್ಪ ಬಿಳೇಭಾವಿ, ಬಾಬು ಹಜೇರಿ, ಚಿಂತಪ್ಪಗೌಡ ಯಾಳಗಿ, ನಾಗಪ್ಪ ಚಿನಗುಡಿ, ಸುರೇಶ್ ಪಾಟೀಲ, ರಾಮಣ್ಣ ಕಟ್ಟಿಮನಿ, ಸಂಜೀವಪ್ಪ ಬರದೇನಾಳ,ರಾಮಪ್ಪ ಕಟ್ಟಿಮನಿ,ಗಿರಿಜಾಬಾಯಿ ಕೊಡಗಾನೂರು ಶೈಲಾ ಬಡದಾಳಿ ಹಾಗೂ ವಿ.ವಿ. ಸಂಘದ ಎಲ್ಲ ಅಂಗ ಸಂಸ್ಥೆಗಳ ಅಧ್ಯಕ್ಷರು ನಿರ್ದೇಶಕರು ಉಪನ್ಯಾಸಕರ ಹಾಗೂ ಸಿಬ್ಬಂದಿಗಳು ಇದ್ದರು. ನಿರ್ದೇಶಕ ಚನ್ನಮಲ್ಲು ಕತ್ತಿ ನಿರೂಪಿಸಿ ವಂದಿಸಿದರು.

### ಇಂದಿನ ಮಕ್ಕಳು ಆಧುನಿಕ, ಅಭಿವೃದ್ಧಿ ಹೊಂದಿದ

## ಭಾರತದ ನಿರ್ಮಾಪಕರು: ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.17–ಇಂದಿನ ಮಕ್ಕಳು ಆಧುನಿಕ ಮತ್ತು ಅಭಿವೃದ್ಧಿಹೊಂದಿದ ಭಾರತದ ನಿರ್ಮಾಪಕರು,ಆದ್ದರಿಂದ ಅವರ ಶಿಕ್ಷಣ ಮತ್ತು ಕಲ್ಯಾಣ ಮತ್ತು ಅವರಲ್ಲಿ ನೈತಿಕ ಗುಣಗಳ ಅಭಿವೃದ್ಧಿಗೆ ವಿಶೇಷ ಗಮನ ನೀಡಬೇಕು ಎಂದು ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಬಳ್ಳಾರಿ ಜಿಲ್ಲೆಯ ಎಸ್‌ಬಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ ನಲ್ಲಿ ಬೃಂದಾ ನ್ಯಾಷನಲ್ ಪಬ್ಲಿಕ್ ಸ್ಕೂಲ್, ಬೃಂದಾ ಪಿಯು ಕಾಲೇಜು, ಬೃಂದಾ ಪದವಿ ಕಾಲೇಜು ಮತ್ತು ಸ್ಕಂದ ಇನ್‌ಸ್ಟಿಟ್ಯೂಷನ್ ಆಫ್ ನರ್ಸಿಂಗ್ ಅನ್ನು ಉದ್ಘಾಟಿಸಿ,ಅಂಕುರಂ–2025 ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜೀವನದ ಯಶಸ್ಸಿನಲ್ಲಿ ಶಿಕ್ಷಣವು ದೊಡ್ಡ ಪಾತ್ರವನ್ನು ವಹಿಸುತ್ತದೆ,ಶಿಕ್ಷಣವು ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ಉಪಯುಕ್ತವಾಗಿದೆ, ಒಬ್ಬ ವ್ಯಕ್ತಿಯು ಶಿಕ್ಷಣ ಪಡೆದಾಗ ಅವನ ಅಭಿವೃದ್ಧಿಯು ಉತ್ತಮವಾಗಿರುತ್ತದೆ. ಶಿಕ್ಷಣವು ನಮಗೆ ಆಲೋಚನೆಗಳನ್ನು ವ್ಯಕ್ತಪಡಿಸುವ ಸಾಮರ್ಥ್ಯವನ್ನು ಒದಗಿಸುತ್ತದೆ. ಶಿಕ್ಷಣವನ್ನು ಎಂದಿಗೂ ಕದಿಯಲಾಗುವುದಿಲ್ಲ, ಶಿಕ್ಷಣವು ಎಂದಿಗೂ ವ್ಯರ್ಥವಾಗುವುದಿಲ್ಲ ಎಂದು ಹೇಳಿದರು.

ಸ್ವಾಮಿ ವಿವೇಕಾನಂದರು 'ನಮಗೆ ಅಂತಹ ಶಿಕ್ಷಣ ಬೇಕು, ಅದು ಚಾರಿತ್ರ್ಯವನ್ನು ನಿರ್ಮಿಸುತ್ತದೆ, ಮಾನಸಿಕ ಬೆಳವಣಿಗೆಯನ್ನು ಅಭಿವೃದ್ಧಿಪಡಿಸುತ್ತದೆ, ಬುದ್ಧಿವಂತಿಕೆಯನ್ನು ಅಭಿವೃದ್ಧಿಪಡಿಸುತ್ತದೆ ಮತ್ತು ಮನುಷ್ಯನನ್ನು ತನ್ನ ಸ್ವಂತ ಕಾಲಿನ ಮೇಲೆ ನಿಲ್ಲುವಂತೆ ಮಾಡುತ್ತದೆ.', 'ಎದ್ದೇಳಿ, ಎಚ್ಚರಗೊಳ್ಳಿ ಮತ್ತು ಗುರಿಯನ್ನು ಸಾಧಿಸುವವರೆಗೆ ನಿಲ್ಲಬೇಡಿ.' ಎಂದು ಹೇಳಿದ್ದರು. ಅವರ ಮಾರ್ಗದರ್ಶನದಲ್ಲಿ ಪ್ರತಿಯೊಬ್ಬ ಯುವಪೀಳಿಗೆ ನಡೆದು, ದೇಶದ ಅಭಿವೃದ್ಧಿಯಲ್ಲಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಪ್ರತಿಯೊಂದು ಮೂಲೆಯೂ, ಪ್ರತಿ ತರಗತಿಯೂ ಮತ್ತು ಇಲ್ಲಿನ ಪ್ರತಿಯೊಂದು ಚಟುವಟಿಕೆಯೂ ನಿಮ್ಮ ಅಭಿವೃದ್ಧಿಗೆ ಮೀಸಲಾಗಿದೆ. ನೀವು ಪ್ರತಿದಿನ ಹೊಸ ಕಲಿಕೆಯೊಂದಿಗೆ ಪ್ರಾರಂಭಿಸಿ. ವೈಫಲ್ಯದ ಬಗ್ಗೆ ಎಂದಿಗೂ ಭಯಪಡಬೇಡಿ, ಏಕೆಂದರೆ ಈ ವೈಫಲ್ಯಗಳು ನಿಮ್ಮನ್ನು ಬಲಪಡಿಸುತ್ತವೆ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಎಸ್‌ಬಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್‌ಗಳ ಸಂಸ್ಥೆಗಳು ಶಿಕ್ಷಣವನ್ನು ಕೌಶಲ್ಯ ಮತ್ತು ನೈತಿಕ ಮೌಲ್ಯಗಳೊಂದಿಗೆ ಜೋಡಿಸುವ ಮೂಲಕ ಹೊಸ ಭಾರತ, ಉತ್ತಮ ಭಾರತವನ್ನು ರಚಿಸುವ ದೃಷ್ಟಿಯ ಕಡೆಗೆ ಕೆಲಸ ಮಾಡುತ್ತವೆ ಎಂಬ ಭರವಸೆ ಇದೆ ಎಂದು ಹೇಳಿ ಶುಭ ಹಾರೈಸಿದರು.

ಸಮಾರಂಭದಲ್ಲಿ ಶಾಸಕ ಜನಾರ್ದನ ರೆಡ್ಡಿ, ಮಾಜಿ ಶಾಸಕ ಎಸ್.ಟಿ.ಸೋಮಶೇಖರ್ ರೆಡ್ಡಿ ಮುಂತಾದ ಗಣ್ಯರು ಉಪಸ್ಥಿತರಿದ್ದರು.

# ರಸ್ತೆ ಸಂಚಾರ ನಿಯಮ ತಪ್ಪದೇ ಪಾಲಿಸಿ:ಅಮರಪ್ಪ ಶಿವಬಲ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ರಸ್ತೆ ಮೇಲೆ ಸಂಚಾರ ಮಾಡುವಾಗ ಎಲ್ಲರೂ ತಪ್ಪದೇ ಸಂಚಾರ ನಿಯಮಗಳನ್ನು ಪಾಲಿಸಬೇಕು, ಯಾವದೇ ಕಾರಣಕ್ಕೂ ನಿಮ್ಮ ವಾಹನಗಳನ್ನು ನಿಯಮ ಬಾಹಿರ ನಡೆಸಬಾರದು ಎಂದು ಕಮಲನಗರ ಪೊಲೀಸ ಠಾಣಾ ಸಿಪಿಐ ಅಮರಪ್ಪ ಶಿವಬಲ ಅವರು ಹೇಳಿದರು.

ತಾಲೂಕಿನ ಮುರ್ಕಿ ಗ್ರಾಮದ ಮುಖ್ಯರಸ್ತೆ ಪಕ್ಕದಲ್ಲಿ ಶುಕ್ರವಾರ ನಡೆದ "ರಾಷ್ಟ್ರೀಯ ರಸ್ತೆ ಸಪ್ತಹ" ಕಾರ್ಯಕ್ರಮದ ನೇತೃತ್ವ ವಹಿಸಿ ಅವರು ಮಾತನಾಡಿದರು, ರಸ್ತೆ ಸುರಕ್ಷತೆ, ಚಾಲಕರಿಗೆ ಪ್ರಮುಖ ಮಾರ್ಗಸೂಚಿಗಳು, ಪೊಲೀಸ್ ಸಿಗ್ನಲ್ ಪಾಲಿಸಿ ನಿಮ್ಮ ವಾಹನವನ್ನು ಪಾಕಿಂ–ರ್ಗ್ ಏರಿಯಾಗಳಲ್ಲಿ ಮಾತ್ರ ನಿಲ್ಲಿಸಬೇಕು ಎಂದು ಹೇಳಿದರು.

ಪಿ.ಎಸ್.ಐ ಚಂದ್ರಶೇಖರ ನಿರ್ಣೆ ಮಾತನಾಡಿ, ರಸ್ತೆ ಅಪಘಾತಗಳಿಗೆ ಬಹಳಷ್ಟು ಜನರು ಬಲಿಯಾಗುತ್ತಾರೆ. ಅಪಘಾತಕ್ಕೆ ಸಾಕ್ಷಿಯಾಗುವುದು ವ್ಯಕ್ತಿಯ ಮನಸ್ಸಿನ ಮೇಲೆ ದೊಡ್ಡ ಪ್ರಭಾವವನ್ನು ಬೀರಬಹುದು. ಅಂತಹ ದುರದೃಷ್ಟವನ್ನು ಅನುಭವಿಸಬೇಕಾದವರ ಪರಿಸ್ಥಿತಿಯನ್ನು ಊಹಿಸಿ. ಅದಕ್ಕಾಗಿಯೇ ಭಾರತ ಸರ್ಕಾರವು ಯಾವಾಗಲೂ ರಸ್ತೆ ಸುರಕ್ಷತಾ ನಿಯಮಗಳನ್ನು ಅನುಸರಿಸಲು ಒತ್ತಾಯಿಸುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಿ.ಪಿ.ಐ (ತನಿಖೆ) ಬಾಲಾಜಿ, ಲೋಕೇಶ, ಸಂತೋಷ್ ಸೇರಿದಂತೆ ಮುರ್ಕಿ ಗ್ರಾಮಸ್ಥರು ಇದ್ದರು.

# ದೇವರಿಗೊಂದು ಮನವಿ

**ಮರೆಯುವ ಶಕ್ತಿ ಕೊಡು ದೇವರೇ ಎಲ್ಲವನ್ನೂ ಮರೆತು ಸುಮ್ಮನಿದ್ದು ಬಿಡುವೆ.ನಾನು ನನ್ನಿಂದಲೆ ಎಲ್ಲ ಎಂದು ಮೆರೆಯುವದನ್ನು,ಎಲ್ಲರೂ ನನ್ನವರೆಂದು ಸುಖಾ ಸುಮ್ಮನೇ ನಾನು ಕಂಡವರ ಜೊತೆಗೆ ಬೆರೆಯುವದನ್ನು...**

ಮರೆಯುವ ಶಕ್ತಿ ಕೊಡು ದೇವರೇ ನನಗೆ ಆಗಾಗ ಆದ ಕೇಡನ್ನು

ಮುಷ್ಟಿ ಗಾತ್ರದ ಎದೆಗೆ ನೀನು ಮೊಗೆ ಮೊಗೆದು ಕೊಟ್ಟ ನೋವನ್ನು...

ಅಷ್ಟೇ ಅಲ್ಲ ಆಗಾಗ ಅಲ್ಲಲ್ಲಿ ನನ್ನ ಶಕ್ತಿ ಮೀರಿ ನಾನು ಮಾಡಿರುವ ಒಳಿತನ್ನೂ...

ಮರೆಯುವ ಶಕ್ತಿ ಕೊಡು ದೇವರೇ.ಸ್ವಾರ್ಥ, ತೀರ್ಥ, ವಿನಾಕಾರಣದ ಜಗಳ,ಹುಸಿ ಮುನಿಸು,ಕೆಟ್ಟ ಕೋಪ,ಯಾವ ಕಾರಣಕ್ಕೋ ನನ್ನ ಆತ್ಮಕ್ಕೆ ಆದ ತಾಪ...

ಎಲ್ಲವನ್ನೂ ಮರೆಯಬೇಕಿದೆ

ಹಳೆಯ ನೆನಪುಗಳು ಕಾಡಿ ನೋಯಿಸಿದ್ದನ್ನು,ಹುಟ್ಟಿದ ಪ್ರೀತಿಯನ್ನು ಯಾರೋ ಸಾಯಿಸಿದ್ದನ್ನು,ಮರೆಯಬೇಕಿರುವದು ಬಹಳ ಇದೆ.

ಮರೆಯುವ ಶಕ್ತಿ ಕೊಡು ದೇವರೇ

ನಾನು ಮಾಡಿದ ಉಪಕಾರವನ್ನು,

ಅಪಾತ್ರರು ಯಾರಿಗೋ ನಾ

ತೋರಿದ ಪ್ರೀತಿಯನ್ನು, ಅಷ್ಟೇ ಯಾಕೆ ನನ್ನ ಎದೆಗೆ ಇರಿದವರ ಮುಖಗಳನ್ನೂ....

ಮರೆಯುವ ಶಕ್ತಿ ಕೊಡು ದೇವರೇ ನನ್ನ ನಂಬಿಸಿ ವಂಚಿಸಿದವರನ್ನು,

ಮತ್ತು ನನ್ನನ್ನೆ ನಂಬಿ ಏನನ್ನೊ ಬಯಸಿ ಬಸವಳಿದು ಬಂದವರನ್ನು,ನನ್ನ ಖಾಲಿ ಕೈಗಳ ನೋಡಿ ಒಳ ತುಮುಲಗಳ ಹೇಳದೆ ಎದ್ದು ಹೋದವರನ್ನು...

ಮರೆಯುವ ಶಕ್ತಿ ಕೊಡು ದೇವರೇ

ಬೆಳಿಗ್ಗೆ ಅಷ್ಟೇ ಅರಳಿ,ಸುವಾಸನೆಯ ಬೀರಿ ನಿನ್ನ ಮುಡಿಗೆ ಏರದೆ ಮಸಣದ ಮಗ್ಗುಲಿಗೂ ಹೊರಳದೆ ಬಾಡಿದ ಕುಸುಮಗಳನ್ನು

ಮರೆಯುವ ಶಕ್ತಿ ಕೊಡು ದೇವರೇ

ಕೊಟ್ಟಂತೆ ಮಾಡಿ ನೀನು ಕಿತ್ತುಕೊಂಡ ಹಲವರ ಬದುಕಿನ ಸುಖಗಳನ್ನು.ಮತ್ಯಾರದೋ ಹಣೆಯಲ್ಲಿ ನೀನು ಬರೆದಿರುವದನು ನೋಡಿ ವಿಧಿ ತನ್ನ ಅಟ್ಟಹಾಸ ಮೆರೆಯುವದನ್ನು...

ಮರೆಯುವ ಶಕ್ತಿ ಕೊಡು ದೇವರೇ

ಮಕ್ಕಳ ಕಳೆದುಕೊಂಡವರ ಪುತ್ರಶೋಕವನ್ನು,ಹಸಿದ ಹೊಟ್ಟೆಗೆ ಈಗಷ್ಟೇ ತಣ್ಣೀರ ಬಟ್ಟೆಯ ಕಟ್ಟಿ ನಿದ್ದೆಗೆ ಜಾರ ಹೊರಟವರು ತಮಗಾದ ಹಸಿವನ್ನು ಮತ್ತೆ ಮತ್ತೆ ನೆನೆಯುವದನ್ನು...

ಮರೆಯುವ ಶಕ್ತಿ ಕೊಡು ದೇವರೇ

ಅಮ್ಮನಿಲ್ಲದ ತಬ್ಬಲಿ ಕಂದಮ್ಮಗಳು ಅವಳಿಗಾಗಿ ಅಳುವದನ್ನು,ವಿಧವೆಯೊಬ್ಬಳು ತನ್ನ ಗತಕಾಲವ ನೆನೆದು ಕಣ್ಣೀರು ಸುರಿಸುವದನ್ನು,

ಮರೆಯುವ ಶಕ್ತಿ ಕೊಡು ದೇವರೇ ವೃದ್ಧಾಶ್ರಮದಲ್ಲಿ

ಇರುವ ಎಲೆ ಉದುರಿದ ಮರಗಳು ಎಂದೋ ಹಕ್ಕಿಗಳ ನೆನಪು ತೆಗೆದು ಬಿಕ್ಕುವದನ್ನು.

ಮರೆಯುವ ಶಕ್ತಿ ಕೊಡು ದೇವರೇ

ಮಕ್ಕಳ ಹೆತ್ತವರು ಹಂಗಿಸಿದಾಗೆಲ್ಲ

ಕಣ್ಣ ನೀರಿನ ಬದಲು ನೆತ್ತರನ್ನೇ ಹರಿಸಿ ಬಂಜೆಯೊಬ್ಬಳು ಖಾಲಿ ತೊಟ್ಟಿಲ ತೂಗುವದನ್ನು.

ವೇಶ್ಯೆಯೊಬ್ಬಳು ಸಿಕ್ಕ ಹೆಣ್ಣುಮಗುವಿನ ಚುಕ್ಕು ತಟ್ಟಿ

ತನ್ನ ಕಡೆಗಾಲದ ಆಸರೆ ಎಂದು ಅದಕ್ಕೆ


ಲಾಲಿ ಹಾಡುವದನ್ನು.

ಸಾಧ್ಯವಾದರೆ ನೆನಪಿಸಿ ಬಿಡು ಅಬಲೆ,ಅಮಾಯಕ,ಅಪ್ರಾಪ್ತ ಜೀವಗಳ ಮೇಲೆ ಎರಗಲು ಹೊರಟ ಕಾಮಾಂಧರಿಗೆ ಅವರ ಹೆತ್ತ ತಾಯಿ ಇಂತ ಕಾಮ ಪಿಪಾಸುಗಳ ಹೆರುವಾಗ ಜೀವನ್ಮರಣದ ಮಧ್ಯೆ ನರಳಿರುವದನ್ನು.

ಮರೆಯುವ ಶಕ್ತಿ ಕೊಡು ದೇವರೇ...

ಕಾದ ಕುಲುಮೆಗೆ ಬಿದ್ದ ಕತ್ತಿ,ಚೂರಿ,ಹತಿಯಾರುಗಳಷ್ಟೇ ಅಲ್ಲ ಬಂದೂಕಿನ ನಳಿಕೆಯಿಂದ ಹೊರಟ ಗುಂಡು ಕಾಡ ತೂಸುಗಳು ತಮ್ಮ ಗುರಿಯ ತಲುಪುವದನ್ನು...

ತಂತಿ ಬೇಲಿಗಳ ಹಾಕಿ ಗಡಿ ಸರಹದ್ದುಗಳ ಮಾಡಿದ ಮನುಷ್ಯ, ಮನುಷ್ಯ ರೂಪಗಳ ನೋಡಿ ದ್ವೇಷ ಕಾರುವದನ್ನು.



**ವೀರೇಶ್**
**ಟಕ್ಕಳಕಿ ಕೆಂಭಾವಿ : ಸಂಭಾಷಣಕಾರರು ಹಾಗೂ ಪತ್ರಕರ್ತರು**

## ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಸಂದರ್ಶನ ಜ.22ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಜನವರಿ.17:– ಬೀದರ ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಜನವರಿ.22 ರಂದು ಬೆಳಿಗ್ಗೆ 11 ಗಂಟೆಗೆ ಬೀದರ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ ಎಂದು ಬೀದರ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಭ್ಯರ್ಥಿಗಳು 10ನೇ ತರಗತಿ ಉತ್ತೀರ್ಣರಾಗಿದ್ದು,ಕಡ್ಡಾಯವಾಗಿ 18 ವರ್ಷ ವಯಸ್ಸಾಗಿರಬೇಕು, ನಿರುದ್ಯೋಗಿ ಹಾಗೂ ಸ್ವಯಂ ಉದ್ಯೋಗನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಏಜೆಂಟರು ಹಾಗೂ ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆ–ಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳಿಗೆ ಆಯ್ಕೆಯಾದ ಪಕ್ಷದಲ್ಲಿ ಅವಕಾಸ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ರೂ. 5000 ಗಳನ್ನು ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ ವಿಕಾಸ ಪತ್ರದ ರೂಪದಲ್ಲಿ ಭದ್ರತಾ ಠೇವಣಿಯನ್ನು ಇಡಬೇಕಾಗುತ್ತದೆ. ಆಯ್ಕೆಯಾದ ನೇರ ಪ್ರತಿನಿಧಿಗಳಿಗೆ ಅವರು ಮಾಡಿದ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮೀಷನ್ ನೀಡಲಾಗುವುದು. ನಿಗದಿತ ವೇತನವು ಇರುವುದಿಲ್ಲ. ಅಭ್ಯರ್ಥಿಗಳು ಬೇರೆ ಯಾವುದೇ ವಿಮಾ ಕಂಪನಿ/ಸಂಸ್ಥೆ/ಸಂಘಗಳ ಏಜೆಂಟ ಆಗಿರಬಾರದು. ನುರಿತ ಸಂವಹನ ಕಲೆ ಹಾಗೂ ವಿಮಾ ಮಾರಾಟ ಕ್ಷೇತ್ರದಲ್ಲಿ ಪುರ್ವಾನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ಆಸಕ್ತ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣ ಪತ್ರದ ನಕಲುಗಳೊಂದಿಗೆ ಸದರಿ ದಿನಾಂಕದಂದು ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಹೋಲಿಗೆ ಯಂತ್ರಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ;ಜನವರಿ.17:–ಪುರಸಭೆ ಚಿಟಗುಪ್ಪಾ ವತಿಯಿಂದ ಎಸ್.ಎಫ್.ಸಿ. ಮುಕ್ತನಿಧಿ ಯೋಜನೆಯಡಿಯಲ್ಲಿ ಹೋಲಿಗೆ ಯಂತ್ರ ತರಬೇತಿ ಹೊಂದಿರುವ ಮಹಿಳೆಯರಿಗೆ ಹೋಲಿಗೆ ಯಂತ್ರ ಒದಗಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಚಿಟಗುಪ್ಪಾ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹರು ಅರ್ಜಿ ನಮೂನೆ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ರೇಷನ್ ಕಾರ್ಡ (ಬಿಪಿಎಲ್ ಹೊಂದಿರುವವರು), ಆಧಾರ ಕಾರ್ಡ, ಐಡಿ ಕಾರ್ಡ, ಪಾಸ್‌ಪೋರ್ಟ ಫೋಟೋ–02, ಹೋಲಿಗೆ ಯಂತ್ರ ತರಬೇತಿ ಪಡೆದ ಪ್ರಮಾಣ ಪತ್ರದ ನಕಲು ಪ್ರತಿ, ಅರ್ಜಿದಾರರು ಕಡ್ಡಾಯವಾಗಿ ಚಿಟಗುಪ್ಪಾ ಪಟ್ಟಣದ ನಿವಾಸಿಯಾಗಿರತಕ್ಕದ್ದು, ಶಪಥ ಪತ್ರ (ಈ ಹಿಂದೆ ಹೋಲಿಗೆ ಯಂತ್ರ ಪಡೆದಿಲ್ಲದಿರುವ ಬಗ್ಗೆ ಶಪಥ ಪತ್ರ ನೀಡುವುದು).

ಅರ್ಜಿಯನ್ನು ಭರ್ತಿ ಮಾಡಿ ದಿನಾಂಕ:31–01–2025 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪುರಸಭೆಯ ಶೇ. 24.10%, 7.25, ಮತ್ತು 5% ಯೋಜನೆ ಶಾಖೆಯ ವಿಷಯ ನಿರ್ವಾಹಕರಿಗೆ ಅಥವಾ ದೂರವಾಣಿ (7676249257)ರ ಮೂಲಕ ಅಥವಾ ಕಛೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಎಪಿಎಂಸಿ ರೈತಸ್ನೇಹಿಯಾಗಿರಲಿ: ಸಚಿವ ಶಿವಾನಂದ ಎಸ್.ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.17–ಕೃಷಿಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ರೈತರ ಶೋಷಣೆಯ ದೂರುಗಳು ಬರಬಾರದು. ವಂಚನೆ ಪ್ರಕರಣಗಳನ್ನು ತಡೆಗಟ್ಟಬೇಕು. ಎಪಿಎಂಸಿಯು ರೈತಸ್ನೇಹಿಯಾಗಿರಬೇಕುಎಂದು ಅಧಿಕಾರಿಗಳಿಗೆ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ, ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವ ಶಿವಾನಂದ ಎಸ್.ಪಾಟೀಲ್ ನಿರ್ದೇಶನ ನೀಡಿದರು.

ಶುಕ್ರವಾರ ಬಳ್ಳಾರಿ ಕೃಷಿ ಮಾರುಕಟ್ಟೆಉತ್ಪನ್ನಸಮಿತಿಯ ಆವರಣ ಪರಿವೀಕ್ಷಣೆ ನಡೆಸಿ ಬಳಿಕ ಪ್ರಗತಿ ಪರಿಶೀಲನೆ ನಡೆಸಿದ ಅವರು, ಎಪಿಎಂಸಿಯ ಸೋರಿಕೆತಡೆಗಟ್ಟಿಆರ್ಥಿಕವಾಗಿ ಸದೃಢಗೊಳಿಸಬೇಕು. ಆರ್ಥಿಕ ಅಪರಾಧಗಳಿಗೆ ಅವಕಾಶ ನೀಡಬಾರದು. ಬಳ್ಳಾರಿ ಎಪಿಎಂಸಿಯ ಬಗ್ಗೆ ವರ್ತಕರು ಮತ್ತು ರೈತರಿಂದ ವ್ಯಾಪಕ ದೂರುಗಳಿವೆ. ಅಂತಹ ಅಧಿಕಾರಿಗಳುಬದಲಾಗಬೇಕೆಂದು ಎಪಿಎಂಸಿ ಕಾರ್ಯದರ್ಶಿಗೆ ಎಚ್ಚರಿಕೆ ನೀಡಿದರು.

ಮಾರುಕಟ್ಟೆಯಲ್ಲಿದಲ್ಲಾಳಿಗಳು ರೈತರಿಂದ ಹೆಚ್ಚುವರಿ ಕಮಿಷನ್ ಪಡೆಯುತ್ತಿರುವ ಹಾಗೂ ಸರಕಾರದ ಸವಲತ್ತು ಇಲ್ಲವೇ ಬೇರೆ ಬೇರೆ ಕಾರಣಕ್ಕೆ ಉದ್ದಿಮೆ ಪರವಾನಿಗೆ (ಟ್ರೇಡ್ ಲೈಸೆನ್ಸ್) ಪಡೆದಿರುವದೂರುಗಳಿವೆ. ಅಂಥ ಪರವಾನಿಗೆಗಳನ್ನುಗುರುತಿಸಿ ರದ್ದುಪಡಿಸಬೇಕು. 10 ವರ್ಷಕ್ಕೆ ನೀಡುತ್ತಿದ್ದ ಪರವಾನಿಗೆಯನ್ನು 05 ವರ್ಷಕ್ಕೆ ನೀಡುವಂತೆ ಸೂಚಿಸಿದರು.

ಮಾರುಕಟ್ಟೆಶುಲ್ಕ ಕಮಿಷನ್ ಹಾಗೂವಂಚನೆಯದೂರುಗಳು ಹೆಚ್ಚಾಗುತ್ತಿವೆ. ಎಪಿಎಂಸಿಯ ಆದಾಯ ಕಡಿಮೆಯಾಗುತ್ತಿದೆ. ಎಲ್ಲಿ ಸೋರಿಕೆಯಾಗುತ್ತಿದೆ ಎಂಬುದನ್ನು ಪತ್ತೆ ಮಾಡಿ ತಡೆಗಟ್ಟಬೇಕು ಎಂದು ಸೂಚನೆ ನೀಡಿದರು.

ರೈತರು ಬೆಳೆ ಬೆಳೆದು ಹೆಚ್ಚಿನ ಆದಾಯ ನಿರೀಕ್ಷೆಯಲ್ಲಿದ್ದಾರೆ. ಕನಿಷ್ಟಬೆಂಬಲಯೋಜನೆಯಡಿ ವಿವಿಧಉತ್ಪನ್ನಗಳಿಗೆನಿಗದಿಯಾದ ದರದಲ್ಲಿಯೇ ರೈತರಿಂದ ಖರೀದಿಸಬೇಕು ಎಂದು ತಿಳಿಸಿದರು.

ಬಳ್ಳಾರಿಕೃಷಿಉತ್ಪನ್ನಮಾರುಕಟ್ಟೆ ಸಮಿತಿ ಕಚೇರಿಯಲ್ಲಿ ಕೆಲ ಅಧಿಕಾರಿಗಳು 20 ವರ್ಷಕ್ಕೂ ಹೆಚ್ಚು ಕಾಲ ಇಲ್ಲಿಯೇ ಕಾರ್ಯನಿರ್ವಹಿಸುತ್ತಿದ್ದಾರೆ. ಅಂತಹ ಅಧಿಕಾರಿಗಳನ್ನು ಕೂಡಲೇ ವರ್ಗಾವಣೆಗೆ ಶಿಫಾರಸ್ಸುಮಾಡಬೇಕುಎಂದರು. ಬಳ್ಳಾರಿ ಎಪಿಎಂಸಿ ವಾರ್ಷಿಕ ಆದಾಯವು ಕುಸಿದಿದ್ದು, ಹೆಚ್ಚಿನ ಆದಾಯ ನಿರೀಕ್ಷೆಗೆ ಕ್ರಮ ವಹಿಸಬೇಕು. ಎಪಿಎಂಸಿಗೆ ಸೂಕ್ತ ನಿರ್ವಹಣೆ ಇಲ್ಲ. ರಸ್ತೆಗಳು ಧೂಳಿನಿಂದ ಕೂಡಿವೆ. ಎಪಿಎಂಸಿಗೆ ಹಲವಾರು ಕಡೆ ದಾರಿಗಳಿವೆ. ಒಳಗಡೆ ಆವರಣದಲ್ಲಿ ಗುಣಮಟ್ಟ ಡಾಂಬರು ರಸ್ತೆ, ಸಿಸಿಟಿವಿ ಸೇರಿದಂತೆ ವಿವಿಧ ಕಾಮಗಾರಿ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಬಳಿಕ ಸಚಿವರು, ಬಳ್ಳಾರಿ ಎಪಿಎಂಸಿಯ ಅಧಿಕಾರಿ ಮತ್ತು ಸಿಬ್ಬಂದಿಗಳ ಹಾಜರಾತಿ ವಿವರ, ಎಪಿಎಂಸಿ ಆದಾಯ ವಿವರಗಳನ್ನು ಕುಲಂಕುಷವಾಗಿ ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ಬಳ್ಳಾರಿ ತಾಲ್ಲೂಕಿನ ಆಳದಹಳ್ಳಿಯಲ್ಲಿ 11 ಕೋಟಿ ವೆಚ್ಚದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಮೆಣಸಿನಕಾಯಿ ಮಾರುಕಟ್ಟೆಯ ನೀಲ ನಕಾಶೆಯನ್ನು ವೀಕ್ಷಿಸಿದರು.

ಇದಕ್ಕೂ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಕೇಂದ್ರದ ಉಚಿತ ಆರೋಗ್ಯ ಆಸ್ಪತ್ರೆಗೆ ಭೇಟಿ ನೀಡಿದರು. ಬಳಿಕ ರೈತರಿಗೆ ಊಟದ ವ್ಯವಸ್ಥೆ ಮಾಡಲಾಯಿತು.

ಇದೇ ವೇಳೆ ರೈತ ಪರ ಸಂಘಟನೆಗಳು ಮೆಣಸಿನಕಾಯಿ ಮಾರುಕಟ್ಟೆಗೆ ಸಂಬಂಧಿಸಿದಂತೆ ತಮ್ಮ ಮನವಿ ಸಲ್ಲಿಸಿದರು.

ಸಭೆಯಲ್ಲಿ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಎಪಿಎಂಸಿ ಮಾರುಕಟ್ಟೆ ಅಧ್ಯಕ್ಷ ಕಟ್ಟೆಮನೆ ನಾಗೇಂದ್ರ, ಎಪಿಎಂಸಿ ರಾಜ್ಯ ನಿರ್ದೇಶಕ ಶಿವಾನಂದ ಕಪಾಷಿ, ಎಪಿಎಂಸಿ ಕಾರ್ಯದರ್ಶಿ ನಂಜುಡ ಸ್ವಾಮಿ, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ ಸೇರಿದಂತೆ ಎಪಿಎಂಸಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಜನಪ್ರತಿನಿಧಿಗಳು, ರೈತ ಮುಖಂಡರು, ಅನೇಕರು ಉಪಸ್ಥಿತರಿದ್ದರು.

ಕೆಯುಡಬ್ಲ್ಯೂಜೆಯಲ್ಲಿ ಶ್ರೀಬಾಲಗಂಗಾಧರನಾಥ ಸ್ವಾಮೀಜಿ

## ದತ್ತಿ ನಿಧಿ ಪ್ರಶಸ್ತಿ ಸ್ಥಾಪಿಸಲು ಮುಂದಾದ ಶ್ರೀ ಆದಿಚುಂಚನಗಿರಿ ಮಠ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದಲ್ಲಿ ಆದಿಚುಂಚನಗಿರಿ ಮಠದ ವತಿಯಿಂದ ದತ್ತಿ ನಿಧಿ ಪ್ರಶಸ್ತಿ ಸ್ಥಾಪಿಸಲು ಮಠದ ಪೀಠಾಧ್ಯಕ್ಷರಾದ ಡಾ.ನಿರ್ಮಲಾನಂದನಾಥ ಸ್ವಾಮೀಜಿಯವರು ಮುಂದಾಗಿದ್ದಾರೆ.

ತುಮಕೂರಿನಲ್ಲಿ ನಡೆಯಲಿರುವ 39ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಆಹ್ವಾನ ಪತ್ರಿಕೆಯನ್ನು ನೀಡಲು ಆದಿಚುಂಚನಗಿರಿ ಮಠಕ್ಕೆ ಹೋಗಿದ್ದ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರ ಜೊತೆಗೆ ಈ ನಿಟ್ಟಿನಲ್ಲಿ ಚರ್ಚೆ ನಡೆಸಿ ತಮ್ಮ ಇಚ್ಛೆ ವ್ಯಕ್ತಪಡಿಸಿದ್ದರು.

ಶ್ರೀಬಾಲಗಂಗಾಧರನಾಥ ಸ್ವಾಮೀಜಿ ಅವರ ನ್ ನ್ ಪಿ ನ್ ಲ್ಲಿ ಚುಂಚಶ್ರೀ ಪ್ರಶಸ್ತಿ ಸ್ಥಾಪಿಸಲು 10 ಲಕ್ಷರೂ ಠೇವಣಿ ಇಡುವುದಾಗಿ ತಿಳಿಸಿರುವುದನ್ನು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಸ್ವಾಗತಿಸುತ್ತದೆ. ಡಾ. ನಿರ್ಮಲಾನಂದನಾಥ ಸ್ವಾಮೀಜಿ ಅವರ ಆಶಯದಂತೆ ಠೇವಣಿ ಇಟ್ಟ ಬಳಿಕ ಪ್ರತಿ ವರ್ಷವೂ ಸಮ್ಮೇಳನದಲ್ಲಿ ಸಾಧಕ ಹಿರಿಯ ಪತ್ರಕರ್ತರೊಬ್ಬರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ತಿಳಿಸಿದ್ದಾರೆ.

## ಇಂದು ವಿದ್ಯುತ್ ಗ್ರಾಹಕರ ಸಂವಾದ ಮತ್ತು ಕುಂದುಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.17–ಕುರುಗೋಡು ಉಪ–ವಿಭಾಗ ಜೆಸ್ಕಾಂ ವ್ಯಾಪ್ತಿಯ ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರಿಗಾಗಿ ವಿದ್ಯುತ್ ಸಂಬಂಧಿತ ದೂರು, ಸಮಸ್ಯೆ ಮತ್ತು ಅರಿವು ಮೂಡಿಸುವ ಸಲುವಾಗಿ ಜ.18 ರಂದು ಬಳ್ಳಾರಿ ಉಪವಿಭಾಗ ಕಚೇರಿಯಲ್ಲಿ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ವಿದ್ಯುತ್ ಗ್ರಾಹಕರ ಸಂವಾದ ಮತ್ತು ಕುಂದುಕೊರತೆ ಸಭೆ ಏರ್ಪಡಿಸಲಾಗಿದೆ.

ಕುರುಗೋಡು ಉಪ–ವಿಭಾಗ ಜೆಸ್ಕಾಂ ವ್ಯಾಪ್ತಿಗೆ ಸಂಬಂಧಿಸಿದಂತೆ ಸಮಸ್ಯೆ ಇರುವಂತಹ ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಭೆಗೆ ಹಾಜರಾಗಬೇಕು ಎಂದು ಕುರುಗೋಡು ಉಪ–ವಿಭಾಗ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಡಿ.ರಾಜೇಂದ್ರ ಪ್ರಸಾದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ಗ್ರಾಹಕರ ಸಂವಾದ ಮತ್ತು ಕುಂದುಕೊರತೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.17–ಬಳ್ಳಾರಿಗ್ರಾಮೀಣ ಉಪ–ವಿಭಾಗ ಜೆಸ್ಕಾಂ ವ್ಯಾಪ್ತಿಯ ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರಿಗಾಗಿ ವಿದ್ಯುತ್ ಸಂಬಂಧಿತ ದೂರು, ಸಮಸ್ಯೆ ಮತ್ತು ಅರಿವು ಮೂಡಿಸುವ ಸಲುವಾಗಿ ಜ.18 ರಂದು ಬಳ್ಳಾರಿ ಉಪವಿಭಾಗ ಕಚೇರಿಯಲ್ಲಿ ಬೆಳಿಗ್ಗೆ 11 ಗಂಟೆಗೆ ವಿದ್ಯುತ್ ಗ್ರಾಹಕರ ಸಂವಾದ ಮತ್ತು ಕುಂದುಕೊರತೆ ಸಭೆ ಏರ್ಪಡಿಸಲಾಗಿದ್ದು, ಸಮಸ್ಯೆ ಇರುವಂತಹ ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಭೆಗೆ ಹಾಜರಾಗಬೇಕು ಎಂದು ಬಳ್ಳಾರಿ ಗ್ರಾಮೀಣ ಉಪ–ವಿಭಾಗ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮೋಹನಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರೇಕುಪ್ಪ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.17–ಕುರೇಕುಪ್ಪ ಪುರಸಭೆ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವರ್ಸ್‌ಗ ಳ ಸಮೀಕ್ಷೆ ಕಾರ್ಯ ನಡೆಸಿದ್ದು, ಯಾವುದೇ ಮ್ಯಾನ್ಯುಯಲ್ ಸ್ಕ್ಯಾವರ್ಸ್‌ಗಳು ಇರುವುದಿಲ್ಲವೆಂದು ಸರ್ವೆಯಿಂದ ಕಂಡುಬಂದಿದೆ. ಮ್ಯಾನ್ಯುಯಲ್ ಸ್ಕ್ಯಾವರ್ಸ್‌ಗಳ ಮುಕ್ತ ಪಟ್ಟಣವೆಂದು ಘೋಷಿಸಲು ಈ ಕುರಿತು ಆಕ್ಷೇಪಣೆಗಳಿದ್ದಲ್ಲಿ ಸಾರ್ವಜನಿಕರು ಜ.23ರೊಳಗಾಗಿ ಕುರೇಕುಪ್ಪ ಪುರಸಭೆ ಕಚೇರಿಗೆ ಸಲ್ಲಿಸಬಹುದು. ಕಳೆದ ಅ.28 ರಿಂದ 30 ರ ವರೆಗೆ ಸಮೀಕ್ಷೆ ಕಾರ್ಯ ಹಾಗೂ

## ಇಂದು ಜೆಸ್ಕಾಂ ಗ್ರಾಹಕರ ಕುಂದು ಕೊರತೆ ಮತ್ತು ಜಾಗೃತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.17–ಸಿರುಗುಪ್ಪ ಜೆಸ್ಕಾಂ ವ್ಯಾಪ್ತಿಯ ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರಿಗಾಗಿ ವಿದ್ಯುತ್ ಸಂಬಂಧಿತ ದೂರು, ಸಮಸ್ಯೆ ಮತ್ತು ಅರಿವು ಮೂಡಿಸುವ ಸಲುವಾಗಿ ಜ.18 ರಂದು ಸಿರುಗುಪ್ಪ ಉಪವಿಭಾಗ ಕಚೇರಿಯಲ್ಲಿ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಜೆಸ್ಕಾಂ ಗ್ರಾಹಕರ 'ಕುಂದುಕೊರತೆ ಮತ್ತು ಜಾಗೃತಿ ಮೂಡಿಸುವ ಸಭೆ' ಏರ್ಪಡಿಸಲಾಗಿದೆ.

# ಹೆಚ್.ಎಸ್.ಕೆ ಪಾಲಿಟೆಕ್ನಿಕ್‌ನಲ್ಲಿ ವಿಧ್ಯಾರ್ಥಿಗಳಿಗೆ ತರಬೇತಿ ಕಾರ್ಯಗಾರ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ವೀ ವಿ ಸಂಘದ ಅಂಗ ಸಂಸ್ಥೆ ಹಾನಗಲ್ ಶ್ರೀ ಕುಮಾರೇಶ್ವರ ಪಾಲಿಟೆಕ್ನಿಕ್ ನಲ್ಲಿ ಸಿವಿಲ್ ಮತ್ತು ಸಸ್ಟೇನಬಿಲಿಟಿ ಇನ್ ಕನ್ಸಟ್ರಕ್ಷನ್ ಯೂಸಿಂಗ್ ಜಿಜಿಬಿಎಸ್ ಅಂಡ್ ಗ್ರೀನ್ ಮಟೀರಿಯಲ್ಸ್ ಎನ್ನುವ ವಿಷಯದ ಮೇಲೆ ತರಬೇತಿ ಕಾರ್ಯಗಾರ ಆಯೋಜಿಸಲಾಗಿತ್ತು.

ಕಾರ್ಯಕ್ರಮಕ್ಕೆ ಆಗಮಿಸಿದ ಅತಿಥಿಗಳು ಗಿಡಕ್ಕೆ ನೀರುಣಿಸುವ ಮೂಲಕ ಕಾರ್ಯಗಾರ ಉದ್ಘಾಟಿಸಲಾಯಿತು. ಮುಖ್ಯಅತಿಥಿಗಳಾಗಿ ಜೆಎಸ್‌ಡಬ್ಲ್ಯೂಜೆ ಸಿಮೆಂಟ್ ಶ್ರೀನಿವಾಸ್ ಕುಲಕರ್ಣಿ ಆಡಳಿತ ಮಂಡಳಿಯ ಅಧ್ಯಕ್ಷ ಪಲ್ಲೇದ ಪ್ರಭುಲಿಂಗ, ಆಡಳಿತ ಮಂಡಳಿಯ ಸದಸ್ಯರಾದ ಬಾಣಾಪುರ ಜಡೆಸಿದ್ದನಗೌಡ, ಚಂದ್ರಶೇಖರ್ ಪಾಶ್ಚಾಪ್ಪರ್, ಪ್ರಾಂಶುಪಾಲ ಬಿ.ಶ್ರೀಶೈಲಗೌಡ, ಕಾಲೇಜಿನ ಸಿವಿಲ್ ವಿಭಾಗಾಧಿಕಾರಿಯಾಗಿ ನಿವೃತ್ತರಾಗಿದ್ದ ಟಿ.ಗೋವಿಂದರಾಜುಲು ಮತ್ತು ಎಲ್ಲಾ ವಿಭಾಗದ ಮುಖ್ಯಸ್ಥರು, ಸಿಬ್ಬಂದಿಗಳು ಇದ್ದರು.

ಮುಖ್ಯಅತಿಥಿಗಳು ಮಾತನಾಡಿ, ಸಿಮೆಂಟ್ ಮತ್ತು ಕಾಂಕ್ರೀಟ್ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು. ಸಿಮೆಂಟ್ ನಿಂದ ಆಗುವ ಉಪಯೋಗ ಮತ್ತು ಪರಿಸರ ಹಾನಿಯ ಬಗ್ಗೆ ವಿವರಿಸಿದರು. ಪರಿಸರಕ್ಕೆ ಹಾನಿ ಮಾಡದಂತಹ ವಸ್ತುಗಳನ್ನು ಕಾಮಗಾರಿಯನ್ನು ಹೇಗೆ ಕೈಗೊಳ್ಳಬೇಕೆಂದು ತಿಳಿಸಿದರು.

ನಿರೂಪಣೆಯನ್ನು ಸಿವಿಲ್ ವಿಭಾಗಾಧಿಕಾರಿ ಉಮ್ಮೆಸಲ್ಮಾ ನಡೆಸಿಕೊಟ್ಟರು, ಮೆಕ್ಯಾನಿಕಲ್ ವಿಭಾಧಿಕಾರಿ ಎಂ.ಪಿ ಮಹೇಶ್ ಪರಿಚಯಿದರು. ಉಪನ್ಯಾಸಕಿ ಸಿಂಧು ಆರ್ ವಂದಿಸಿದರು.

# ಏಕಲವ್ಯ ಮಾದರಿ ವಸತಿ ಶಾಲೆ: 6ನೇ ತರಗತಿ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.17–ತಾಲ್ಲೂಕಿನ ಕೊಳಗಲ್ಲು ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆಯಲ್ಲಿ 2025–26 ನೇ ಸಾಲಿಗೆ 6ನೇ ತರಗತಿ ಪ್ರವೇಶಾತಿಗೆ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಶಾಲೆಯ ಪ್ರಾಂಶುಪಾಲರು ತಿಳಿಸಿದ್ದಾರೆ.

ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ ಅಡಿ ಕಾರ್ಯನಿರ್ವಹಿಸುತ್ತಿರುವ ಕೇಂದ್ರೀಯ ಪಠ್ಯಕ್ರಮವನ್ನು ಹೊಂದಿರುವ ಶಾಲೆ ಇದಾಗಿದ್ದು, ವಿವಿಧ ವರ್ಗಗಳ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಪ್ರವೇಶಾತಿಯು ರಾಷ್ಟ್ರೀಯ ಬುಡಕಟ್ಟು ವಿದ್ಯಾರ್ಥಿಗಳ ಶೈಕ್ಷಣಿಕ ಸಂಘ, ನವದೆಹಲಿ, ಇವರು ರೂಪಿಸಿರುವ ನಿಯಮಗಳಿಗೆ ಬದ್ಧವಾಗಿದ್ದು, ಪ್ರವೇಶಾತಿ ಪರೀ–ಕ್ಷೆಯ ಮೂಲಕ ಸಂಪೂರ್ಣ ಪಾರದರ್ಶಕವಾಗಿ ಪ್ರವೇಶಾತಿಯನ್ನು ಕಲ್ಪಿಸಲಾಗುತ್ತದೆ.

ಅರ್ಜಿ ಸಲ್ಲಿಸಲು ಜ.31 ಕೊನೆಯ ದಿನವಾಗಿರುತ್ತದೆ. ಫೆ.17 ರಂದು ಪ್ರವೇಶ ಪತ್ರ ಬಿಡುಗಡೆ, ಫೆ.28 ರಂದು ಪ್ರವೇಶ ಪರೀಕ್ಷೆ, ಮಾ.10 ರ ನಂತರ ಫಲಿತಾಂಶ ಮತ್ತು ಆಯ್ಕೆ ಪಟ್ಟಿ ಬಿಡುಗಡೆ ಮಾಡಲಾಗುತ್ತದೆ.

**ಅರ್ಹತೆ:**

5ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರಬೇಕು. ಕನಿಷ್ಠ 31–03–2025ರ ಅಂತ್ಯಕ್ಕೆ 10 ವರ್ಷ ತುಂಬಿರಬೇಕು. ಗರಿಷ್ಠ 13 ವರ್ಷ ಒಳಗಿರಬೇಕು. ಪರಿಶಿಷ್ಟವರ್ಗದ ವಿದ್ಯಾರ್ಥಿಗಳಿಗೆ, ಪಿವಿಟಿಜಿ ವರ್ಗ, ಡಿಎನ್‌ಟಿ ವರ್ಗ, ಎನ್‌ಟಿ ವರ್ಗ, ಎಸ್‌ಎನ್‌ಟಿ ವರ್ಗ, ಎಲ್‌ಡಬ್ಲ್ಯೂಇ ವರ್ಗ, ಅಂಗವಿಕಲರಿಗೆ ಹಾಗೂ ನಕ್ಸಲರಿಂದ ಮರಣ ಹೊಂದಿದ, ಕೋವಿಡ್‌ನಿಂದ ಮರಣ ಹೊಂದಿದ, ದಂಗೆಗಳಿಂದ ಮರಣ ಹೊಂದಿದ ಪೋಷಕರ ಮಕ್ಕಳಿಗೆ, ಪತಿಯನ್ನು ಕಳೆದುಕೊಂಡ ವಿಧವೆಯರ ಮಕ್ಕಳಿಗಾಗಿ ಪ್ರವೇಶಾತಿ ಸಮಯದಲ್ಲಿ ನಿಯಮಾನುಸಾರ ಮೀಸಲಾತಿ ಕಲ್ಪಿಸಿಕೊಡಲಾಗುವುದು.

ಗಂಡು 30, ಹೆಣ್ಣು 30 ಸೇರಿ ಒಟ್ಟು 60 ಸೀಟ್ ಲಭ್ಯವಿರುತ್ತದೆ.

**ಅರ್ಜಿಗಳನ್ನು ಇಲ್ಲಿ ಪಡೆಯಬಹುದು:**

ಕೊಳಗಲ್ಲು ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆ, ಬಳ್ಳಾರಿ ನಗರದ ವಾಲ್ಮೀಕಿ ಭವನದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಮತ್ತು ಸಂಡೂರು, ಸಿರುಗುಪ್ಪ, ಬಳ್ಳಾರಿ ತಾಲ್ಲೂಕುಗಳ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಹಾಗೂ ಸಂಡೂರು, ಸಿರುಗುಪ್ಪ, ಬಳ್ಳಾರಿ, ಕುರುಗೋಡು, ಕಂಪ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಪಡೆದುಕೊಳ್ಳಬಹುದು ಎಂದು ಕೊಳಗಲ್ಲು ಏಕಲವ್ಯ ಮಾದರಿ ವಸತಿ ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುರಪುರ :ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾದ ಶ್ರೀಮತಿ ವಿಜಯಲಕ್ಷ್ಮಿ ಗಂಡ ಭೀಮನಗೌಡ

## ಉಪಾಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾದ ಮಹಾಂತೇಶ ಮಡಿವಾಳಪ್ಪ ದೇಸಾಯಿ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲೆ ಸುರಪುರ ತಾಲೂಕಿನ ಕಿರದಳ್ಳಿ ಗ್ರಾಮದಲ್ಲಿ ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆಯು ದಿನಾಂಕ 8–12–2024 ರಂದು ನಡೆದು 11–12–2024 ರಂದು ಚುನಾವಣೆ ಫಲಿತಾಂಶ ಹೊರಬಿದ್ದು ಒಟ್ಟು 11 ಸ್ಥಾನಗಳು ಇರುವ ಕಿರದಳ್ಳಿ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ 10 ಜನ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ಗೆಲುವು ಸಾಧಿಸುವ ಮೂಲಕ ದಿನಾಂಕ 16–01–2025 ರಂದು ಅಧ್ಯಕ್ಷ ಉಪಾಧ್ಯಕ್ಷರ ಸ್ಥಾನಕ್ಕೆ ಚುನಾವಣೆ ನಡೆಯಿತು.

ಸತೀಶ ಎಸ್ ಆಲಗೂರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಕಆಔ) ಹಾಗೂ ಸುರಪುರ ತಾಲೂಕಿನ ತಹಸಿಲ್ದಾರ್ ಹುಸೇನ್ ಸಾಬ್ ಸರಕವಾಸ್

ಹಾಗೂ ಊರಿನ ಗಣ್ಯ ವ್ಯಕ್ತಿಗಳಾದ ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡರಾದ ಅಮಿನ್ ರೆಡ್ಡಿಗೌಡ ಪಾಟೀಲ್, ಮಲ್ಲಣ್ಣ ಹೆಗ್ಗೇರಿ, ಮಡಿವಾಳಪ್ಪ ದೇಸಾಯಿ, ಸಮ್ಮುಖದಲ್ಲಿ ಅಧ್ಯಕ್ಷ ಸ್ಥಾನವನ್ನು ನೀಡಲಾಯಿತು. ಶ್ರೀಮತಿ ವಿಜಯಲಕ್ಷ್ಮಿ ಗಂಡ ಭೀಮನಗೌಡ ಅವರಿಗೆ ಅಧ್ಯಕ್ಷತೆ ಸ್ಥಾನವನ್ನು ಆಯ್ಕೆ ಮಾಡಿದರು ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಮಹಾಂತೇಶ ಮಡಿವಾಳಪ್ಪ ದೇಸಾಯಿ ಇವರನ್ನ. ಒಟ್ಟು 11 ಜನ ಸದಸ್ಯರು ಇರುವ ಗ್ರಾಮ ಪಂಚಾಯಿತಿ. ಕಿರದಳ್ಳಿಯಲ್ಲಿ 8 ಜನ ಕಾಂಗ್ರೆಸ ಇಂದ ಗೆದ್ದವರು. ಮಲಹಳ್ಳಿಯಲ್ಲಿ 3 ಜನ ಮೆಂಬರ್ 2 ಕಾಂಗ್ರೆಸ್ ನಿಂದ ಗೆದ್ದವರು.1 ಬಿಜೆಪಿ ಇಂದ ಗೆದ್ದವರು. . ಗ್ರಾಮ ಪಂಚಾಯತಿಯ ಒಟ್ಟು ಸದಸ್ಯರುಗಳು *ಶ್ರೀಮತಿ ವಿಜಯಲಕ್ಷ್ಮೀಗಂಡಭೀಮನಗೌಡ. ಮಹಾಂತೇಶ ಮಡಿವಾಳಪ್ಪ ದೇಸಾಯಿ. ಬಸಮ್ಮ ಗಂಡ ಮಾನಪ್ಪ, ಭಾಗ್ಯಶ್ರೀ ಗಂಡ ಮಲ್ಲಣ್ಣ, ಗಂಗಮ್ಮ ಗಂಡ ಹೈಯಾಳಪ್ಪ, ಭೀಮವ್ವ ಗಂಡ ಸಿದ್ರಾಮ, ಮಲ್ಲಪ್ಪ ತಂದೆ ರಾಮಲಿಂಗಪ್ಪ, ಶರಣಪ್ಪ ತಂದೆ ಮಲ್ಲಪ್ಪ, ಮಹಾಲಕ್ಷ್ಮಿ ಗಂಡ ನಿಂಗಪ್ಪ , ಸಾಬಮ್ಮ ಗಂಡ ನಿಂಗಪ್ಪ, ರೇಣುಕಮ್ಮ ಮಾಳಪ್ಪ ಇವರುಗಳೆಲ್ಲರೂ ಉಪಸ್ಥಿತರಿದ್ದರು.

# ಬಳ್ಳಾರಿ: 'ಕರ್ನಾಟಕ ದರ್ಶನ' ಮಕ್ಕಳ ಶೈಕ್ಷಣಿಕ ಪ್ರವಾಸ ಕಾರ್ಯಕ್ರಮಕ್ಕೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.17 ಪ್ರವಾಸೋದ್ಯಮ ಇಲಾಖೆ ವತಿಯಿಂದ ಪ್ರಸ್ತಕ ಸಾಲಿನ ಎಸ್ಸಿಎಸ್ಪಿ–ಟಿಎಸ್ಪಿ ಯೋಜನೆಯಡಿ ಕೈಗೊಂಡಿರುವ ಸರ್ಕಾರಿ ಶಾಲಾ ವಿದ್ಯಾರ್ಥಿಗಳ 'ಕರ್ನಾಟಕ ದರ್ಶನ' ಪ್ರವಾಸ ಕಾರ್ಯಕ್ರಮಕ್ಕೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ ಅವರು ಗುರುವಾರ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಮುಂಭಾಗದ ಆವರಣದಲ್ಲಿ ಪ್ರವಾಸಕ್ಕೆ ತೆರಳುವ ಬಸ್ ಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.


ಬಳಿಕ ಮಾತನಾಡಿದ ಅವರು, ಪ್ರವಾಸ ಕೈಗೊಳ್ಳುವುದರಿಂದ ಐತಿಹಾಸಿಕ ಸ್ಥಳಗಳ ಬಗ್ಗೆ ಮಾಹಿತಿ ಹೊಂದಲು ಸಹಾಯಕವಾಗುತ್ತದೆ ಎಂದರು.

ಕರ್ನಾಟಕ ದರ್ಶನ ಪ್ರವಾಸ ಕಾರ್ಯಕ್ರಮಕ್ಕೆ ಬಳ್ಳಾರಿ ಜಿಲ್ಲೆಯಿಂದ ಪರಿಶಿಷ್ಟ ಜಾತಿಯ 270, ಪರಿಶಿಷ್ಟ ಪಂಗಡದ 309 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 579 ವಿದ್ಯಾರ್ಥಿಗಳ ಗುರಿ ನಿಗದಿಪಡಿಸಲಾಗಿದ್ದು, ಅದರಂತೆ ಪ್ರವಾಸಕ್ಕೆ ಮೊದಲ ಹಂತದಲ್ಲಿ 8, 9 ನೇ ತರಗತಿಯ 154 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದರು.

ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಪ್ರಭುಲಿಂಗ ಎಸ್. ತಳಕೇರಿ ಅವರು ಮಾತನಾಡಿ, ಒಟ್ಟು ನಾಲ್ಕು ದಿನಗಳ ಪ್ರವಾಸದಲ್ಲಿ ಚಿತ್ರದುರ್ಗ, ಬೇಲೂರು, ಯಗಚಿ, ಹಳೆಬೀಡು, ಶ್ರವಣಬೆಳಗೊಳ, ತಲಕಾವೇರಿ, ಮಡಿಕೇರಿ, ಬೈಲುಕುಪ್ಪೆ, ಮೈಸೂರು, ಶ್ರೀರಂಗಪಟ್ಟಣ ಸೇರಿದಂತೆ ವಿವಿಧ ಪ್ರವಾಸಿ ತಾಣಗಳನ್ನು ಸಂದರ್ಶಿಸುವರು ಎಂದು ತಿಳಿಸಿದರು. ಇದೇ ವೇಳೆ ಪ್ರವಾಸ ಕಾರ್ಯಕ್ರಮಕ್ಕೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಬ್ಯಾಗ್, ನೋಟ್ ಬುಕ್, ಟೀ–ಶರ್ಟ್, ಕ್ಯಾಪ್, ಪೆನ್ , ಕರ್ನಾಟಕ ಮ್ಯಾಪ್ ಹಾಗೂ ದಿನ ಬಳಕೆಯ ಟೂತ್ ಪೇಸ್ಟ್, ಸೋಪ್, ಶ್ಯಾಂಪೂ, ಹೇರ್ ಆಯಿಲ್, ಬಾಚಣಿಕೆ ಸೇರಿದಂತೆ ಇತರೆ ಒಳಗೊಂಡ ಬಾತ್ ಕಿಟ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ನಯಿಮೂರ್ ರೆಹಮಾನ್, ಜಿಲ್ಲಾ ನೋಡಲ್ ಅಧಿಕಾರಿ ನರಸಿಂಹಮೂರ್ತಿ, ತಾಲ್ಲೂಕು ನೋಡಲ್ ಅಧಿಕಾರಿ ಗೋಳೆಪ್ಪ ಸೇರಿದಂತೆ ಪ್ರವಾಸೋದ್ಯಮ ಇಲಾಖೆ ಹಾಗೂ ಕರ್ನಾಟಕ ದರ್ಶನ ಪ್ರವಾಸ ಕಾರ್ಯಕ್ರಮದ ಅನುಷ್ಠಾನ ಸಂಸ್ಥೆಯ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧಿಕಾರಿಗಳು, ಸಿಬ್ಬಂದಿಗಳು, ಶಿಕ್ಷಕರು ಹಾಜರಿದ್ದರು.

# ಉಪ ಆರೋಗ್ಯ ಕೇಂದ್ರಗಳಿಗೆ ಸಿಇಓ ಕುರೇರ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.17-ಜಿಲ್ಲೆಯ ಜಮಖಂಡಿ ತಾಲೂಕಿನ ಹುಲ್ಯಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಪ್ರಾಥಮಿಕ ಉಪ ಆರೋಗ್ಯ ಕೇಂದ್ರಗಳಿಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಶುಕ್ರವಾರ ಹುಲ್ಯಾಳ ಪ್ರಾಥಮಿಕ ಉಪ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ವಿವಿಧ ದುರಸ್ಥಿ ಕಾಮಗಾರಿಗಳ ಪರಿಶೀಲನೆ ಮಾಡಿದರು. ಸಿದ್ದಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ನರೇಗಾ ಯೋಜನೆಯಡಿ ಕೈಗೊಂಡ ಚರಂಡಿ ಕಾಮಗಾರಿ, ಹಿರಿಯ ಪ್ರಾಥಮಿಕ ಶಾಲಾ ಕೊಠಡಿಗಳ ದುರಸ್ತಿ ಕಾಮಗಾರಿಗಳನ್ನು ಪರಿಶೀಲಿಸಿ, ಕಾಮಗಾರಿ ಮಾಹಿತಿಯನ್ನು ಪಡೆದುಕೊಂಡರು.

ರಬಕವಿ-ಬನಹಟ್ಟಿ ತಾಲೂಕಿನ ಹಿಪ್ಪರಗಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿ ಮತ್ತು ವಾಟರ್ ಪಿಲ್ಟರ ಕಾಮಗಾರಿಯನ್ನು ವೀಕ್ಷಣೆ ಮಾಡಿದರು.

ಭೇಟಿ ಸಮಯದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್ ಜಮಖಂಡಿ ಕಾರ್ಯನಿರ್ವಾಹಕ ಅಧಿಕಾರಿ ಸಂಜೀವ ಹಿಪ್ಪರಗಿ, ರಬಕವಿ-ಬನಹಟ್ಟಿ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಸೈದಪ್ಪ ಪಟಿಹಾಳ, ಸಹಾಯಕ ನಿರ್ದೇಶಕ, ಪಂಚಾಯತ ರಾಜ್ ಅಭಿಯಂತರರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಇತರರು ಇದ್ದರು.

# ಕಿಡಿಗೇಡಿಗಳಿಗೆ ತಕ್ಕ ಶಿಕ್ಷೆ ಆಗಬೇಕು:ದಾಮಾ.



ಮಲ್ಲಮ್ಮ ನುಡಿ ವಾರ್ತೆ

ಔರಾದ:- ಭಾಲ್ಕಿ ತಾಲೂಕಿನ ದಾಡಗಿ ಕ್ರಾಸ ಬಳಿ ಇರುವ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣ ನವರ ಪ್ರತಿಮೆಗೆ ಸಿಸಿ ಟಿವಿ ಕ್ಯಾಮರಾ ಅಳವಡಿಸು ಹಾಗೂ ವಿಶ್ವಗುರು ಬಸವಣ್ಣನವರ ಪ್ರತಿಮೆ ಹಾಗೂ ಧರ್ಮ ಧ್ವಜವನ್ನು ಭಗ್ನಗೊಳಿಸಿದ ಕಿಡಿಗೇಡಿಗಳಿಗೆ ಶಿಕ್ಷೆ ನೀಡಬೇಕು ಎಂದು ತಹಸಿಲ್ದಾರರು ಮಲ್ಲಶೆಟ್ಟಿ ಚಿದ್ರೆ ಇವರಿಗೆ ಬಾಲಾಜಿ ದಾಮಾ ತಾಲೂಕಾ ಅಧ್ಯಕ್ಷರು ನಮ್ಮ ಕರ್ನಾಟಕ ಸೇನೆ ಸಂಘಟನೇಯ ವತಿಯಿಂದ ಮನವಿ ನೀಡಲಾಯಿತ್ತು.

ವಿಶ್ವಕ್ಕೆ ಸಮಾನತೆ, ಸಹೋದರತೆ, ಭಾತೃತ್ವ ಸಾರಿದ ಮಹಾನುಭಾವ ಬಸವೇಶ್ವರರು ಆ ಸಮಾನತೆಯನ್ನು ಹೋಗಲಾಡಿಸಿದ ಮಹಾಪುರುಷರು, ಕಾಯಕ ನಿಷ್ಠೆ ಧರ್ಮದ ಬುನಾದಿ ಆಗಬೇಕೆಂದು ಧರ್ಮದ ಬುನಾದಿ ಆಗಬೇಕೆಂದು ಕಾಯಕ, ದಾಸೋಹ ಅಹಿಂಸೆ, ಸಮಾಜದ ಪರಿಕಲ್ಪನೆಯನ್ನು ನಂಬಿದವರು.

ಇಂತಹ ಸಮಾಜ ಸುಧಾರಕರ ಪ್ರತಿಮೆಯನ್ನು ಭಗ್ನಗೊಳಿಸುವಿಕೆಯ ಕೃತ್ಯವನ್ನು ಖಂಡಿಸುತ್ತೇವೆ ನಗರದಲ್ಲಿ ಹಾಗೂ ಗ್ರಾಮಿಣ ಪ್ರದೇಶದಲ್ಲಿ ಗ್ರಾಮ ಪಂಚಾಯತ ವತಿಯಿಂದ ಎಲ್ಲಾ ಮಹಾಪುರುಷರ ಪ್ರತಿಮೆಗಳಲ್ಲಿ ಸಿ ಸಿ ಕ್ಯಾಮಾರಾ ಅಳವಡಿಸಲು ಸೂಚಿಸಬೇಕು. ಈ ರೀತಿ ಪದ/ಪದೇ ಆಹೀತಕರ ಘಟನೆ ನಡೆ-ಯದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದ್ದರು. ಈ ಸಂದರ್ಭದಲ್ಲಿ ಹರೀಶ ರೂನಾರ ಉಪಾಧ್ಯಕ್ಷರು ನಮ್ಮ ಕರ್ನಾಟಕ ಸೇನೆ, ರಾಹುಲ ಬೋರೆ ಪ್ರದಿಪ್, ಹರೀಶ ಡೋಳೆ, ಮಜ್ಜುನಾಥ ಸ್ವಾಮಿ, ಅರುಣ ಮಡಿವಾಳ, ಸತೀಷ ಮೆತ್ರೆ, ಅನೋಲ ದೇವಕತೆ, ವೇಕಟರಡ್ಡಿ, ಮಲ್ಲಾರಡ್ಡಿ, ಅಮಿತ ಶಿವಪೂಜೆ, ಸಚ್ಚಿನ ಫುಲಾರಿ ಹಾಗೂ ಸಂಘಟನೆ ಪದಾದಿಕಾರಿಗಳು ಇದ್ದರು.

# ಭಕ್ತಿ ಶ್ರದ್ಧಾ ಸಂಭ್ರಮಗಳ ಮಧ್ಯೆ ನಡೆದ ಕೊಳ್ಳದ ಶ್ರೀ ಸಂಗಮೇಶ್ವರ ಮಾಹಾರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬೀದರ ಜ.17-ಹತ್ತಿರದ ಹಾಲಹಳ್ಳಿ (ಕೆ) ಯ ಕೊಳ್ಳದ ಶ್ರೀ ಸಂಗಮೇಶ್ವರ ಜಾತ್ರಾ ಮಹಾರಥೋತ್ಸವ ಭಕ್ತರ ಹರ್ಷೋಲ್ಲಾಸಗಳ ಮಧ್ಯದಲ್ಲಿ ಜರುಗಿತು. ಅದರಂಗವಾಗಿ ಬೇಮಳಖೇಡ, ಗೋರಟಾ, ಬೀದರ ಮಠದ ಪೂಜ್ಯ ಶ್ರೀ ಷ.ಬ್ರ ಡಾ॥ ರಾಜಶೇಖರ ಶಿವಾಚಾರ್ಯರ ಮಾರ್ಗದರ್ಶನ ಮತ್ತು ದಿವ್ಯ ಸಾನಿಧ್ಯದಲ್ಲಿ ಮೂರು ದಿನಗಳ ಜಾತ್ರಾ ಮಹಾರಥೋತ್ಸವ ಕಾರ್ಯಕ್ರಮಗಳು ಅತ್ಯಂತ ಯಶಸ್ವಿಯಾಗಿ ನಡೆದವು. ಜನೆವರಿ 12 ರಂದು ಸಾಮೂಹಿಕ ಲಕ್ಷ ಬಿಲ್ವಾರ್ಚನೆ, 13 ರಂದು ಬೆಳಗ್ಗೆ ಸಂಗಮೇಶ್ವರರಿಗೆ ರುದ್ರಾಭಿಷೇಕ, ಮಹಾಮಂಗಳಾರುತಿಗಳು ನಡೆದು ಧನ್ನೂರು (ಹೆಚ್) ನ ಬಸವರಾಜ ಹಾಲಹಳ್ಳಿ ರವರ ಮುಂದಾಳತ್ವದಲ್ಲಿ ದೇವರ ಹಾಗು ಪಲ್ಲಕ್ಕಿಯ ಪುಷ್ಪಾಲಂಕಾರ ನಡೆಯಿತು. ಸಾಯಂಕಾಲ ಧರ್ಮಸಭೆ ನಡೆದು, ಸಂಜೆ 6ಕ್ಕೆ ಪೂಜ್ಯ ಶ್ರೀ ಡಾ॥ ರಾಜಶೇಖರ ಶಿವಾಚಾರ್ಯರು ಪಲ್ಲಕಿ ಮೆರವಣಿಗೆಗೆ ಚಾಲನೆ ನೀಡಿದರು ಆನಂತರ ನೀಲಕಂಠ ಪಾಟೀಲರ ಮುಂದಾಳತ್ವದಲ್ಲಿ ಅಗ್ಗಿ ಪೂಜೆಯನ್ನು ನೆರವೇರಿಸಲಾಯಿತು.

ಗ್ರಾಮದ ಕಾಶಿ ವಿಶ್ವನಾಥ ಮಂದಿರದಿಂದ ಸಂಗಮೇಶ್ವರ ಭವ್ಯ ಪಲ್ಲಕಿ ಮೆರವಣಿಗೆಗೆ ಚಾಲನೆ ನೀಡಲಾಯಿತು. ಮಂಗಳವಾದ್ಯ, ಬ್ಯಾಂಡ್‌ಬಾಜಾ, ಕೋಲಾಟ, ಪುರವಂತ ವೀರಗಾಸೆ, ಪುರುಷ ಮತ್ತು ಮಹಿಳೆಯರ ಭಜನಾ ಮೇಳ, ಯುವಕ, ಯುವತಿಯರ ಲೇಜೀಮ್ ಡಿಜೆಗಳೊಂದಿಗೆ ಗ್ರಾಮದಿಂದ ಹೊರಟ ಪಲ್ಲಕಿ ಮೆರವಣಿಗೆಯು ಬೆಳಗಿನ ಜಾವ 4 ಗಂಟೆಗೆ ಕೊಳ್ಳದ ಸಂಗಮೇಶ್ವ ದೇವಾಲಯಕ್ಕೆ ತಲುಪಿ ಅಗ್ಗಿ ತುಳಿಯಲಾಯಿತು.

ದಿ: 14 ರಂದು ಬೆಳಗ್ಗೆ ಶಿವು ಪೂಜಾರಿ ನೇತೃತ್ವದಲ್ಲಿ ದೇವರಿಗೆ ರುದ್ರಾಭಿಷೇಕ, ನಂತರ ಶ್ರೀ ಬಾಬುರಾವ ಮಹಾರಾಜರ ನೇತೃತ್ವದಲ್ಲಿ ನಡೆದ ಅಖಂಡ ಸಪ್ತಾಹ ಭಜನ ಧುನಿ ಪೂಜೆಯ ಮಂಗಲ ನಡೆಯಿತು. ಸಾಯಂಕಾಲ 4 ಗಂಟೆಗೆ ನಡೆದ ಧರ್ಮ ಜಾಗೃತಿ ಸಮಾರಂಭವನ್ನು ಬೀದರ ಸಂಸದರಾದ ಮಾನ್ಯ ಶ್ರೀ ಸಾಗರ ಖಂಡ್ರೆರವರು ಉದ್ಘಾಟಿಸಿ ಶುಭ ಹಾರೈಸಿದರು. ಮುಖ್ಯ ಅತಿಥಿಗಳಾಗಿದ್ದ ಬೀದರ ದಕ್ಷಿಣ ಮಾನ್ಯ ಶಾಸಕರಾದ ಡಾ। ಶೈಲೇಂದ್ರ ಬೆಲ್ದಾಳೆ ಮಾತನಾಡಿ ಹಾಲಹಳ್ಳಿ ಕೊಳ್ಳದ ಸಂಗಮೇಶ್ವರ ಕ್ಷೇತ್ರವು ಪ್ರಕೃರ್ತಿಯ ಮಧ್ಯದಲ್ಲಿ ಅತ್ಯಂತ ಸುಂದರವಾಗಿದ್ದು ಇದರ ಸರ್ವಾಂಗಿಣ ಅಭಿವೃದ್ಧಿ ಎಲ್ಲರೂ ಸೇರಿ ಮಾಡೋಣವೆಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಭಾಲ್ಕಿಯ ಪಿ.ಎಲ್.ಡಿ ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಮಡಿವಾಳಪ್ಪಾ ಮಂಗಲಗಿ ಮಾತನಾಡಿ ಶ್ರೀ ಕ್ಷೇತ್ರದ ಸರ್ವಾಂಗಿಣ ವಿಕಾಸದಲ್ಲಿ 'ಶತಾಯುಷಿ' ಡಾ॥ ಭೀಮಣ್ಣ ಖಂಡ್ರೆ ಮತ್ತು ಅರಣ್ಯ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆರವರ ಕೊಡುಗೆ ಅಪಾರವಾಗಿದ್ದು ಇನ್ನೂ ಹೆಚ್ಚಿನ ರೀತಿಯಲ್ಲಿ ಅಭಿವೃದ್ಧಿ ಮಾಡೋಣವೆಂದು ಹೇಳಿಸರು.

ದಿವ್ಯ ಸಾನಿಧ್ಯವನ್ನು ವಹಿಸಿದ್ದ ಜಾತ್ರಾ ಮಹಾರಥೋತ್ಸವದ ರೂವಾರಿಗಳಾದ ಪೂಜ್ಯ ಶ್ರೀ ಷ.ಬ್ರ. ಡಾ॥ ರಾಜಶೇಖರ ಶಿವಾಚಾರ್ಯರು ಶ್ರೀ ಕ್ಷೇತ್ರ ಇನ್ನೂ ಹೆಚ್ಚಿನ ಅಭಿವೃದ್ಧಿ ಕಾಣಬೇಕು ಇಲ್ಲಿ ಸಾಕಷ್ಟು ಮದುವೆಗಳು ನಡೆಯುತ್ತಿದ್ದು ಅದಕ್ಕೊಂದು ಸುಸಜ್ಜಿತ ಬೃಹತ ಕಲ್ಯಾಣ ಮಂಟಪದ ಅವಶ್ಯಕತೆ ಇದೆ. ಅದಕ್ಕಾಗಿ ಮಾನ್ಯ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರಿಂದ 50 ಲಕ್ಷ ರೂಪಾಯಿಗಳ ಅನುದಾನವನ್ನು ಕೊಡಿಸುವ ಪ್ರಯತ್ನವನ್ನು ಮಾಡಬೇಕೆಂದು ಸಚಿವರ ಪರಮಾಪ್ತರಾದ ಖ್ಯಾತ ಉದ್ಯಮಿ ಪಿ.ಎಲ್.ಡಿ ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಮಡಿವಾಳಪ್ಪ ಮಂಗಲಗಿಯವರಿಗೆ ಶ್ರೀಗಳು ಹೇಳಿದರು. ಇದಕ್ಕೆ ಶಾಸಕರಾದ ಡಾ॥ ಶೈಲೇಂದ್ರ ಬೆಲ್ದಾಳೆರವರು ಧನಿಗೂಡಿಸಿದರು. ಎಲ್ಲರ ಒತ್ತಾಯದ ಮೇರೆಗೆ ಶ್ರೀ ಮಂಗಲಗಿರವರು ಎದ್ದು ನಿಂತು ಖಂಡಿತವಾಗಿ ನಾನು ವಿಶೇಷವಾಗಿ ಶತಪ್ರಯತ್ನ ಮಾಡುವುದಾಗಿ ಹೇಳಿದರು.

ಖ್ಯಾತ ಜ್ಯೋತಿಷಿ ಧನ್ನೂರಿನ ಶ್ರೀ ಗಂಗಾಧರ ಸ್ವಾಮಿ ಕ್ಷೇತ್ರದ ಮಹಿಮೆ ಮತ್ತು ಮಕರ ಸಂಕ್ರಾತಿ ಮಹತ್ವ ಕುರಿತು ಉಪನ್ಯಾಸ ನೀಡಿದರು. ಮಡಿವಾಳಪ್ಪ, ಗಂಗಶೆಟ್ಟಿ, ವಿವೇಕವಾಲಿ, ಅಶೋಕ ಜಾಧವ ಅಧ್ಯಕ್ಷರು ಗ್ರಾ.ಪಂ, ರಮೇಶ ಪಾಟೀಲ್,. ನೀಲಕಂಠ ಪಾಟೀಲ, ಶಿವಮೂರ್ತಿ ಸ್ವಾಮಿ, ಮಾಣಿಕಪ್ಪ ಹಾವಶೆಟ್ಟಿ, ಬಸಯ್ಯ ಸ್ವಾಮಿ ಸುಲ್ತಾನಬಾದ ವಾಡಿ ಅಥಿತಿಗಳಾಗಿದ್ದು, ಬಸವರಾಜ ಹಾಲಹಳ್ಳಿ ಧನ್ನೂರು ಎಲ್ಲರನ್ನು ಸ್ವಾಗತ ಕೋರಿದರು ಸಂಜುಕುಮಾರ ಡೊಳ್ಳಿ ನಿರೂಪಿಸಿದರು. ಬಸವರಾಜ ಪಾಟೀಲ ವಂದಿಸಿದರು, ಶಿವು ಪೂಜಾರಿ, ಡಾ॥ ಶಾಂತವೀರ ಸ್ವಾಮಿ, ರಾಜಕುಮಾರ ನಿಂಗಬಾಶೆಟ್ಟಿ, ಬಸಯ್ಯ ಸ್ವಾಮಿ ಮಠ ಮುಂತಾದವರು ಇದ್ದರು. ಕೊಳಾರ (ಬಿ) ಯ ಶಿವಕುಮಾರ ಗುಂಡಪ್ಪಾ ಡೊಂಗರಗಿ ಅವರಿಂದ ದಾಸೋಹ ಸೇವೆ ನೆರವೇರಿತು. ರಥೋತ್ಸವದಲ್ಲಿ ಸಾವಿರಾರು ಭಕ್ತರು ಭಾಗವಹಿಸಿದ್ದರು.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 17- 2024-25ನೇ ಸಾಲಿನ ಜಿಲ್ಲಾ ವಲಯ ಯೋಜನೆಯ "ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತವಾಗಿ ಸುಧಾರಿತ ಸಲಕರಣೆ ಯೋಜನೆ"ಯಡಿ ಗ್ರಾಮೀಣ ಪ್ರದೇಶದ ವೃತ್ತಿನಿರತ ಗೌಂಡಿ ಕಸಬುದಾರರಿಗೆ ಉಚಿತವಾಗಿ ಉಪಕರಣ ವಿತರಿಸಲು ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಉಪ ನಿರ್ದೇಶಕರು (ಗ್ರಾ.ಕೈ) ಮಹೇಶ ಅವರು ತಿಳಿಸಿದ್ದಾರೆ.

ದಾಖಲಾತಿಗಳು ಜನ್ಮ ದಿನಾಂಕ ನಮೂದಿಸಿರುವ ದಾಖಲೆ, ಜಾತಿ ಪ್ರಮಾಣ ಪತ್ರ. (ಪ.ಜಾ, ಪ.ಪಂ ಮತ್ತು ಅಲ್ಪಸಂಖ್ಯಾತರವರಿಗೆ ಮಾತ್ರ), ಆದಾಯ ದೃಢೀಕರಣ ಪತ್ರ, ಚಾಲ್ತಿಯಲ್ಲಿರುವ ಪಡಿತರ ಚೀಟಿ, ಪಾಸ್ಪೋರ್ಟ್ ಗಾತ್ರದ ಭಾವಚಿತ್ರ, 20 ರೂ. ಇ-ಸ್ಟ್ಯಾಂಪ್ ನಲ್ಲಿ ನಿಗದಿತ ನಮೂನೆಯಲ್ಲಿ ಮುಚ್ಚಳಿಕೆ ಪತ್ರ. ವಿಕಲಚೇತನ ಪ್ರಮಾಣ ಪತ್ರ. (ವಿಕಲಚೇತನರಾಗಿದ್ದಲ್ಲಿ), ಆಯಾ ಗ್ರಾಮ ಪಂಚಾಯತಿಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರಿಂದ, ತಾಲೂಕಿನ ಕೈಗಾರಿಕಾ ವಿಸ್ತರ್ಣಾಧಿಕಾರಿಯವರಿಂದ (ಗೌಂಡಿ) ವೃತ್ತಿ ಮಾಡುತ್ತಿರುವ ಬಗ್ಗೆ ಧೃಢೀಕರಣ ಪ್ರಮಾಣ ಪತ್ರ ಸಲ್ಲಿಸಬೇಕು.

ಷರತ್ತುಗಳು (ಸೂಚನೆಗಳು): ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. ಸರ್ಕಾರಿ ನೌಕರರು ಅಥವಾ ಅವರ ಅವಲಂಬಿತರು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಕಳೆದ 3 ವರ್ಷದಲ್ಲಿ ಈ ಇಲಾಖೆಯಿಂದ ಗೌಂಡಿ ಸಲಕರಣೆಗಳನ್ನು ಪಡೆದಿದ್ದರೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಅರ್ಜಿ ಸಲ್ಲಿಸಲು ಅವಕಾಶ ಇರುತ್ತದೆ. ಅಪ್ಲೋಡ್ ಮಾಡಿದ ಮೂಲ ದಾಖಲಾತಿಗಳು ಸ್ಪಷ್ಟವಾಗಿರಬೇಕು ಇಲ್ಲವಾದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ಆಯಾ ತಾಲೂಕಿನ ಅರ್ಜಿದಾರರು ಆಯಾ ತಾಲೂಕಿನಲ್ಲಿ ಅರ್ಜಿ ಸಲ್ಲಿಸಬೇಕು ಇಲ್ಲವಾದ್ದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ಕನಿಷ್ಠ 18 ವರ್ಷ ತುಂಬಿರಬೇಕು, ಎಸ್.ಸಿ, ಎಸ್.ಟಿ ವರ್ಗದವರಿಗೆ ಗರಿಷ್ಠ 45 ವರ್ಷ ಹಾಗೂ ಸಾಮಾನ್ಯ, ಹಿಂದುಳಿದ ವರ್ಗದವರಿಗೆ, ಇತರೆ 42 ವರ್ಷ ಒಳಗಿರಬೇಕು. ವೆಬ್‌ಸೈಟ್ ದಠಿಥಿಚಿಜರುಡಿ. ಞಚಿಡಿಟಿಚಿಣಚಿಞಚಿ.ರಠಿತ.ಟಿ, ಥಿಚಿಜರುಡಿ.ಟುಥಿ.ಟಿ ನಲ್ಲಿ 2025ರ ಜನವರಿ 18 ರಿಂದ 31ರ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ.08473253791ಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.29ರಂದು ಪುರಂದರ ದಾಸರ ಆರಾಧನೆ

ಮಲ್ಲಮ್ಮ ನುಡಿ ವಾರ್ತೆ

ವಿಜಯನಗರ:ಇದೇ ಜ.29ರಂದು ನಡೆಯಲಿರುವ ಪುರಂದರದಾಸರ ಆರಾಧಾನೋತ್ಸವವನ್ನು ಅಚ್ಚುಕಟ್ಟಾಗಿ ನೆರವೇರಿಸಲು ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣಪ್ಪ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಂದು ಹಂಪಿಯ ಶ್ರೀ ವಿರೂಪಾಕ್ಷ ದೇವಸ್ಥಾನದ ಆವರಣದಲ್ಲಿ ಶ್ರೀ ಪುರಂದರದಾಸರ ವೇದಿಕೆಯನ್ನು ನಿರ್ಮಿಸಿ ಬೆಳಗ್ಗೆ 6 ರಿಂದ 11 ಗಂಟೆಯ ವರೆಗೆ ಅಭಿಷೇಕ, ಪೂಜೆ ನೆರವೇರಿಸಲಾಗುತ್ತದೆ. ಇದೇವೇಳೆ ಶ್ರೀ ಪುರಂದರದಾಸರ ಭಾವಚಿತ್ರವನ್ನು ಆನೆಯ ಮೇಲೆ ಮೆರವಣಿಗೆ ಮಾಡುವ ಮೂಲಕ ಜ್ಯೋತಿ ಉತ್ಸವ ಮಾಡಲಾಗುತ್ತದೆ ಎಂದರು.

ಪ್ರತಿ ವರ್ಷದಂತೆ ಸಂಜೆ 5



ಗಂಟೆಯಿಂದ ರಾತ್ರಿ 10 ರ ವರೆಗೆ ವಿರುಪಾಕ್ಷೇಶ್ವರ ದೇವಸ್ಥಾನದ ಆವರಣದಲ್ಲಿ ನಿರ್ಮಿಸಿದ ವೇದಿಕೆಯಲ್ಲಿ ಪುರಂದರ ದಾಸರ ಕೀರ್ತನೆ, ಜನಪದ ಸಂಗೀತ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಸಾರ್ವಜನಿಕರು ಭಾಗವಹಿಸಲು ಮುಕ್ತ ಅವಕಾಶವಿರುತ್ತದೆ ಎಂದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ನಾಳೆ( ಜ.19) ಮಕ್ಕಳ ಕಾವ್ಯಗಳ ಅವಲೋಕನ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ನಾಡಿನ ಖ್ಯಾತ ಮಕ್ಕಳ ಸಾಹಿತಿಗಳಲ್ಲಿ ಒಬ್ಬರಾದ ಪ್ರೋ.ಚಂದ್ರಗೌಡ ಕುಲಕರ್ಣಿ ಅವರು ರಚಿಸಿದ ಮಕ್ಕಳ ಕಾವ್ಯಗಳ ಸುದೀರ್ಘ ಪಯಣದ ಕುರಿತು ಮಕ್ಕಳ ಸಾಹಿತ್ಯಾಸಕ್ತಗೆಳೆಯರ ಬಳಗದ ವತಿಯಿಂದ ಹಮ್ಮಿಕೊಂಡ ಕೃತಿ ಅವಲೋಕನಾ ಸಮಾರಂಭ ನಾಳೆ( ಜ.19) ರಂದು ನಡೆಯಲಿದೆ. ಭಾನುವಾರ ಮುಂಜಾನೆ 10-00 ಘಂಟೆಗೆ ಪಟ್ಟಣದ ಎ.ಪಿ.ಎಂ.ಸಿ. ಸಭಾ ಭವನದಲ್ಲಿ ನಡೆಲಿರುವ ಈ ಕಾರ್ಯಕ್ರಮದಲ್ಲಿ

ಧಾರವಾಡದ ಆನಂದ ಪಾಟೀಲ ಅವರು ಗೆಳೆಯ ಮತ್ತು ಮಕ್ಕಳ ಸಾಹಿತ್ಯ ಪಯಣ ಕುರಿತು , ತಮ್ಮಣ್ಣ ಬೀಗಾರ ಅವರು ಮಕ್ಕಳ ಸಾಹಿತ್ಯದ ವಸ್ತು ವಿಸ್ತಾರ ಹಾಗೂ ಡಾ. ಶಿವಲಿಂಗಪ್ಪ



ಹಂದಿಹಾಳ ಅವರು ಕಲಾತ್ಮಕ ಅಭಿವ್ಯಕ್ತಿಯ ಹಂಬಲ ಎಂಬ ವಿಷಯವಾಗಿ, ಗುಂಡುರಾವ್ ದೇಸಾಯಿ ಅವರು ಉತ್ತರ ಕರ್ನಾಟಕದ ವಾತಾವರಣದ ನಡುವೆ, ಶಿಸು ಸಾಹಿತ್ಯ,ಡಾ. ವಿನಾಯಕ ಕಮತದ ಅವರು, ಕಾವ್ಯ ಸ್ಪಂದನ - ನಿರ್ವಹಣೆ ಹಾಗೂ ಶ್ರೀ ಫ.ಗು. ಸಿದ್ದಾಪುರ ಅವರು ಮಕ್ಕಳ ಸಾಹಿತ್ಯ ಒಡನಾಡಿ ಎಂಬ ವಿಷಯವಾಗಿ ಹಾಗೂ ಪ್ರೊ. ಚಂದ್ರಗೌಡ ಕುಲಕರ್ಣಿ ಅವರು ಮಕ್ಕಳ ಕಾವ್ಯ ಪಯಣ ಎಂಬ ವಿಷಯವಾಗಿ ಉಪನ್ಯಾಸ ನೀಡಲಿದ್ದಾರೆ. ಕಾರ್ಯಕ್ರಮದ ಉಪಸ್ಥಿತಿಯನ್ನು ಪ್ರೊ. ಶೇಷಾಚಲ ಹವಾಲ್ದಾರ್ ವಹಿಸಿಕೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಶ್ರೀಕಾಂತ ಪತ್ತಾರ ಅವರು ಪ್ರಾಸ್ತಾವಿಕ ಮಾತುಗಳನ್ನಾಡಲಿದ್ದಾರೆ.

ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು, ತಾಲೂಕಾ ಶರಣ ಸಾಹಿತ್ಯ ಪರಿಷತ್ತು, ತಾಲೂಕಾ ಮಕ್ಕಳ ಸಾಹಿತ್ಯ ಪರಿಷತ್ತು, ಸಹೃದಯಿ ಶಿಕ್ಷಕರ ಬಳಗ, ಕದಳಿ ವೇದಿಕೆ ತಾಳಿಕೋಟಿ ಅವರು ಉಪಸ್ಥಿತರು ಇರಲಿದ್ದಾರೆ .ತಾಳಿಕೋಟಿಯ ಮಕ್ಕಳ ಸಾಹಿತ್ಯಾಸಕ್ತರು ಭಾಗವಹಿಸಿ ಈ ಉಪನ್ಯಾಸ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಸಾಹೇಬಗೌಡ ಬಿರಾದಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರೀಕ್ಷಾ ಕೇಂದ್ರದ ಸುತ್ತಮುತ್ತಲೂ 300 ಮೀಟರ್ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 17, (ಕ.ವಾ) : ಕರ್ನಾಟಕ ಲೋಕಸೇವಾ ಆಯೋಗವು ವಿವಿಧ ಇಲಾಖೆಗಳ ಗ್ರೂಪ್ ಬಿ ಉಳಿಕೆ ಮೂಲ ವೃಂದದ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆಯು 2025ರ ಜನವರಿ 19, ಹಾಗೂ ಜನವರಿ 25 ರಂದು ನಡೆಸುತ್ತಿರುವ ವಿವಿಧ ಇಲಾಖೆಗಳ ಗ್ರೂಪ್ ಬಿ ಉಳಿಕೆ ಮೂಲ ವೃಂದದ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಈ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲೂ 300 ಮೀಟರ್ ಪ್ರದೇಶವನ್ನು ನಿಷೇಧಿತ ಸ್ಥಳವೆಂದು ಘೋಷಿಸಿ ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಆದೇಶ ಹೊರಡಿಸಿದ್ದಾರೆ.

ಯಾದಗಿರಿ ಜಿಲ್ಲೆಯಲ್ಲಿ ದಂಡ ಪ್ರಕ್ರಿಯೆ ಬಿ.ಎನ್.ಎಸ್.ಎಸ್ 2023ರ ಕಲಂ 163 ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ 2025ರ ಜನವರಿ 19ರ ಬೆಳಿಗ್ಗೆ 10 ರಿಂದ 11.30 ಗಂಟೆಯ ವರೆಗೆ ಮತ್ತು 2025ರ ಜನವರಿ 25ರ ಮಧ್ಯಾಹ್ನ 3 ರಿಂದ 5 ಗಂಟೆಯ ವರೆಗೆ ಈ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲಾಗುತ್ತಿದ್ದು, ಈ ಪರೀಕ್ಷೆಗಳು ಸುಸೂತ್ರವಾಗಿ ನಡೆಸುವ ಹಿತದೃಷ್ಠಿಯಿಂದ, ಪರೀಕ್ಷಾ ಕೇಂದ್ರದ ಸುತ್ತಮುತ್ತಲೂ 300 ಮೀಟರ್ ಪ್ರದೇಶದಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಹಾಗೂ ಜೆರಾಕ್ಸ್ ಅಂಗಡಿಗಳು, ಪುಸ್ತಕ ಮಳಿಗೆಗಳನ್ನು ಈ ಕೆಳಕಾಣಿಸಿದ ಷರತ್ತಿಗೊಳಪಟ್ಟು ತೆರೆಯುವುದನ್ನು ನಿಷೇಧಿಸಿ ಆದೇಶಿಸಿದೆ.

ಷರತ್ತುಗಳು :ಪರೀಕ್ಷಾ ಕೇಂದ್ರದ ಸುತ್ತಲೂ 300 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ ಮೊಬೈಲ್, ಪೇಜರ್, ಜೆರಾಕ್ಸ್, ಟೈಪಿಂಗ್, ಪುಸ್ತಕ ಮಳಿಗೆಗಳು ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ನಿಗದಿಪಡಿಸಿದ ಅಧಿಕಾರಿಗಳನ್ನು, ಶಿಕ್ಷಕರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೇ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವದನ್ನು ನಿಷೇಧಿಸಲಾಗಿದೆ. 300 ಮೀಟರ್ ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವದನ್ನು ನಿಷೇಧಿಸಿದೆ. ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಗಳಿಗೆ ಈ ಆದೇಶ ಅನ್ವಯವಾಗುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾರ್ಟ್ ಸರ್ಕ್ಯೂಟ್: ಸುಟ್ಟು ಕರಕಲಾದ 500 ಟನ್ ಕಬ್ಬು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.17 : ಶಾರ್ಟ್ ಸರ್ಕ್ಯೂಟ್ ನಿಂದ ಸುಮಾರು 10 ಎಕರೆಯ 500 ಟನ್ ಕಬ್ಬು ಸಂಪೂರ್ಣವಾಗಿ ಸುಟ್ಟು ಕರಕಲಾಗಿರುವ ಘಟನೆ ಕಲಬುರಗಿ ಜಿಲ್ಲೆಯ ಕಾಳಗಿ ತಾಲೂಕಿನ ಹೊಸಳ್ಳಿ (ಎಚ್) ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಶ್ರೀದೇವಿ ಲಕ್ಷಮಯ್ಯ ಗುತ್ತೇದಾರ ಅವರ ಹೊಲದ ಕಬ್ಬಿಗೆ ಬೆಂಕಿ ಹೊತ್ತಿಕೊಂಡಿದೆ. ಇದಾದ ಬಳಿಕ ಪಕ್ಕದ ಮೋತಿಬಾಯಿ ಜೇನು, ಹಾಗೂ ಲಕ್ಷ್ಮಣ ಧನಸಿಂಗ ಅವರ ಹೊಲಕ್ಕೂ ಬೆಂಕಿ ಹರಡಿದ ಪರಿಣಾಮ ಒಟ್ಟು 10 ಎಕರೆಯಷ್ಟು ಕಬ್ಬು ಸುಟ್ಟು ಕರಕಲಾಗಿದೆ. ಪ್ರತಿ ಎಕರೆಯಲ್ಲಿ 50 ಟನ್ ಕಬ್ಬು ಬೆಳೆದಿದ್ದು, 10 ಎಕರೆಯಂತೆ ಸುಮಾರು 500 ಟನ್ ಕಬ್ಬು ಬೆಂಕಿಗೆ ಆಹುತಿಯಾಗಿದೆ. ಇದರಿಂದ 10 ಲಕ್ಷಕ್ಕೂ ಅಧಿಕ ಮೌಲ್ಯದ ಕಬ್ಬು ಬೆಳೆ ಕಳೆದುಕೊಂಡು ರೈತರು ಕಂಗಾಲಾಗಿದ್ದಾರೆ. ಘಟನಾ ಸ್ಥಳಕ್ಕೆ ಅಗ್ನಿಶಾಮಕ ದಳ ಬಂದು ಬೆಂಕಿ ನಂದಿಸುವಲ್ಲಿ ಯಶಸ್ವಿಯಾಯಿತು.

## ಬಾಗಲಕೋಟೆ ಬಂದ್‌ಗೆ ಟಿಪ್ಪು ಬಳಗ ಬೆಂಬಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.17:ಸೋಮವಾರ ಜ.20 ರಂದು ನಡೆಯುವ ಬಾಗಲಕೋಟೆ ಬಂದ್‌ಗೆ ಕರ್ನಾಟಕ ಟಿಪ್ಪುಸುಲ್ತಾನ ಬಳಗ ಬಂದ್ ಗೆ ಬೆಂಬಲ ನೀಡಲಿದೆ ಎಂದು ಯಾಸೀನ್ ನದಾಫ್ ತಿಳಿಸಿದರು.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ಡಾ.ಅಂಬೇಡ್ಕರ್ ಅವರ ಕುರಿತು ಅವಹೇಳನಕಾರಿಯಾಗಿ ಹೇಳಿಕೆ ನೀಡಿರುವುದು ಖಂಡನೀಯ ಎಂದರು.

ಡಾ.ಅಂಬೇಡ್ಕರ್ ನೀಡಿದ ಸಂವಿಧಾನದಿಂದ ಅಮಿತ್ ಶಾ ಗೃಹ ಮಂತ್ರಿಯಾಗಿದ್ದಾರೆ. ಇಂತಹ ಸಂದರ್ಭದಲ್ಲಿ ಅಂಬೇಡ್ಕರ್ ವಿರುದ್ಧ ಇಂತಹ ಮಾತುಗಳು ಸರಿಯಲ್ಲ. ಅವರ ಬಗ್ಗೆ ಮಾತನಾಡಲು ನಮಗೆ ಯೋಗ್ಯತೆ ಇರಬೇಕು. ಇಂತಹ ಮಹಾನ್ ವ್ಯಕ್ತಿ ಬಗ್ಗೆ ಇಲ್ಲಸಲ್ಲದ ಮಾತು ಸರಿಯಲ್ಲ ಎಂದು ಎಚ್ಚರಿಕೆ ನೀಡಿದರು.

ಬಾಗಲಕೋಟೆ ಬಂದ್‌ಗೆ ನಗರದ ಬೀದಿ ಬದಿ ವ್ಯಾಪರಸ್ಥರು ಸೇರಿದಂತೆ ಸಂಘ, ಸಂಸ್ಥೆಗಳು ಬೆಂಬಲ ಸೂಚಿಸಬೇಕು ಎಂದು ಮನವಿ ಮಾಡಿಕೊಂಡರು. ಮುಖಂಡರಾದ ಮೊಹಮ್ಮದ್ ಯಾಸೀನ್ ಮಿರ್ಜಿ, ಅಬ್ದುಲ್ ಗಣಿ ಹಾಗೂ ರಾಜು ನಾಯ್ಕರ್ ಸೇರಿದಂತೆ ಇತರರಿದ್ದರು.

# ಉಸ್ತುವಾರಿ ಸಚಿವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲಿ: ಭಗವಂತ ಖೂಬಾ




ಮಲ್ಲಮ ನುಡಿ ವಾರ್ತೆ

ಬೀದರ. ಜ. 17 : ಎಟಿಎಂಗೆ ಹಣ ತುಂಬುವ ಸಿಬ್ಬಂದಿ ಗಿರಿ ವೆಂಕಟೇಶ್‌ಗೆ ದುಷ್ಕರ್ಮಿಗಳು ಶೂಟೌಟ್ ಮಾಡಿದ್ದು ನಿಜಕ್ಕೂ ಖಂಡನೀಯ. ಇದರ ನೈತಿಕ ಹೊಣೆಹೊತ್ತು ಜಿಲ್ಲಾ ಉಸ್ತುವಾರಿ ಸಚಿವರು ರಾಜೀನಾಮೆ ನೀಡಬೇಕೆಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಸುದ್ದಿಗೋಷ್ಠಿಯಲ್ಲಿ ಆಗ್ರಹಿಸಿದರು.

ಈ ಕುರಿತು ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಮಾತನಾಡಿರುವ ಅವರು ಜಿಲ್ಲೆಯಲ್ಲಿ ಬಡವರ ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾಗುತ್ತಿವೆ. ಇಸ್ಪಿಟ್ ಅಡ್ಡೆಗಳು ತಲೆಎತ್ತಿವೆ. ವೇಶ್ಯಾವಾಟಿಕೆ ಆರಂಭವಾಗಿವೆ. ಇದು ಮಾನವೀಯ ಸಮಾಜ ತಲೆತಗ್ಗಿಸುವ ಕಾರ್ಯ ಆರಂಭವಾಗಿವೆ. ಬಸವಣ್ಣನವರ ಅನುಯಾಯಿ ಎಂದು ಹೇಳಿಕೊಳ್ಳುವ ಉಸ್ತುವಾರಿ ಸಚಿವರು ಈ ಎಲ್ಲಾ ಅನೈತಿಕ ಚಟುವಟಿಕೆಗಳನ್ನು ನಿಲ್ಲಿಸಬೇಕಾಗಿದೆ. ಕೆಲವು ಅಪರಾಧಿಗಳನ್ನು ರಕ್ಷಿಸುತ್ತಿರುವ ಸಚಿವರು ಜನರ ನಿರೀಕ್ಷೆಗಳನ್ನು ಹುಸಿಗೊಳಿಸಬಾರದು. ಅಧಿಕಾರದ ಅಮಲು, ಅಹಂಕಾರವನ್ನು ಬದಿಗಿಟ್ಟು ಜಿಲ್ಲೆಯ ಜನತೆಯ ಹಿತಾಸಕ್ತಿ ಮತ್ತು ಅಭಿವೃದ್ಧಿ ಕಡೆಗೆ ಹೆಚ್ಚು ಗಮನ ವಹಿಸಬೇಕೆಂದು ಖೂಬಾ ಸುದ್ದಿಗೋಷ್ಠಿಯಲ್ಲಿ ಸೂಚಿಸಿದರು.

ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಮಾತನಾಡಿ ಹಾಡುಹಗಲೇ ಬೀದರನಲ್ಲಿ ಎಟಿಎಂ ಹಣ ದರೋಡೆ ಮಾಡಿ, ಒಬ್ಬ ವ್ಯಕ್ತಿಯನ್ನು ಕೊಂದು ಪರಾರಿಯಾಗಿದ್ದು ನಿಜಕ್ಕೂ ಜಿಲ್ಲೆ ಬೆಚ್ಚಿಬೀಳುವ ಘಟನೆಯಾಗಿದೆ. ಗೃಹಸಚಿವರು ರಾಜ್ಯದಲ್ಲಿ ಇದ್ದಾರೋ ಇಲ್ಲವೋ ಎಂಬುದು ಅನುಮಾನದಿಂದ ನೋಡುವಂತಾಗಿದೆ. ಗೃಹ ಇಲಾಖೆ ರಾಜ್ಯದಲ್ಲಿ ಸಂಪೂರ್ಣ ವಿಫಲವಾಗಿದೆ. ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಗದಗೆಟ್ಟಿದೆ. ಪೊಲೀಸ್ ಇಲಾಖೆ ಅಪರಾಧಗಳನ್ನು ತಡೆಯುವಲ್ಲಿ ಸಂಪೂರ್ಣ ವಿಫಲವಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಯಲ್ಲಿ ಏಕಸ್ವಾಮ್ಯತ್ವ ಸಾಧಿಸಲು ಹೊರಟಿದ್ದಾರೆ ಇನ್ನೋರ್ವ ಸಚಿವರು ಮೂಕ ಸಚಿವರಾಗಿದ್ದಾರೆ. ಬೀದರ ಉತ್ತರ ಕ್ಷೇತ್ರದಲ್ಲೇ ಹತ್ಯೆ ನಡೆದರೂ ಇದುವರೆಗೆ ಒಂದೇ ಒಂದು ಹೇಳಿಕೆ ನೀಡಿಲ್ಲ ಎಂದು ರಹಿಂಖಾನ್ ಅವರಿಗೆ ಪರೋಕ್ಷವಾಗಿ ಕಾಲೆಳೆದರು. ಇಂತಹ ಸಚಿವರನ್ನು ಪಡೆದಿದ್ದು ನಮ್ಮ ದುರ್ದೈವ ಎಂದು ಪಾಟೀಲ ಹೇಳಿದರು. ಗಿರಿ ವೆಂಕಟೇಶ ಕೊಲೆ ಇದು ಸರ್ಕಾರದ ವೈಫಲ್ಯ ಎತ್ತಿ ತೋರಿಸುತ್ತದೆ. ಹೀಗಾಗಿ ಮೃತನ ಕುಟುಂಬಕ್ಕೆ ಪರಿಹಾರ ಒದಗಿಸಬೇಕೆಂದು ತಿಳಿಸಿದರು.

ಬೀದರ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಮಾತನಾಡಿ ನಮ್ಮ ಕ್ಷೇತ್ರದ ಚಿದ್ರಿಯ ಗಿರಿ ವೆಂಕಟೇಶ್ ಹತ್ಯೆಯಾಗಿದ್ದು ನಿಜಕ್ಕೂ ಖಂಡನೀಯ. ಮೃತರ ಕುಟುಂಬಕ್ಕೆ ಸರ್ಕಾರ 1 ಕೋಟಿ ಪರಿಹಾರ ಕೊಡಬೇಕು. ಕುಟುಂಬದ ಒಬ್ಬ ಸದಸ್ಯರಿಗೆ ಉದ್ಯೋಗ ನೀಡಿ ಸರ್ಕಾರದಿಂದ ಖಾಯಂ ಮಾಡಬೇಕು. ಈ ರೀತಿ ಹಾಡಹಗಲೇ ಹತ್ಯೆ ಮಾಡಿದ್ದರ ಹಿಂದೆ ಯಾರ ಕೈವಾಡವಿದೆ ಎಂಬ ಕುರಿತು ಸಮಗ್ರ ತನಿಖೆಯಾಗಬೇಕು. ಜಿಲ್ಲೆಯಲ್ಲಿ ನಡೆಯುತ್ತಿರುವ ಕಾನೂನುಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕುವ ಅಗತ್ಯವಿದೆ ಎಂದರಲ್ಲದೆ ಜಿಲ್ಲಾ ಉಸ್ತುವಾರಿ ಸಚಿವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ವಿಭಾಗೀಯ ಸಹಪ್ರಭಾರಿ ಈಶ್ವರಸಿಂಗ್ ಠಾಕೂರ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಮಾಜಿ ಬುಡಾ ಅಧ್ಯಕ್ಷ ಬಾಬು ವಾಲಿ, ಬಿಜೆಪಿ ನಗರ ಮಂಡಲ ಅಧ್ಯಕ್ಷ ಶಶಿಧರ ಹೊಸಳ್ಳಿ, ಗುರುನಾಥ ಜ್ಯಾಂತಿ–ಕರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಸಾವಿತ್ರಿಬಾಯಿ ಪ್ರಶಸ್ತಿಗೆ ಮಹೇಶ್ವರಿ ಷಣ್ಮುಖಯ್ಯ ಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.17: ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್(ರಿ) ಭಾಲ್ಕಿಯ ಶ್ರೀ ಚನ್ನಬಸವೇಶ್ವರ ಗುರುಕುಲ ಕರಡ್ಯಾಳ ವತಿಯಿಂದ ಪ್ರಸಕ್ತ ಸಾಲಿನಿಂದ ನೀಡಲಾಗುತ್ತಿರುವ ಸಾವಿತ್ರಿಬಾಯಿ ಫುಲೆ ಶಿಕ್ಷಣ ಸೇವಾ ಪ್ರಶಸ್ತಿಗೆ ಕಲಬುರಗಿ ಶರಣೆ ಮಹೇಶ್ವರಿ ಷಣ್ಮುಖಯ್ಯ ಸ್ವಾಮಿ ಅವರನ್ನು ಆಯ್ಕೆ ಮಾಡಲಾಗಿದೆ.

ಚನ್ನಬಸವೇಶ್ವರಗುರುಕುಲದಲ್ಲಿ ಭಾನುವಾರ ಸಾಯಂಕಾಲ 5 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಮಹೇಶ್ವರಿ ಷಣ್ಮುಖಯ್ಯ ಸ್ವಾಮಿ ಅವರ ಶೈಕ್ಷಣಿಕ ಸೇವೆಯಲ್ಲಿ ಗುರುತಿಸಿ ಈ ಚೊಚ್ಚಲ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಪ್ರಶಸ್ತಿ ಪುರಸ್ಕೃತರ ಪರಿಚಯ:

ಬಸವಾದಿ ಶರಣ–ರ ತತ್ವಾದರ್ಶನಗಳನ್ನು ಅಂತರ್ ಬಾಹ್ಯವಾಗಿ ನಂಬಿಕೊಂಡಿರುವ ಶರಣೆ ಮಹೇಶ್ವರಿ ಷಣ್ಮುಖಯ್ಯ ಸ್ವಾಮಿ ಅವರು ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸುತ್ತಿರುವ ಸೇವೆ ಅನುಪಮವಾಗಿದೆ. ಇವರು ಗದಗ ಜಿಲ್ಲೆಯ ನರಗುಂದದ ಶರಣೆ ಅನ್ನಪೂರ್ಣ ಶರಣ ಗುರುಲಿಂಗಪ್ಪ ಚೌಕಿಮಠ ಶರಣ ದಂಪತಿಗಳ ಉದರದಲ್ಲಿ ಜನಿಸಿದರು. ಚೌಕಿಮಠ ದಂಪತಿಗಳು ಗುರು–ಲಿಂಗ–ಜಂಗಮ ಪ್ರೇಮಿಗಳಾಗಿದ್ದರು. ತಮ್ಮ ಮಕ್ಕಳಲ್ಲಿ ಶರಣ ಸಂಸ್ಕೃತಿ ಮೌಲ್ಯಗಳು ಬಿತ್ತಿದ್ದರು. ಶರಣ ಸಂಸ್ಕೃತಿಯಲ್ಲಿ ಬೆಳೆದ ಶರಣೆ ಮಹೇಶ್ವರ ಸ್ವಾಮಿ ಅವರು ಎಂ.ಎ.,ಬಿ.ಇಡಿ. ಶಿಕ್ಷಣ ಪಡೆದರು. ಇವರ ವಿವಾಹವು ಭಾಲ್ಕಿ ಹಿರೇಮಠದ ಪ್ರಸಾದನಿಲಯದಲ್ಲಿ ಬೆಳೆದ ಶರಣ ಷಣ್ಮುಖಯ್ಯ ಸ್ವಾಮಿ ಅವರೊಂದಿಗೆ ಆಗಿದೆ. ಸತಿ–ಪತಿಗಳೊಂದಾದ ಭಕ್ತಿ ಹಿತವಾಗಿಪ್ಪುದು ಶಿವಂಗೆ ಎಂಬ ಶರಣ ವಾಣಿಯಂತೆ ಇವರ ದಾಂಪತ್ಯ ಜೀವನವಾಗಿದೆ. ಇವರಿಗೆ ಇಬ್ಬರು ಗಂಡು ಮಕ್ಕಳಿದ್ದು, ಅವರು ಉನ್ನತ ಶಿಕ್ಷಣ ಪಡೆದಿದ್ದಾರೆ.

ಶರಣೆ ಮಹೇಶ್ವರಿ ಸ್ವಾಮಿ ಅವರು 1993 ರಂದು ಶರಣಬಸವೇಶ್ವರ ಮೊಂಟೆಸರಿಯಲ್ಲಿ ಶಿಕ್ಷಕಿಯಾಗಿ ಸೇವಾ ಜೀವನ ಆರಂಭಿಸಿದ ಇವರು ಇದೀಗ ಕಲಬುರಗಿಯ ಶ್ರೀ ರಾಜೀವಗಾಂಧಿ ಸ್ಮಾರಕ ಪ್ರೌಢಶಾಲೆಯಲ್ಲಿ ವಿಜ್ಞಾನ ಶಿಕ್ಷಕಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಜತೆಗೆ ಬಾಗಲಕೋಟ ಜಿಲ್ಲೆಯ ಹಳ್ಳೂರು ಮತ್ತು ಕಲಬುರಗಿಯಲ್ಲಿ ಶ್ರೀ ಚೌಕಿಮಠ ಲೋಕೇಶ್ವರ ವಿದ್ಯಾಪೀಠ ಅಡಿಯಲ್ಲಿ 2013–14 ರಲ್ಲಿ ಪ್ರಾಥಮಿಕ ಶಾಲೆಗಳು ಆರಂಭಿಸುವ ಮೂಲಕ ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡುವುದರಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಅಧ್ಯಯನ, ಅಧ್ಯಾಪನ, ಸಂಗೀತ, ಕವನ ರಚನೆ ಮುಂತಾದ ಕ್ಷೇತ್ರಗಳಲ್ಲಿ ವಿಶೇಷ ಆಸಕ್ತಿ ಹೊಂದಿರುವ ತಾಯಿಯವರು ಶರಣರ ಕಾಯಕ ಮತ್ತು ದಾಸೋಹ ತತ್ವಗಳನ್ನು ನಿಜಾಚರಣೆಯಲ್ಲಿ ಪಾಲಿಸಿಕೊಂಡು ಬರುತ್ತಿದ್ದಾರೆ.

## ಮತದಾರರಲ್ಲಿ ಅರಿವು ಮೂಡಿಸುವ ಕೆಲಸ ಹೆಚ್ಚಿನ ರೀತಿಯಲ್ಲಿ ನಡೆಯಬೇಕು: ರಾಹುಲ್ ರತ್ನಂ ಪಾಂಡೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜ.17: ಮತದಾರರ ಜಾಗೃತಿ ಕುರಿತು ಇನ್ನೂ ಹೆಚ್ಚಿನ ರೀತಿಯಲ್ಲಿ ಅರಿವು ಮೂಡಿಸುವ ಕೆಲಸ ಆಗಬೇಕಿದೆ ಹಾಗಾಗಿ ಪ್ರತಿ ವರ್ಷ ಜನವರಿ 25 ರಂದು ರಾಷ್ಟ್ರೀಯ ಮತದಾರರ ದಿನವನ್ನಾಗಿ ಆಚರಿಸಲಾಗುತ್ತದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಹೇಳಿದರು.

ಅವರು ಶುಕ್ರವಾರ ಜಿಲ್ಲಾ ಪಂಚಾಯತ ಸಮಿತಿ ಸಭಾಂಗಣದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಕರೆದ 15ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಜನವರಿ 25 ರಂದು ಬೆಳಿಗ್ಗೆ 10 ಗಂಟೆಗೆ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ 15ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ ಉತ್ತಮ ರೀತಿಯಲ್ಲಿ ಆಯೋಜನೆ ಮಾಡಬೇಕು. ಅಂದು ಬೆಳಿಗ್ಗೆ 9 ಗಂಟೆಗೆ ಕೊಪ್ಪಳ ನಗರದ ತಾಲ್ಲೂಕು ಕ್ರೀಡಾಂಗಣದಲ್ಲಿ ಮತದಾರರ ಜಾಗೃತಿ ಕುರಿತು ಬೃಹತ್ ಮಾನವ ಸರಪಳಿ ನಿರ್ಮಿಸಬೇಕು. ಮತದಾರರ ಜಾಗೃತಿ ಕಾರ್ಯದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಬಿಎಲ್‌ಓ ಹಾಗೂ ಸುಪರವೈಜರ್ ಮತ್ತು ಇ.ಎಲ್.ಸಿ ಸಂಯೋಜ–ಕರು ಸೇರಿದಂತೆ ಇತರರಿಗೆ ಸನ್ಮಾನಿಸಬೇಕು. ಶೇ. 100 ಪ್ರತಿಶತ ಮತದಾನವಾದ ಜಿಲ್ಲೆಯ ಯಾವುದಾದರೂ ತಾಂಡಾ ಹಾಗೂ ಗ್ರಾಮಗಳಿದ್ದರೆ ಅಂತವುಗಳನ್ನು ಗುರುತಿಸಿ ಎಂದು ಹೇಳಿದರು.

ಈ ವರ್ಷ 'ಮತದಾನಕ್ಕಿಂತ ಇನ್ನೊಂದಿಲ್ಲ. ನಾನು ಖಚಿತವಾಗಿ ಮತದಾನ ಮಾಡುವೆ' ಎಂಬ ವಿಶೇಷ ಧ್ಯೇಯವಾಕ್ಯದೊಂದಿಗೆ 15ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ 2025ರ ಜನವರಿ 25 ರಂದು ಆಚರಿಸುವ ಸಂಬಂಧ ಭಾರತ ಚುನಾವಣಾ ಆಯೋಗ ನಿರ್ದೇಶನ ನೀಡಿದ್ದು, ಈ ಸಂಬಂಧ ಜಿಲ್ಲಾ, ತಾಲ್ಲೂಕು ಮತ್ತು ಮತಗಟ್ಟೆಗಳ ಮಟ್ಟದಲ್ಲಿ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಆಯೋಜನೆ ಮಾಡಬೇಕೆಂದು ಹೇಳಿದರು.

ವಿವಿಧ ಶೈಕ್ಷಣಿಕ ಸಂಸ್ಥೆಗಳು, ಸ್ವಯಂ ಸೇವಾ ಸಂಸ್ಥೆಗಳು, ಎನ್.ಸಿ.ಸಿ., ಎನ್.ಎಸ್.ಎಸ್. ಮತ್ತು ಸ್ಕೌಟ್ ಗೈಡ್ ಸೇರಿದಂತೆ ಇತರರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಬೇಕು. ಈ. ಕುರಿತು ಕ್ಷೇತ್ರ ಕಾರ್ಯಕ್ರಮ ಹಾಗೂ ಪರಸ್ಪರ ಸಂವಹನದ ಮೂಲಕ ವ್ಯಾಪಕ ಪ್ರಚಾರ ಹಮ್ಮಿಕೊಳ್ಳಬೇಕು. ವಿಶೇಷವಾಗಿ ಹೆಚ್ಚಿನ ಜನರು ಸೇರುವ ಜನ ಸಂದಣಿಯಂತಹ ಸ್ಥಳಗಳಲ್ಲಿ ಹೆಚ್ಚಿನ ಪ್ರಚಾರ ಆಗಬೇಕು ಮತ್ತು ಹೊಸದಾಗಿ ನೊಂದಣಿಯಾದ ಯುವ ಮತದಾರರಿಗೆ ಕಾರ್ಯಕ್ರಮದಲ್ಲಿ ಮತದಾರರ ಗುರುತಿನ ಚೀಟಿ ವಿತರಿಸಬೇಕು. ಮತದಾರರ ಜಾಗೃತಿ ಕುರಿತ ಪ್ರತಿಜ್ಞಾ ವಿಧಿಯನ್ನು ಭೋದಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಪ್ರಕಾಶ ವಡ್ಡರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಶ್ರೀಶೈಲ್ ಬಿರಾದರ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಕೊಪ್ಪಳ ತಹಶಿಲ್ದಾರ ವಿಠ್ಠಲ್ ಚೌಗಲಾ, ಕೊಪ್ಪಳ ತಾ.ಪಂ ಇಓ ದುಂಡಪ್ಪ ತುರಾದಿ ಹಾಗೂ ಸ್ನಾತಕೋತ್ತರ, ವೈದ್ಯಕೀಯ, ತಾಂತ್ರಿಕ, ಡಿಪ್ಲೊಮಾ ವಿಭಾಗ ಹಾಗೂ ಪದವಿಪೂರ್ವ ಮತ್ತು ಪದವಿ ಹಂತದ ಇ.ಎಲ್.ಸಿ ಕೋಆರ್ಡಿನೇಟರಗಳು ಭಾಗವಹಿಸಿದ್ದರು.

## ಒಣಮೆಣಸಿನ ಕಾಯಿ ಮಾರುಕಟ್ಟೆ ನಿರ್ಮಾಣಕ್ಕೆ ಮನವಿ



ಮಲ್ಲಮನುಡಿ ವಾರ್ತೆ ಬಳ್ಳಾರಿ: ಗಡಿ ಭಾಗದ ಪ್ರಮುಖ ಜಿಲ್ಲಾ ಕೇಂದ್ರವಾದ ಬಳ್ಳಾರಿಯಲ್ಲಿ ಒಣಮೆಣಸಿನಕಾಯಿ ಮಾರುಕಟ್ಟೆ ಸ್ಥಾಪನೆ ಮಾಡಬೇಕೆಂದು ಕೃಷಿ ಮಾರುಕಟ್ಟೆ ಸಚಿವರಿಗೆ ಜಿಲ್ಲೆಯ ರೈತರು ಮನವಿ ಮಾಡಿದ್ದಾರೆ.

ರೈತ ಮುಖಂಡರಾದ ಆರ್. ಮಾಧವರೆಡ್ಡಿ ಕರೂರು ಅವರ ನೇತೃತ್ವದಲ್ಲಿ ಅನೇಕ ರೈತರು ಸಚಿವರನ್ನು ಭೇಟಿಯಾಗಿ, ಪ್ರತಿ ಎಕರೆಗೆ 20 ಕ್ವಿಂಟಲ್ ಜೋಳವನ್ನು ಖರೀದಿಸುವಂತೆ ಆದೇಶಿಸಲು ಸಚಿವರಾದ ಶಿವಾನಂದ ಪಾಟೀಲ್ ಇವರಿಗೆ ಕರ್ನಾಟಕ ರಾಜ್ಯ ರೈತ ಸಂಘದಿಂದ ಮನವಿಯನ್ನು ನೀಡಲಾಯಿತು. ಈ ಸಂಧರ್ಭದಲ್ಲಿ ಚಾಗನೂರು ಮಲ್ಲಿಕಾರ್ಜುನ ರೆಡ್ಡಿ, ಟಿ ಜಿ ವಿಠಲ್, ಕಾರಿ, ಲೇಪಾಕ್ಷಿ, ವಿಶ್ವನಾಥ, ಬಸವರಾಜ ಸ್ವಾಮಿ, ಪಂಪನಗೌಡ, ಈಶ್ವರ ರೆಡ್ಡಿ, ಬಸರೆಡ್ಡಿ, ಗೋಪಾಲ ರೆಡ್ಡಿ, ಉಮಾಪತಿ ಗೌಡ, ತಿಮ್ಮನಗೌಡ ಇತರರು ಇದ್ದರು.


## ಯುವನಿಧಿ ಯೋಜನೆಗೆ ವಿಶೇಷ ನೊಂದಣಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳಲ್ಲಿ ಒಂದಾದ ಯುವ ನಿಧಿ ಯೋಜನೆ ಫಲಾನುಭವಿಗಳ ನೋಂದಣಿ ಪ್ರಕ್ರಿಯೆ ಚಾಲ್ತಿಯಲ್ಲಿ ಇರುತ್ತದೆ. ಈ ಸಂಬಂಧ 2022 –23 ಹಾಗೂ 2023–24ನೇ ಸಾಲಿನಲ್ಲಿ ಪದವಿ/ಡಿಪ್ಲೋಮ ತೇರ್ಗಡೆ ಹೊಂದಿದ ನಿರುದ್ಯೋಗ ಅಭ್ಯರ್ಥಿಗಳನ್ನು ಯುವನಿಧಿ ಯೋಜನೆ ಅಡಿಯಲ್ಲಿ ನೊಂದಾಯಿಸಿಕೊಳ್ಳಲು http://sevasindhugs.Karnataka.giv.in ಸೇವಾ ಸಿಂಧು ಪೋರ್ಟಲ್ ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ದಿನಾಂಕ 06/01/2025 ರಿಂದ 20/ 01/ 2025 ರ ವರಗೆ ವಿಶೇಷ ನೋಂದಣಿ ಅಭಿಯಾನವನ್ನು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಜಿಲ್ಲೆಯ ಎಲ್ಲಾ ವಿಶ್ವವಿದ್ಯಾಲಯಗಳು ಸರಕಾರಿ/ಅನುದಾನಿತ ಪದವಿ /ಡಿಪ್ಲೋಮಾ ತಾಲೂಕು ಕಚೇರಿಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಅರ್ಹ ಫಲಾನುಭವಿಗಳು ಈ ಸದಾ ವಕಾಶವನ್ನು ಉಪಯೋಗಿಸಿಕೊಂಡು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದು.

ಪದವೀಧರರಿಗೆ ಪ್ರತಿ ತಿಂಗಳು ರೂ. 3000/– ಹಾಗೂ ಡಿಪ್ಲೋಮಾ ಪದವೀಧರರಿಗೆ ರೂ. 1500/– ನಿರುದ್ಯೋಗ ಬತ್ತೆಯನ್ನು ನೀಡಲಾಗುತ್ತದೆ. ಫಲಿತಾಂಶದ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿ ಹೆಸರನ್ನು ನೋಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತದೆ.

## ಬೀಳೂರು ಗುರುಬಸವ ಪತ್ತಿನ ಸಂಘಕ್ಕೆ ಅವಿರೋಧ ಆಯ್ಕೆ ವೀರಣ್ಣ ಚರಂತಿಮಠ ಅಧ್ಯಕ್ಷ, ಮುರಿಗೆಪ್ಪ ನಾರಾ ಉಪಾಧ್ಯಕ್ಷ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.17:ನಗರದ ಪ್ರತಿಷ್ಠಿತ ಬೀಳೂರು ಗುರುಬಸವ ಪತ್ತಿನ ಸಹಕಾರಿ ಸಂಘಕ್ಕೆ ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಅಧ್ಯಕ್ಷರಾಗಿ ಹಾಗೂ ಮುರಿಗೆಪ್ಪ ನಾರಾ ಉಪಾಧ್ಯಕ್ಷರಾಗಿ ಪುನರಾಯ್ಕೆಗೊಂಡಿದ್ದಾರೆ.

ಇದಕ್ಕೂ ಮೊದಲು ನಡೆದ ನಿರ್ದೇಶಕ ಮಂಡಳಿಯ ಸದಸ್ಯರ ಆಯ್ಕೆ ನಡೆದಿದ್ದು, ಸಾಮಾನ್ಯ ಕ್ಷೇತ್ರದಿಂದ ವೀರಣ್ಣ ಚಂದ್ರಶೇಖರಯ್ಯ ಚರಂತಿಮಠ, ಮುರಿಗೆಪ್ಪ ಕಾಶಪ್ಪ ನಾರಾ, ಗುರುಬಸವ ಶಿವಮೂರ್ತಯ್ಯ ಸೂಳಿಭಾವಿ, ಚಂದ್ರಶೇಖರ ಮುರಿಗೆಪ್ಪ ಜಿಗಜಿನ್ನಿ, ಈರಣ್ಣ ನಾಗಪ್ಪ ಅಥಣಿ, ಗುರುಸಿದ್ದಪ್ಪ(ಕುಮಾರ) ಗಂಗಾಧರಪ್ಪ ಯಳ್ಳಿಗುತ್ತಿ, ಲಕ್ಷ್ಮೀನಾರಾಯಣ ಬೋರಿಲಾಲ್ ಕಾಸಟ, ಶ್ರೀಶೈಲ(ಮಹೇಶ) ವೀರಪ್ಪ ಅಂಗಡಿ, ವೀರಣ್ಣ ಬಸೆಟ್ಟಪ್ಪ ಹಲಕುರ್ಕಿ, ಪ್ರಕಾಶ ಸಂಗಣ್ಣ ರೇವಡಿಗಾರ, ಮಲ್ಲಿಕಾರ್ಜುನ ಸೋಮಣ್ಣ ಸಾಸನೂರ, ರುದ್ರಪ್ಪ ಶಿವಪ್ಪ ಅಕ್ಕಿಮರಡಿ, ಗುರುಪಾದಪ್ಪ(ವಿಜಯ) ಈರಪ್ಪ ಅಂಗಡಿ, ಹಿಂದುಳಿದ ಪ್ರವರ್ಗ ಅ ಕ್ಷೇತ್ರದಿಂದ ಅಶೋಕ ಮಲ್ಲಿಕಾಜಪ್ಪ ಸಜ್ಜನ, ಹಿಂದುಳಿದ ಪ್ರವರ್ಗ ಬ ಕ್ಷೇತ್ರದಿಂದ ಪ್ರಭಯ್ಯಾ ಮಹಾರುದ್ರಯ್ಯಾ ಸರಗಣಾಚಾರಿ, ಎಸ್.ಸಿ ಕ್ಷೇತ್ರದಿಂದ ಜಯಪ್ರಕಾಶ ಬೆಂಡಿಗೇರಿ, ಎಸ್.ಟಿ ಕ್ಷೇತ್ರದಿಂದ ರಾಜಶೇಖರ ವಿಠ್ಠಲ ನಾಯ್ಕರ, ಮಹಿಳಾ ಕ್ಷೇತ್ರದಿಂದ ಭಾಗ್ಯಶ್ರೀ ಮಲ್ಲಿಕಾರ್ಜುನ ಹಂಡಿ, ರೇಖಾ ಗುರುಬಸವ ಮೊರಬದ ಅವಿರೋಧವಾಗಿ ಆಯ್ಕೆಗೊಂಡಿದ್ದು ಅಧ್ಯಕ್ಷ, ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಎಂ.ಎಸ್.ಸಿಂಧೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.19 ರಂದು ಜಾಗೃತ್ 5ಕೆ ರನ್

ಮಲ್ಲಮ ನುಡಿ ವಾರ್ತೆ ಬಳ್ಳಾರಿ,ಜ.17:ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ನಿರ್ದೇಶನದಂತೆ ಜಿಲ್ಲಾ ಪೊಲೀಸ್ ವತಿಯಿಂದ ಮಹಿಳಾ ಮತ್ತು ಮಕ್ಕಳ ಸುರಕ್ಷತೆ, ರಸ್ತೆ ಸುರಕ್ಷತೆ, ಸೈಬರ್ ಸುರಕ್ಷತೆ ಬಗ್ಗೆ ಜಾಗೃತಿ ಹಾಗೂ ಡ್ರಗ್ಸ್ಮುಕ್ತ ಕರ್ನಾಟಕದ ನಿರ್ಮಾಣಕ್ಕಾಗಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಅಂಗವಾಗಿ ಜ.19 ರಂದು ಬೆಳಿಗ್ಗೆ 06.30 ಗಂಟೆಗೆ ನಗರದ ಮುನಿಸಿಪಲ್ ಹೈಸ್ಕೂಲ್ ಮೈದಾನದಿಂದ ಜಾಗೃತ್ 5ಕೆ ರನ್ ಆಯೋಜಿಸಲಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.